ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 101
7–10–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 101

# 68 'ಪರಿಸರ ಸ್ನೇಹಿ' ವಾಹನಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ




**ಬೆಂಗಳೂರು:** ವಿಧಾನಸೌಧದ ಮೆಟ್ಟಿಲುಗಳ ಬಳಿ ಇಂದು ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಹಾಗೂ ವಲಯ ಕಚೇರಿಗಳ ಬಳಕೆಗಾಗಿ 68 ಪರಿಸರ ಸ್ನೇಹಿ ವಿದ್ಯುತ್ ಚಾಲಿತ (ಇವಿ) ವಾಹನಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ಅರಣ್ಯ ಮತ್ತು ಪರಿಸರ ಖಾತೆ ಸಚಿವ ಈಶ್ವರ ಬಿ ಖಂಡ್ರೆ, ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಈ ವೇಳೆ ಮಾತನಾಡಿದ ಈಶ್ವರ್ ಖಂಡ್ರೆ, ಪಟಾಕಿ ಮಳಿಗೆ ಮಾಲೀಕರಿಂದ ಭಾರ ಲೋಹಯುಕ್ತ ರಾಸಾಯನಿಕ ಪಟಾಕಿ ಮಾರಾಟ ಮಾಡದಂತೆ ಮತ್ತು ಪರಿಸರ ಸ್ನೇಹಿ ಹಸಿರು ಪಟಾಕಿ ಮಾತ್ರ ಮಾರಾಟ ಮಾಡುವಂತೆ ಮುಚ್ಚಳಿಕೆ ಬರೆಸಿಕೊಳ್ಳುವಂತೆ ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿಗೆ ಸೂಚನೆ ನೀಡಿದರು. 15 ವರ್ಷ ಪೂರೈಸಿದ ಡಿಸೆಲ್ ವಾಹನಗಳನ್ನು ಬಳಕೆ ಮಾಡುವಂತಿಲ್ಲ. ಅದನ್ನು ಸ್ಕ್ರ್ಯಾಪ್ ನೀತಿಯಂತೆ ಬಳಕೆಯಿಂದ ದೂರವಿಡಬೇಕು. ಮಂಡಳಿಯಲ್ಲಿ ವಾಹನಗಳ ಕೊರತೆಯಿಂದ ಏಕ ಬಳಕೆ ಪ್ಲಾಸ್ಟಿಕ್, ವೈದ್ಯಕೀಯ ತ್ಯಾಜ್ಯ, ಇ–ತ್ಯಾಜ್ಯ ವಿಲೇವಾರಿ ಘಟಕಗಳ ಮೇಲೆ ನಿಗಾ ಇಡಲು ಮತ್ತು ಏಕ ಬಳಕೆ ಪ್ಲಾಸ್ಟಿಕ್ ತಯಾರಿಕಾ ಘಟಕ, ಮಳಿಗೆಗಳ ತಪಾಸಣೆ, ಪರಿಶೀಲನೆ ಮಾಡಲು, ಜಲ ಮೂಲಗಳ ಗುಣಮಟ್ಟ ಪರೀಕ್ಷೆ ಮಾಡಲು ಅಡ್ಡಿಯಾಗುತ್ತಿತ್ತು. ಈ ನಿಟ್ಟಿನಲ್ಲಿ 68 ಇವಿ ವಾಹನಗಳಿಗೆ ಮಂಡಳಿ ಕಳುಹಿಸಿದ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ ಎಂದರು.

ಈ ವಾಹನಗಳನ್ನು ಸದ್ಬಳಕೆ ಮಾಡಿಕೊಂಡು, ಸ್ಥಳೀಯ ಸಂಸ್ಥೆಗಳ ಸಹಯೋಗದೊಂದಿಗೆ ಪರಿಸರ ಸಂರಕ್ಷಣೆಗೆ ಪ್ರಾಮಾಣಿಕ ಪ್ರಯತ್ನ ಮಾಡುವಂತೆ ಮಂಡಳಿಯ ಅಧಿಕಾರಿಗಳಿಗೆ ಈಶ್ವರ ಖಂಡ್ರೆ ತಿಳಿಸಿದರು.

## ಜೈಪುರದ ಆಸ್ಪತ್ರೆಯೊಂದರಲ್ಲಿ ಅಗ್ನಿ ದುರಂತ

# 6 ಮಂದಿ ಸಜೀವ ದಹನ



**ಜೈಪುರ:** ರಾಜಸ್ಥಾನದ ರಾಜಧಾನಿ ಜೈಪುರದ ಆಸ್ಪತ್ರೆಯೊಂದರಲ್ಲಿ ಸಂಭವಿಸಿದ ಭಾರಿ ಅಗ್ನಿ ಅವಘಡಲ್ಲಿ 6 ರೋಗಿಗಳು ಸಜೀವ ದಹನವಾಗಿರುವ ಘಟನೆ ನಡೆದಿದೆ. ಶಾರ್ಟ್ ಕ್ರ್ಯೂಟ್‌ನಿಂದ ಅವಘಡ ಸಂಭವಿಸಿದೆ ಎನ್ನಲಾಗಿದೆ. ಹಲವಾರು ಗಂಭೀರ ರೋಗಿಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಗಿದೆ. ಸ್ಥಳದಲ್ಲಿದ್ದ ವೈದ್ಯರು, ದಾದಿಯರು ಮತ್ತು ಅಗ್ನಿಶಾಮಕ ದಳದ ತಂಡವು ಅಪಾರ ಪ್ರಯತ್ನದ ನಂತರ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು ಎಂದು ವರದಿಯಾಗಿದೆ.

ಸರ್ಕಾರಿ ಸ್ವಾಮ್ಯದ ಸವಾಯಿ ಮಾನ್ ಸಿಂಗ್ ಆಸ್ಪತ್ರೆಯಲ್ಲಿ ಈ ದುರ್ಘಟನೆ ಸಂಭವಿಸಿದೆ. ಸ್ಟೋರೇಜ್ ಪ್ರದೇಶದಲ್ಲಿ ಬೆಂಕಿ ಕಾಣಿಸಿಕೊಂಡಾಗ ನ್ಯೂರೋ ಐಸಿಯುನಲ್ಲಿ 11 ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದರು ಎಂದು ಟ್ರಾಮಾ ಸೆಂಟರ್ ಇನ್‌ಚಾರ್ಜ್ ಡಾ. ಅನುರಾಗ್ ಧಾಕಡ್ ಹೇಳಿದ್ದಾರೆ. ಮೃತರನ್ನು ಪಿಂಟು (ಸಿಕಾರ್), ದಿಲೀಪ್ (ಜೈಪುರ), ಶ್ರೀನಾಥ್, ರುಕ್ಮಿಣಿ, ಖುರ್ಮಾ (ಎಲ್ಲರೂ ಭರತ್‌ಪುರದವರು) ಮತ್ತು ಬಹದ್ದೂರ್ (ಜೈಪುರ) ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇತರ ಹದಿನಾಲ್ಕು ರೋಗಿಗಳನ್ನು ಬೇರೆ ಐಸಿಯುನಲ್ಲಿ ದಾಖಲಿಸಲಾಯಿತು, ಮತ್ತು ಎಲ್ಲರನ್ನೂ ಯಶಸ್ವಿಯಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಯಿತು ಎಂದು ಅವರು ಹೇಳಿದರು. ಬೆಂಕಿಯು ಕಟ್ಟಡದಲ್ಲಿ ಅವ್ಯವಸ್ಥೆಯನ್ನು ಸೃಷ್ಟಿಸಿತು, ಹೊಗೆ ವೇಗವಾಗಿ ಹರಡಿತು ಮತ್ತು ರೋಗಿಗಳು ಮತ್ತು ಅವರ ಕುಟುಂಬಗಳಲ್ಲಿ ಭೀತಿಯನ್ನು ಉಂಟುಮಾಡಿತು.

ಬೆಂಕಿಯಿಂದಾಗಿ ಆ ಪ್ರದೇಶದಲ್ಲಿ ಸಂಗ್ರಹಿಸಲಾಗಿದ್ದ ವಿವಿಧ ದಾಖಲೆಗಳು, ಐಸಿಯು ಉಪಕರಣಗಳು, ರಕ್ತದ ಮಾದರಿ ಟ್ಯೂಬ್‌ಗಳು ಮತ್ತು ಇತರ ವಸ್ತುಗಳು ಸುಟ್ಟುಹೋಗಿವೆ. ಅಗ್ನಿಶಾಮಕ ದಳದವರು ಬಂದಾಗ, ಇಡೀ ವಾರ್ಡ್ ಬೆಂಕಿ, ಹೊಗೆಯಿಂದ ಆವೃತವಾಗಿತ್ತು.

# ತೆಪ್ಪ ಮುಗುಚಿ ಇಬ್ಬರು ನೀರು ಪಾಲು




**ಹೊನ್ನಾಳಿ :** ಪಟ್ಟಣದ ತುಂಗಭದ್ರಾ ನದಿಯಲ್ಲಿರುವ ತಮಿಳು ಕ್ವಾರಿಯಲ್ಲಿ ತೆಪ್ಪ ಮುಗುಚಿ ಇಬ್ಬರು ತುಂಗಭದ್ರಾ ನದಿ ಪಾಲಾಗಿರುವ ದುರ್ಘಟನೆ ಸೋಮವಾರ ಬೆಳ್ಳಂ ಬೆಳಗ್ಗೆ ನಡೆದಿದೆ. ಇವರಿಬ್ಬರ ಪತ್ತೆಗಾಗಿ ಅಗ್ನಿಶಾಮಕದಳ ಸಿಬ್ಬಂಧಿಗಳು ನದಿಯಲ್ಲಿ ಶೋಧ ಕಾರ್ಯದಲ್ಲಿ ತೊಡಗಿದ್ದಾರೆ.

ತಿಪ್ಪೇಶ್(23), ಮುಕ್ತಿಯಾರ್(28) ಈ ಇಬ್ಬರ ಸಂಬಂಧಿಕರು ಸುದ್ದಿ ತಿಳಿದ ಕೂಡಲೆ ನದಿ ದಡಕ್ಕೆ ಆಗಮಿಸಿ ಪತ್ತೆಗಾಗಿ ಅಗ್ನಿಶಾಮಕದಳ ಹಾಗೂ ಪೊಲಿಸ್ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಈ ಇಬ್ಬರು ತೆಪ್ಪದ ಮೂಲಕ ನದಿಗೆ ಇಳಿದಿದ್ದು ಏಕೆ ಮರಳು ಎತ್ತಲಿಕ್ಕೋ ಅಥವಾ ಮೀನು ಹಿಡಿಯಲಿಕ್ಕೋ ಎಂಬುದು ಪೊಲೀಸರ ತನಿಖೆಯಿಂದ ತಿಳಿಯಬೇಕಾಗಿದೆ.

ಕಾರಣ : ನದಿಯಲ್ಲಿ ತೆಪ್ಪದಲ್ಲಿ ಹುಟ್ಟು ಹಾಕಿಕೊಂಡು ಬರುತ್ತಿರುವಾಗ ಚೂಪಾದ ಕಲ್ಲಿಗೆ ತೆಪ್ಪ ಬಡಿದಾಗ ತೆಪ್ಪ ಸಂಪೂರ್ಣ ಮುಳುಗಿದಾಗ ಈ ದುರ್ಘಟನೆ ಸಂಭವಿಸಿದೆ ಎಂದು ನದಿ ತೀರದಲ್ಲಿದ್ದ ಪ್ರತ್ಯೇಕ್ಷದರ್ಶಿಗಳು ತಿಳಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ. ನದಿಯಲ್ಲಿ ಹರಿಯುವ ನೀರು ತೀರ ಕಡಿಮೆಯಾಗಿದ್ದರೂ ಸಹ ನದಿಯಲ್ಲಿ ಅಲ್ಲಲ್ಲಿ 20 ರಿಂದ 30 ಅಡಿ ಆಳ ಇದೆ, ಹಾಗೂ ಸುರುಳಿಯೂ ಸಹ ಅಲ್ಲಲ್ಲಿ ಇದೆ, ತೆಪ್ಪ ಮುಗಿಚಿಕೊಂಡಿರುವುದಕ್ಕೆ ಸುಳಿಯೂ ಕಾರಣ ಇರಬಹುದೆಂದು ತಿಳಿದು ಬಂದಿದೆ. ಹರಿಹರದಿಂದ ಮುಳುಗು ತಜ್ಞರ ತಂಡ ಆಗಮನ ; ಸ್ಥಳಿಯ ಅಗ್ನಿಶಾಮಕದಳದವರು ಬೆಳಗ್ಗೆಯಿಂದಲ್ಲೂ ನಾಪತ್ತೆಯಾದ ಇಬ್ಬರು ಯುವಕರನ್ನು ಹುಡಕುತ್ತಿದ್ದರೂ ಪತ್ತೆಯಾಗದ ಕಾರಣ, ಹರಿಹರದಿಂದ ಮುಳುಗು ತಜ್ಞ ಸಾದತ್‌ಖಾನ್ ಹಾಗೂ 7 ಜನರ ತಂಡು ಹೊನ್ನಾಳಿಗೆ ಆಗಮಿಸಿ ನಾಪತ್ತೆಯಾದವರ ಶೋಧಕಾರ್ಯದಲ್ಲಿ ತೊಡಗಿದ್ದಾರೆ.

**ಮೊಕ್ಕಾಂ ;** ಸುದ್ದಿ ತಿಳಿದ ಕೂಡಲೆ ಪೊಲಿಸ್ ಇನ್ಸ್‌ಪೆಕ್ಟರ್ ಸುನಿಲ್‌ಕುಮಾರ್, 112 ಸಿಬ್ಬಂಧಿಗಳು, ಬೆಸ್ಕಾಂ ಹಾಗೂ ಅಗ್ನಿಶಾಮಕದಳದ ಅಧಿಕಾರಿಗಳು ಸಹ ಸ್ಥಳದಲ್ಲೆ ಮೊಕ್ಕಾಂ ಹೂಡಿದ್ದಾರೆ.

**ಸಂಬಂಧಿಕರ ಆಕ್ರಂಧನ :** ನದಿಯಲ್ಲಿ ತೆಪ್ಪ ಮುಗುಚಿ ನಾಪತ್ತೆಯಾದ ಬಗ್ಗೆ ವಿಷಯ ತಿಳಿದ ತಿಪ್ಪೇಶ್ ಹಾಗೂ ಮುಕ್ತಿಯಾರ್ ಅವರ ಸಂಬಂಧಿಕರು ಆಕ್ರಂಧನ ಹೇಳತೀರದು,

ಇನ್ನೂ ನೂರ್ಕಾಲ ಬದುಕಿ ಬಾಳಬೇಕಾದ ಯುವಕರು ನೀರು ಪಾಲಾಗಿರುವ ಬಗ್ಗೆ ಸ್ಥಳಕ್ಕೆ ಆಗಮಿಸಿದ ಸಾರ್ವಜನಿಕರು ಸಹ ನೊಂದುಕೊಂಡು ಮಾತನಾಡಿಕೊಳ್ಳುತ್ತಿದ್ದರು.

ಒಬ್ಬ ಆಸ್ಪತ್ರೆಯಲ್ಲಿ ಚಿಕಿತ್ಸೆ: ತೆಪ್ಪ ಮುಗುಚಿ ತಿಪ್ಪೇಶ್ ಹಾಗೂ ಮುಕ್ತಿಯಾರ್ ತುಂಗಭದ್ರಾ ನದಿ ಪಾಲಾಗಿದ್ದರೆ ಶಾಹಿಲ್ ಇಲ್ಲಿನ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ಪೊಲಿಸ್ ಅಧಿಕಾರಿಗಳು ತಿಳಿಸಿದ್ದಾರೆ.

**ಆಗ್ರಹ ;** ಹೊನ್ನಾಳಿಯ ತುಂಗಭದ್ರಾ ನದಿಯಲ್ಲಿ ಕೆಲವರು ಅಕ್ರಮವಾಗಿ ಮರಳು ಸಾಗಾಣಿಕೆ ಮಾಡುತ್ತಾರೆ, ಇದನ್ನು ಕೂಡಲೆ ಪೊಲಿಸ್ ಹಾಗೂ ಕಂದಾಯ ಅಧಿಕಾರಿಗಳು ತಡೆಯಬೇಕು.

## ವಿಶ್ವ ಹಿರಿಯ ನಾಗರಿಕರ ದಿನಾಚರಣೆ

# ಸಮಾಜಕ್ಕೆ ಹಿರಿಯರ ಮಾರ್ಗದರ್ಶನ ಅಗತ್ಯ: ದಿನೇಶ್ ಕೆ.ಶೆಟ್ಟಿ




**ದಾವಣಗೆರೆ :** ಸಮಾಜಕ್ಕೆ ಹಿರಿಯ ನಾಗರಿಕರ ಸಲಹೆ, ಸೂಚನೆ, ಮಾರ್ಗದರ್ಶನ ಅಗತ್ಯವಾಗಿದೆ. ಇಲ್ಲವಾದಲ್ಲಿ ಹಿರಿಯರ ಆದರ್ಶ ಮತ್ತು ಮೌಲ್ಯಗಳನ್ನು ಕಳೆದುಕೊಳ್ಳಬೇಕಾದ ಪರಿಸ್ಥಿತಿ ಎದುರಾಗುತ್ತದೆ ಎಂದು ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಅವರು ಅಭಿಪ್ರಾಯಪಟ್ಟರು.

ಅವರು ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕಣ ಇಲಾಖೆ ಹಾಗೂ ಇತರೆ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಸದ್ಯೋಜಾತ ಮಠದಲ್ಲಿ ಏರ್ಪಡಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಗಿಡಕ್ಕೆ ನೀರು ಹಾಕುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಈಗಿನ ಮಕ್ಕಳಿಗೆ ಆದರ್ಶ, ಮೌಲ್ಯಯುತ ಸಲಹೆಗಳು ಅಗತ್ಯವಾಗಿ ಹೇಳಿಕೊಡಬೇಕಾಗಿದೆ. ಈ ನಿಟ್ಟಿನಲ್ಲಿ ಹಿರಿಯ ನಾಗರಿಕರ ಮಾರ್ಗದರ್ಶನ ಮುಖ್ಯವಾದದ್ದು ಹಿಂದೆ ಮನುಷ್ಯನ ಆಯಸ್ಸು 100 ರಿಂದ 125 ವರ್ಷಗಳಾಗಿತ್ತು, ಆದರೆ ಇಂದಿನ ಪೀಳಿಗೆಯವರ ಆಯಸ್ಸು 65 ರಿಂದ ಗರಿಷ್ಠ 80 ವರ್ಷ ಆಗಿದೆ. ಹಿರಿಯ ನಾಗರಿಕರು ಯೋಚನೆ ಮಾಡುವುದನ್ನು ಬಿಡಬೇಕು, ಜೊತೆಗೆ ದಿನ ನಿತ್ಯದ ಬದುಕಿನಲ್ಲಿ ಕ್ರೀಡೆಯಲ್ಲಿ ತೊಡಕೊಳ್ಳಬೇಕು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಲಹೆ ನೀಡಿದರು.

ಈ ಹಿಂದೆ ಯಾವುದೇ ಪೊಲೀಸರ ರಕ್ಷಣೆ ಇಲ್ಲದೆ ಹಬ್ಬ ಆಚರಣೆ ಮಾಡುತ್ತಿದ್ದೆವು, ಆದರೆ ಇಂದು ಪೊಲೀಸ್‌ರ ಮತ್ತು ಡ್ರೋಣ್ ಕಣ್ಗಾವಲಿನಲ್ಲಿ ಹಬ್ಬಗಳ ಆಚರಣೆ ಮಾಡುವಂತಾಗಿದೆ. ನಾವು ಸೌಹಾರ್ಧತಯುತವಾಗಿ ಹಬ್ಬ ಆಚರಣೆ ಮಾಡುವ ವ್ಯವಸ್ಥೆ ಆಗಬೇಕು ಮತ್ತು ಸರ್ವರಿಗೂ ಶಿಕ್ಷಣ, ಆರೋಗ್ಯ ಸೇವೆ ಉಚಿತವಾಗಿ ನೀಡಿದಾಗ ಮಾತ್ರ ದೇಶ ಹೆಚ್ಚು ಅಭಿವೃದ್ಧಿಯಾಗಲು ಸಾಧ್ಯ ಎಂದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪರಮೇಶ್ವರ ಹೆಗಡೆ ಅವರು ಮಾತನಾಡಿ ಚಿಕ್ಕವರಿದ್ದಾಗ ಅಜ್ಜಿ, ತಾತ ಅವರುಗಳು ನಮಗೆ ಪಂಚತಂತ್ರ, ರಾಮಾಯಣ ಮತ್ತು ಮಹಾಭಾರತ ಕಥೆಗಳನ್ನು ಹೇಳುತ್ತಿದ್ದರು. ಸಾಂಸ್ಕೃತಿಕ ಕಾರ್ಯಕ್ರಮ ಯಕ್ಷಗಾನ ಕೂಟಗಳಲ್ಲಿ ಮಕ್ಕಳೊಂದಿಗೆ ಭಾಗವಹಿಸುತ್ತಿದ್ದರು. ಇದರಿಂದ ಸಂಸ್ಕೃತಿ ಹೆಚ್ಚುತಿತ್ತು, ಆದರೆ ಇಂದು ಸಹಕುಟುಂಬ ವ್ಯವಸ್ಥೆಯಿಂದ ವಿಮುಖರಾಗಿ ವಯೋವೃದ್ಧರನ್ನು ನೋಡಿಕೊಳ್ಳಲು ವೃದ್ಧಾಶ್ರಮಗಳು ಹೆಚ್ಚಾಗುತ್ತಿವೆ. ಆದರೆ ಹಿರಿಯರೊಂದಿಗೆ ಇಂದಿನ ಯುವ ಪಿಳಿಗೆಗೆ ಮಾರ್ಗದರ್ಶನ ಮುಖ್ಯವಾಗಿದೆ. ಹಿರಿಯರು ಜೊತೆಗೆ ಇಲ್ಲದ ಕಾರಣ ನಾವು ಏನು ಮಾಡಬೇಕು ಮತ್ತು ಮಾಡಬಾರದು ಎಂಬುದು ತಿಳಿ ಹೇಳುವವರು ಯಾರೂ ಇಲ್ಲವಂತಾಗಿದೆ. ಆದ್ದರಿಂದ ಹಿರಿಯರು ತಮ್ಮ ಜೀವನ ಭದ್ರತೆ, ಆರೋಗ್ಯ ಕಾಪಾಡಿಕೊಳ್ಳುವಂತೆ ತಿಳಿಸಿದರು.

ಹಿರಿಯ ವಕೀಲರಾದ ಬಳ್ಳಾರಿ ರೇವಣ್ಣ ರವರು ಕಾನೂನು ಅರಿವು ಬಗ್ಗೆ ಉಪನ್ಯಾಸ ನೀಡಿದರು. ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಮತ್ತು ಹಿರಿಯ ನಾಗರಿಕರಿಗೆ ಉಚಿತ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿತ್ತು.

ಜಿಲ್ಲಾ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಡಾ.ಕೆ.ಕೆ.ಪ್ರಕಾಶ್, ನಿವೃತ್ತ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಗುರುಮೂರ್ತಿ, ಹಿರಿಯ ವೈದ್ಯರಾದ ಡಾ. ವೀರಯ್ಯ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಯೋಗೇಂದ್ರಕುಮಾರ್ ಬಿ.ಯು, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ್ ಹಾಗೂ ಇತರರು ಉಪಸ್ಥತರಿದ್ದರು.

# ಅ.11 : ಸಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿಗತಿಗಳ ಕುರಿತು ಮಾಹಿತಿ ವಿನಿಮಯ ಕಾರ್ಯಕ್ರಮ



**ಹೊನ್ನಾಳಿ :** ತಾಲೂಕಿನ ಬಂಜಾರ (ಲಮಾಣಿ) ಸಮಾಜದ ನಾಯಕರುಗಳು, ಡಾವ್‌ಗಳು, ಕಾರಬಾರಿಗಳು, ಸಂಘದ ಮಾಜಿ ಅಧ್ಯಕ್ಷರು, ಹೊನ್ನಾಳಿ ವಿಭಾನ ಸಭಾ ವ್ಯಾಪ್ತಿಯ ತಾಲೂಕು ಮತ್ತು ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು, ಸದಸ್ಯರಿಗೆ ಸನ್ಮಾನ ಸಮಾರಂಭ ಜೊತೆಗೆ ಸಮಾಜದ ಸಮಾಜಿಕ, ಶೈಕ್ಷಣಿಕ, ರಾಜಕೀಯ ಸ್ಥಿತಿಗತಿಗಳ ಕುರಿತು ಮಾಹಿತಿ ವಿನಿಯಮ ಕಾರ್ಯಕ್ರಮವನ್ನು ಅಕ್ಟೋಬರ್ 11ರಂದು ಹಿರೇಕಲ್ಮಠದ ಜಗದ್ಗುರು ಪಂಚಾಚಾರ್ಯ ಸಮುದಾಯ ಭವನದಲ್ಲಿ ಬೆಳಗ್ಗೆ 11.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ತಾಲೂಕು ಬಂಜಾರ (ಲಮಾಣಿ) ಸೇವಾ ,ಸಂಘದ ಅಧ್ಯಕ್ಷ ರವಿನಾಯ್ಕ ತಿಳಿಸಿದರು.

ಅವರು ಸಂಘದ ಪದಾಧಿಕಾರಿಗಳೊಂದಿಗೆ ಸೋಮವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಭಾಗವಹಿ ಮಾತನಾಡಿ ಅಕ್ಟೋಬರ್ 11 ರಂದು ತಾಲೂಕು ಬಂಜಾರ (ಲಮಾಣಿ ಸೇವಾ ಸಂಘದವತಿಯಿಂದ ನಡೆಯಲಿರುವ ಈ ಕಾರ್ಯಕ್ರವನ್ನು ಉಪಸಭಾಪತಿ ರುದ್ರಪ್ಪ ಲಮಾಣಿ ಅವರು ಉದ್ಘಾಟಿಸಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸೂರಗೊಂಡನಕೊಪ್ಪದ ಮಹಾಮಠಸಮಿತಿಯ ಸದಸ್ಯರಾದ ರವಿನಾಯ್ಕ ಬಿ. ವಹಿಸಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಹೊನ್ನಾಳಿ ವಿಧಾನ ಸಭಾ ಕ್ಷೇತ್ರದ ಶಾಸಕ ಡಿ.ಜಿ. ಶಾಂತನಗೌಡ, ಕೇಂದ್ರದ ಮಾಜಿ ಸಚಿವ ಜಿ.ಎಂ.ಸಿದ್ದೇಶ್ವರ, ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ, ಬಯಲು ಸೀಮೆ ಅಭಿವೃದ್ಧಿ ಮಂಡಳಿ, ಚಿತ್ರದುರ್ಗದ ಅಧ್ಯಕ್ಷ ಎಚ್.ಬಿ.ಮಂಜಪ್ಪ, ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ್ ನಾಯ್ಕ,ಕೆ.ಪಿ.ಸಿಸಿ. ಸದಸ್ಯ ಡಾ.ಎಲ್. ಈಶ್ವರ ನಾಯ್ಕ,ರಾಜ್ಯ ಹಿಂದುಳಿದ ವರ್ಗಗಳ ಉಪಾಧ್ಯಕ್ಷ ಎಚ್.ಎ. ಉಮಾಪತಿ, ಗ್ಯಾರಂಟಿ ಯೋಜನೆಯ ನ್ಯಾಮತಿ ತಾಲೂಕು ಅಧ್ಯಕ್ಷ ಶಿವರಾಂ ನಾಯ್ಕ,ಕಾಂಗ್ರೇಸ್ ಅಧ್ಯಕ್ಷ ಎಚ್.ಬಿ.ಶಿವಯೋಗಿ, ಅಹಿಂದ ಮುಖಂಡ ಬಿ. ಸಿದ್ದಪ್ಪ, ಖ್ಯಾತ ವಕೀಲ ಅನಂತನಾಯ್ಕ, ಸ್ವಾಭಿಮಾನಿ ಬಳಕದ ರಾಜ್ಯಾಧ್ಯಕ್ಷ .ವಿನಯ್ ಕುಮಾರ್, ದಾವಣಗೆರೆ ಬಂಜಾರ ಸಂಘದ ಅಧ್ಯಕ್ಷ ನಂಜನಾಯ್ಕ, ನ್ಯಾಮತಿ ತಾಲೂಕು ಬಂಜಾರ್ ಸಂಘದ ಅಧ್ಯಕ್ಷ ಪ್ರಕಾಶ್ ನಾಯ್ಕ, ಮುಂತಾದವರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರುಗಲು, ಹಾಗೂ ಪ್ರತಿ ತಾಂಡಾದ ನಾಯಕ, ಡಾವ್, ಮತ್ತು ಕಾರಬಾರಿಗಳನ್ನು, ಮಾಜಿ ಸೈನಿಕರಾದ ಶ್ರಿನಿವಾಸ್ ನಾಯ್ಕ, ಕೃಷ್ಣನಾಯ್ಕ, ವಿವಿಧ ಪ್ರಶಸ್ತಿ ಪುರಸ್ಕೃತರಾದ ಲೋಕೋಶ್ ನಾಯ್ಕ,ಚಂದ್ರನಾಯ್ಕ, ವಿಕ್ರಮ್ ನಾಯ್ಕ,ಸಂಜುನಾಯ್ಕ, ಕೆ. ಕೃಷ್ಣನಾಯ್ಕ, ಕುಮಾರಿ ಸಿಂಧೂ ಬಾಯಿ ಇವರುಗಳನ್ನು ಕೂಡ ಸನ್ಮಾನಿಸಲಾವುದು ಎಂದು ಹೇಳಿದರು.


ಅಂದಿನ ಕಾರ್ಯಕ್ರಮದಲ್ಲಿ ಸರಿಗಮಪ ಖ್ಯಾತಿಯ ಹನುಮಂತ ಲಮಾಣಿ, ರಮೇಶ್ ಲಮಾಣಿ, ಶಹಪೂರ ವೆಂಕಟೇಶ್ ಅವರಿಗೆ ರಸಮಂಜರಿ ಕಾರ್ಯಕ್ರಮ ಕೂಡ ಏರ್ಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಸಂಘದ ಗೌರವಾಧ್ಯಕ್ಷ ರುದ್ರಾನಾಯ್ಕ, ಕಾರ್ಯದರ್ಶಿ ಕೃಷ್ಣನಾಯ್ಕ,ಉಪಾಧ್ಯಕ್ಷ ಧನರಾಜ್ ನಾಯ್ಕ, ಶಂಕರನಾಯ್ಕ, ಚೇತನ್ ಕುಮಾರ್,ಪ್ರಸನ್ನ, ವಿಠಲ ನಾಯ್ಕ ಜಿಲ್ಲಾ ಸಂಘದ ಉಪಾದ್ಯಕ್ಷ ಈಶ್ವರ ನಾಯ್ಕ, ಸಮಾಜದ ಅನೇಕ ಗಣ್ಯರು ಇದ್ದರು.

ಹೆಚ್ಚಿನ ಮಾಹಿತಿಗಾಗಿ ಸಂಘದ ಅಧ್ಯಕ್ಷ 9448085958 ಹಾಗೂ ಕಾರ್ಯದರ್ಶಿ ಮೊಬೈಲ್ ಸಂಖ್ಯೆ 9741790338, ಇವರನ್ನು ಸಂಪರ್ಕಿಸಲು ಮನವಿ ಮಾಡಿದರು.

## ದಸರಾ ಹಬ್ಬದಲ್ಲಿ ಸಂವಿಧಾನ ಬಾಹಿರ ಘೋಷಣೆ ಆರೋಪ

# ಕ್ರಮಕ್ಕೆ ಎಸ್ಪಿಗೆ ಮನವಿ



**ದಾವಣಗೆರೆ:** ದಸರಾ ಹಬ್ಬದ ಪ್ರಯುಕ್ತ ನಡೆಸಿದ ಬೈಕ್ ರ್‍ಯಾಲಿಯಲ್ಲಿ ಸಂವಿಧಾನ ಬಾಹಿರ ಘೋಷಣೆ ಕೂಗಲಾಗಿದ್ದು, ಕೂಡಲೇ ಕ್ರಮ ವಹಿಸಬೇಕೆಂದು ಆಗ್ರಹಿಸಿ ಜಿಲ್ಲಾ ಪೊಲೀಸ್ ಅಧಿಕಾರಿ ಉಮಾ ಪ್ರಶಾಂತ್ ಅವರಿಗೆ ಮುಸ್ಲಿಂ ಒಕ್ಕೂಟ ಮನವಿ ಸಲ್ಲಿಸಿದೆ.

ಇದೇ ವೇಳೆ ಒಕ್ಕೂಟದ ಸಂಚಾಲಕ ಟಿ. ಅಸ್ಗರ್ ಮಾತನಾಡಿ, ನಮ್ಮ ದೇಶದ ಸಂವಿಧಾನ ಪ್ರತಿಯೊಬ್ಬ ಪ್ರಜೆ ಮತ್ತು ಜಾತಿ, ಪಂಗಡ, ಧರ್ಮದರಿಗೆ ಸರಿಸಮಾನವಾಗಿ ಹಕ್ಕು ನೀಡಿದೆ. ಆದ್ದರಿಂದ ಇವರು ಕೂಗಿರುವ ಘೋಷಣೆ ಸಂವಿಧಾನ ವಿರೋಧಿಯಾಗಿದೆ ಎಂದು ಆರೋಪಿಸಿದರು.

ಶ್ರೀ ದುರ್ಗಾಂಬಿಕಾ ದೇವಸ್ಥಾನದ ಮುಂದೆ ದುರ್ಗ ದೌಡ್ ಹೆಸರಿನಲ್ಲಿ ನಡೆದ ಮೆರವಣಿಗೆಯಲ್ಲೂ ಹರಿತವಾದ ಶಸ್ತ್ರಾಸ್ತ್ರಗಳನ್ನು ಕೈಯಲ್ಲಿ ಹಿಡಿದುಕೊಂಡು ಸರ್ವಜನಿಕವಾಗಿ ಪ್ರದರ್ಶನ ಮಾಡಿ ಮೆರವಣಿಗೆ ಮಾಡಿದ್ದು, ಇದನ್ನು ವಿಡಿಯೋ ಮಾಡಿ ರಕ್ತ ಚರಿತ್ರೆ ಎಂಬ ಹಾಡು ಸಂಯೋಜಿಸಿ, ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟು ಸರ್ವಜನಿಕರಿಗೆ ಭಯ ಉಂಟು ಮಾಡಲಾಗಿದೆ. ಇವೆರಡು ವಿಷಗಳನ್ನು ಗಂಭೀರವಾಗಿ ಪರಿಗಣಿಸಿ ಜಿಲ್ಲಾ ಪೊಲೀಸ್ ಇಲಾಖೆ ಅಂಥವರ ವಿರುದ್ಧ ಸ್ವಯಂಪ್ರೇರಿತ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.


## ರಾಜ್ಯದಲ್ಲಿ ಕಡ್ಡಾಯ ವೈದ್ಯಕೀಯ ಸೇವೆ ಅನುಷ್ಠಾನ

# ಸರ್ಕಾರಿ ಆಸ್ಪತ್ರೆಗಳಿಗೆ 1850 ವೈದ್ಯರ ನೇಮಕ: ಸಚಿವ ದಿನೇಶ್ ಗುಂಡೂರಾವ್

**ಚಿಕ್ಕಮಗಳೂರು, ಅ.6:** ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿದ್ದ ಕಡ್ಡಾಯ ವೈದ್ಯಕೀಯ ಸೇವೆಯನ್ನು ಅನುಷ್ಠಾನಗೊಳಿಸಲಾಗಿದ್ದು, ರಾಜ್ಯದಲ್ಲಿ 1850 ಎಂಬಿಬಿಎಸ್ ವೈದ್ಯರನ್ನು ನೇಮಕ ಮಾಡಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್ ಅವರು ತಿಳಿಸಿದರು.

ತರೀಕೆರೆ ತಾಲ್ಲೂಕು ಲಕ್ಕವಳ್ಳಿ ಗ್ರಾಮದಲ್ಲಿ ಇಂದು 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈಗಾಗಲೇ ಕಡ್ಡಾಯ ವೈದ್ಯಕೀಯ ಸೇವೆ ಜಾರಿಯಲ್ಲಿದ್ದರೂ ಸಮರ್ಪಕವಾಗಿ ಅನುಷ್ಠಾನ ವಾಗಿರಲಿಲ್ಲ. ಸದನದಲ್ಲಿ ಈ ಬಗ್ಗೆ ಚರ್ಚಿಸಿ ಕಾನೂನಾತ್ಮಕವಾಗಿ ಇದ್ದ ತೊಡಕುಗಳಿಗೆ ತಿದ್ದುಪಡಿ ತರುವ ಮೂಲಕ ವ್ಯವಸ್ಥೆ ಸರಿಪಡಿಸಲಾಗಿದೆ. ಅಂತೆ–ಯೇ ಖಾಲಿ ಇರುವ ಹುದ್ದೆಗಳಿಗೆ ವೈದ್ಯರನ್ನು ನಿಯೋಜನೆ ಮಾಡಲಾಗಿದೆ ಎಂದು ಹೇಳಿದರು.

ಕಟ್ಟಡ ನಿರ್ಮಾಣವಾದರೆ ಸಾಲದು, ಅಗತ್ಯವಾಗಿ ಅದಕ್ಕೆ ಬೇಕಾಗಿರುವ ಅಗತ್ಯ ಸಲಕರಣೆಗಳು, ವೈದ್ಯರು, ತಾಂತ್ರಿಕ ಸಿಬ್ಬಂದಿ ಹಾಗೂ ಇತರ ವೈದ್ಯಕೀಯ ಸಿಬ್ಬಂದಿಯ ಅವಶ್ಯಕತೆ ಇದ್ದು, ಇಲಾಖೆಯಿಂದ ಸಾಧ್ಯವಾಗುವ ಎಲ್ಲ ಕ್ರಮ ಕೈಗೊಂಡು ಹುದ್ದೆಗಳನ್ನು ಭರ್ತಿ ಮಾಡುವ ಕಾರ್ಯ ಕೈಗೊಳ್ಳಲಾಗುವುದು. ಈಗಾಗಲೇ ಸಾಕಷ್ಟು ಉಪಕರಣಗಳನ್ನು ಒದಗಿಸಲು ಮಂಜೂರಾತಿ ನೀಡಲಾಗಿದೆ. ಹೆಚ್ಚುವರಿಯಾಗಿ ಅಗತ್ಯವಿರುವ ಉಪಕರಣಗಳನ್ನು ಒದಗಿಸಲು ಹಣಕಾಸಿನ ವ್ಯವಸ್ಥೆಯನ್ನು ಶೀಘ್ರದಲ್ಲೇ ಕಲ್ಪಿಸುವುದಾಗಿ ತಿಳಿಸಿದರು. ಇದರ ಜೊತೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿಯಿಂದ ಅಗತ್ಯ ಅನುದಾನ ಒದಗಿಸಲು ಅವಕಾಶವಿದ್ದು, ಈ ಬಗ್ಗೆ ಗಮನ ಹರಿಸುವಂತೆ ಸೂಚಿಸಿದರು.



ಇಂದು ಆರೋಗ್ಯ ಮತ್ತು ಶಿಕ್ಷಣ ವ್ಯವಸ್ಥೆ ಸಮರ್ಪಕವಾಗಿದ್ದರೆ ಮಾತ್ರ ಉತ್ತಮ ಸಮಾಜ ನಿರ್ಮಿಸಲು ಸಾಧ್ಯ. ಇಂದು ಪ್ರತಿಯೊಬ್ಬರಲ್ಲೂ ಆರೋಗ್ಯದ ಬಗ್ಗೆ ಚಿಂತನೆ ಹೆಚ್ಚಾಗಿದೆ. ಯಾವುದೇ ಕುಟುಂಬದ ಆಧಾರಸ್ತಂಭವಾಗಿರುವ ವ್ಯಕ್ತಿಗೆ ಆರೋಗ್ಯ ಸಮಸ್ಯೆಯಾದಲ್ಲಿ ಇಡೀ ಕುಟುಂಬವೇ ಅದರ ಪರಿಣಾಮ ಎದುರಿಸಬೇಕಾಗುತ್ತದೆ. ಜೊತೆಗೆ ಚಿಕಿತ್ಸಾ ವೆಚ್ಚವೂ ದುಬಾರಿಯಾಗಿರುವುದರಿಂದ ಆ ಬಗೆಗಿನ ಭಯ ಜನರಲ್ಲಿ ಆವರಿಸುವುದು ಸಹಜ. ಈ ನಿಟ್ಟಿನಲ್ಲಿ ಜನರಿಗೆ ಸಾಧ್ಯವಾದಷ್ಟು ಹಂತದಲ್ಲಿ ಉಚಿತವಾಗಿಯೇ ಆರೋಗ್ಯ ಸೇವೆಯನ್ನು ಕಲ್ಪಿಸಲು ಒಂದು ಕಡೆ ಸರ್ಕಾರ ಪ್ರಯತ್ನ ನಡೆಸುತ್ತಿದೆ. ಎಲ್ಲವನ್ನೂ ಸರ್ಕಾರದಿಂದ ಪೂರೈಸಲು ಸಾಧ್ಯವಾಗದು. ಕೆಲವೊಮ್ಮೆ ಖಾಸಗಿ ವ್ಯವಸ್ಥೆಯನ್ನು ಅವಲಂಬಿಸುವ ಪರಿಸ್ಥಿತಿ ಇರಬಹುದು. ವೈದ್ಯರ ಕೊರತೆ ನೀಗುವುದರ ಜೊತೆಗೆ ಅಗತ್ಯ ಔಷಧಗಳು ದೊರೆಯುವಂತಾಗಬೇಕು. ಈ ಕೊರತೆ ನೀಗಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ. ಆಯಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಈ ಬಗ್ಗೆ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದರು. ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಆರಂಭಿಸಿ ತಾಲ್ಲೂಕು ಆಸ್ಪತ್ರೆಗಳವರೆಗೆ ಔಷಧಗಳ ಲಭ್ಯತೆ ಬಗ್ಗೆ ಗಮನ ಹರಿಸಲಾಗುತ್ತಿದೆ. ಸರ್ಕಾರದಿಂದ ಔಷಧಿ ಪೂರೈಕೆಯಾಗದೇ ಇದ್ದಲ್ಲಿ ಇಲಾಖೆಯ ಹಣದಲ್ಲಿ ಖರೀದಿಸಿ ರೋಗಿಗಳಿಗೆ ಒದಗಿಸಲು ಸೂಚನೆ ನೀಡಿರುವುದಾಗಿ ಹೇಳಿದರು.

ಈ ನಡುವೆ ತಜ್ಞವೈದ್ಯರ ನೇಮಕ ವಿಚಾರ ಈಗಾಗಲೇ ನ್ಯಾಯಾಲಯದಲ್ಲಿದೆ. ಹಿಂದಿನ ವರ್ಷ ನೀಡಿದ್ದ ತಡೆಯಾಜ್ಞೆಯನ್ನು ತೆರವುಗೊಳಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ನ್ಯಾಯಾಲಯದಲ್ಲಿ ಈ ಪ್ರಕರಣಕ್ಕೆ ಪರಿಹಾರ ದೊರೆಯಲಿದ್ದು, ಆ ಹುದ್ದೆಗಳಿಗೆ ಕೂಡ ನೇಮಕ ಮಾಡಿ ಕಡ್ಡಾಯ ವೈದ್ಯಕೀಯ ಸೇವೆಯ ವ್ಯಾಪ್ತಿಗೆ ಒಳಪಡಿಸಲಿರುವುದಾಗಿ ತಿಳಿಸಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ಫಿಟ್ ನೆಸ್ ಮತ್ತು ತೂಕ ನಷ್ಟ ಕಾರ್ಯಕ್ರಮಗಳು ನೀವು ಒಳ್ಳೆಯ ದೇಹರಚನೆ ಹೊಂದಲು ಸಹಾಯ ಮಾಡುತ್ತದೆ. ಇಂದು ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ, ಏಕೆಂದರೆ ಮನೆಯ ಯಾವುದೇ ಹಿರಿಯ ಸದಸ್ಯ ಇಂದು ನಿಮಗೆ ಹಣವನ್ನು ನೀಡಬಹುದು. ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.ನೀವು ನಿಮ್ಮ ಪ್ರೀತಿಪಾತ್ರರನ್ನು ಅವಳ ಹಿಂದಿನ ಉದಾಸೀನತೆಯನ್ನು ಮನ್ನಿಸುವ ಮೂಲಕ ನಿಮ್ಮ ಜೀವನವನ್ನು ಮೌಲ್ಯಯುತವಾಗಿಸುತ್ತೀರಿ.

### ವೃಷಭ ರಾಶಿ

ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ.

### ಮಿಥುನ ರಾಶಿ

ಒಬ್ಬ ಆಧ್ಯಾತ್ಮಿಕ ವ್ಯಕ್ತಿ ಆಶೀರ್ವಾದ ಮಾಡುತ್ತಾರೆ ಮತ್ತು ಮನಸ್ಸಿನ ಶಾಂತಿ ತರುತ್ತಾರೆ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ. ನಿಮ್ಮ ಮಗುವಿನ ಒಂದು ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಆಮಂತ್ರಣ ಸಂತೋಷದ ಮೂಲವಾಗಬಹುದು.

### ಕರ್ಕ ರಾಶಿ

ಸ್ವಯಂ ಸುಧಾರಣೆಯ ಯೋಜನೆಗಳು ಒಂದಕ್ಕಿಂತ ಹೆಚ್ಚು ರೀತಿಯಲ್ಲಿ ಫಲ ನೀಡುತ್ತವೆ – ನಿಮ್ಮ ಬಗ್ಗೆ ನಿಮಗೇ ಒಳ್ಳೆಯದೆನಿಸುತ್ತದೆ ಮತ್ತು ವಿಶ್ವಾಸ ಮೂಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತಿದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ. ಮನೆಯ ಸದಸ್ಯರೊಬ್ಬರ ವರ್ತನೆಯಿಂದ ನೀವು ತೊಂದರೆಗೊಳಗಾಗಬಹುದು. ನೀವು ಅವರೊಂದಿಗೆ ಮಾತನಾಡುವ ಅಗತ್ಯವಿದೆ. ಪ್ರಣಯಕ್ಕೆ ಒಳ್ಳೆಯ ದಿನ. ನಿಮ್ಮ ಶ್ರಮ ಕೆಲಸದಲ್ಲಿ ಇಂದು ಫಲ ನೀಡುತ್ತದೆ.

### ಸಿಂಹ ರಾಶಿ

ಕ್ರೀಡೆಗಳು ಸಾರ್ವಕಾಲಿಕ ಯೌವನದ ರಹಸ್ಯವಾಗಿದ್ದರಿಂದ ಯಾವುದಾದರೂ ಆಟಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಕನ್ಯಾ ರಾಶಿ

ಕಣ್ಣಿನ ಪೋರೆ ರೋಗಿಗಳಿಗೆ ಧೂಮಪಾನವು ಅವರ ಕಣ್ಣುಗಳಿಗೆ ಮತ್ತಷ್ಟು ಹಾನಿಯುಂಟುಮಾಡಬಹುದಾದ್ದರಿಂದ ಅವರು ಕಲುಷಿತ ಪರಿಸರದಲ್ಲಿ ಹೋಗಬಾರದು. ಸಾಧ್ಯವಾದರೆ ಸೂರ್ಯನ ಬೆಳಕಿಗೆ ಅತಿಯಾದ ಒಡ್ಡಿಕೊಳ್ಳುವಿಕೆಯನ್ನು ತಪ್ಪಿಸಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಥಿಯೇಟರ್ ಅಥವಾ ನಿಮ್ಮ ಸಂಗಾತಿಯ ಜೊತೆಗಿನ ಊಟ ನಿಮ್ಮನ್ನು ಒಂದು ಶಾಂತವಾದ ಮತ್ತು ಅದ್ಭುತ ಲಹರಿಯಲ್ಲಿರಿಸುವಂತೆ ತೋರುತ್ತದೆ.

### ತುಲಾ ರಾಶಿ

ನೀವು ಬಹಳ ವಿಚಿತ್ರವಾದ ಪರಿಸ್ಥಿತಿಯಲ್ಲಿ ಸಿಲುಕಿದರೂ ಅದನ್ನು ಎದುರಿಸಲು ನಿಮ್ಮ ಇಚ್ಛಾಶಕ್ತಿ ಇಂದು ಸಹಾಯ ಮಾಡಬಹುದು. ಒಂದು ಅತ್ಯಂತ ಭಾವನಾತ್ಮಕ ನಿರ್ಧಾರ ಕೈಗೊಳ್ಳುವಾಗ ನೀವು ಸ್ತಿಮಿತ ಕಳೆದುಕೊಳ್ಳಬಾರದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಕೌಟುಂಬಿಕ ಜೀವನ ಸರಾಗವಾಗಿ ನಡೆಯುತ್ತಿರುವಂತೆ ತೋರುತ್ತದೆ ಮತ್ತು ನಿಮ್ಮ ಯೋಜನೆಗಳಿಗೆ ಪೂರ್ಣ ಬೆಂಬಲವನ್ನು ನೀವು ನಿರೀಕ್ಷಿಸಬಹುದು.

### ವೃಶ್ಚಿಕ ರಾಶಿ

ತಂದೆಯು ನಿಮ್ಮನ್ನು ಆಸ್ತಿಯ ಉತ್ತರಾಧಿಕಾರಿತ್ವದಿಂದ ತಪ್ಪಿಸಬಹುದು. ಆದರೆ ಧೃತಿಗೆಡಬೇಡಿ. ಅಭ್ಯುದಯ ಮನಸ್ಸಿಗೆ ಮುದ ನೀಡಿದರೆ ಅಭಾವ ಅದನ್ನು ಬಲಗೊಳಿಸುತ್ತದೆಂದು ನೆನಪಿಡಿ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ.

### ಧನು ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನೀವು ಬಯಸುವ ಲ್ಲಾ ಗಮನವನ್ನೂ ನೀವು ಪಡೆಯುವ ಒಳ್ಳೆಯ ದಿನ ನಿಮ್ಮ ಮನಸ್ಸಿನಲ್ಲಿ ಅನೇಕ ವಿಷಯಗಳಿರುತ್ತವೆ ಹಾಗೂ ನೀವು ಯಾವುದನ್ನು ಅನುಸರಿಸಬೇಕೆನ್ನುವ ಸಮಸ್ಯೆ ಹೊಂದಿರುತ್ತೀರಿ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಅರ್ಹ ನೌಕರರಿಗೆ ಬಡ್ತಿ ಅಥವಾ ಆರ್ಥಿಕ ಲಾಭ.

### ಮಕರ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಸಮಯ ಮತ್ತು ಹಣದ ಕಾತರ ನೀವು ಮಾಡಬೇಕು ಇಲ್ಲದಿದ್ದರೆ ಮುಂಬರುವ ಸಮಯ ತೊಂದರೆಗಳಿಂದ ತುಂಬಿರಬಹುದು ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು, ನೀವು ನಿಮ್ಮ ಪ್ರಿಯತಮೆ ನಿಮ್ಮನ್ನು ಎಷ್ಟು ಪ್ರೀತಿಸುತ್ತಾರೆಂದು ತಿಳಿದುಕೊಳ್ಳುತ್ತೀರಿ.

### ಕುಂಭ ರಾಶಿ

ಕೆಲವು ಮಾನಸಿಕ ಒತ್ತಡಗಳ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ

### ಮೀನ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ. ಕೆಲವರಿಗೆ ಸುಂದರ ಉಡಗೊರೆಗಳು ಮತ್ತು ಹೂಗಳಿಂದ ತುಂಬಿದ ಪ್ರಣಯದ ಸಂಜೆ.

## ಪ್ರಸಕ್ತ ಸಾಲಿನ ಮಳೆಯಿಂದ ಆದ ನಷ್ಟದ ವರದಿ ಸರ್ಕಾರಕ್ಕೆ



**ದಾವಣಗೆರೆ :** ಪ್ರಸಕ್ತ ವರ್ಷದ ಮುಂಗಾರು ಮಳೆಯಿಂದ ಹಾನಿಯಾದ ಬೆಳೆಪ್ರದೇಶ, ಕಟ್ಟಡ, ಇನ್ನಿತರೆ ನಷ್ಟದ ಕುರಿತು ಸಂಪೂರ್ಣ ವರದಿ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಸೂಚಿಸಿದರು.

ಶನಿವಾರ ಮಳೆಯಿಂದ ಹಾನಿಗೊಳಗಾದ ಬಗ್ಗೆ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೇಂದ್ರ ಸರ್ಕಾರದ ಎನ್.ಡಿ.ಆರ್.ಎಫ್ ನಿಂದ ಕಳೆದ ಬಾರಿ ಜಿಲ್ಲೆಯಲ್ಲಿ ಆದ ಅನಾವೃಷ್ಠಿಗೆ ಬಿಡುಗಡೆಯಾದ ಅನುದಾನಕ್ಕೆ ತಕ್ಕ ನಿಖರ ಮಾಹಿತಿಯನ್ನು ನೀಡಬೇಕು. ಪ್ರಸಕ್ತ ಸಾಲಿನಲ್ಲಿ ಹಣ ಸದ್ಬಳಕೆಯಾಗುವ ನಿಟ್ಟಿನಲ್ಲಿ ಅಧಿಕಾರಿಗಳು ಜಾಗೃತವಾಗಿ ಮತ್ತು ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಬೇಕೆಂದರು.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ಇದರಿಂದ ಕೃಷಿ, ತೋಟಗಾರಿಕೆ, ಅಂಗನವಾಡಿ, ಶಾಲಾ ಕೊಠಡಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳ, ವಿದ್ಯುತ್ ಕಂಬ,

ವಿದ್ಯುತ್ ಪರಿವರ್ತಕ, ರಸ್ತೆ, ಕೆರೆ, ಸೇತುವೆಗಳು ಸೇರಿದಂತೆ ಕುಡಿಯುವ ನೀರಿನ ಪೈಪ್ ಲೈಪ್ ಗಳು ಹಾನಿಯಾಗಿವೆ. ಈ ಕುರಿತು ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಂಡಗಳನ್ನು ರಚಿಸಿ, ಪ್ರತಿ ತಂಡದಲ್ಲಿ ಒಬ್ಬ ತಂತ್ರಜ್ಞರನ್ನು ನಿಯೋಜಿಸಿ, ಹಾನಿಯಾದ ವಿವರವನ್ನು ಜಿ.ಪಿ.ಎಸ್ ಆಧಾರಿತ ಫೋಟೋದೊಂದಿಗೆ ನಿಖರವಾದ ವರದಿಯನ್ನು 3 ದಿನಗಳೊಳಗಾಗಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಗಡುವು ನೀಡಿದರು.

ಜಿಲ್ಲೆಯಾದ್ಯಂತ ಪ್ರಸಕ್ತ ವರ್ಷದಲ್ಲಿ ಸುರಿದ ಅಕಾಲಿಕ ಮಳೆಗೆ ವಿವಿಧ ಇಲಾಖೆ ವ್ಯಾಪ್ತಿಗೆ ಒಳಪಡುವ ಸಾಕಷ್ಟು ಪ್ರಮಾಣದಲ್ಲಿ ಹಾನಿಯಾಗಿದೆ. ಆದ್ದರಿಂದ ಕೇಂದ್ರ ಸರ್ಕಾರಕ್ಕೆ ಅಂದಾಜು 50 ರಿಂದ 100 ಕೋಟಿ ಪ್ರಸ್ತಾವನೆ ಸಲ್ಲಿಸಲು ಯೋಜನೆ ರೂಪಿಸಿಕೊಳ್ಳಲಾಗಿದೆ. ಆದ್ದರಿಂದ ತಾವೆಲ್ಲರು ಕಟ್ಟಡ, ಹಾನಿ ಆಗಿರುವ ಬಗ್ಗೆ ಎನ್.ಡಿ.ಆರ್.ಎಫ್ ಗೆ ಪ್ರಸ್ತಾವನೆಯನ್ನು

ಸಲ್ಲಿಸಬೇಕಾಗಿರುವುದರಿಂದ ಮೂರು ದಿನಗಳೊಳಗಾಗಿ ಮಳೆಯಿಂದ ಆದ ಹಾನಿಯ ಬಗ್ಗೆ ಪ್ರಸ್ತಾವನೆಯನ್ನು ಇಲಾಖೆಯ ಮುಖ್ಯಸ್ಥರು ಸಲ್ಲಿಸಬೇಕು. ವಿಳಂಬವಾದಲ್ಲಿ ಅಥವಾ ಕರ್ತವ್ಯ ಲೋಪವಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನೆ ನೇರ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಲ್ಲಿ 104 ಕಿ.ಮೀ ರಸ್ತೆ ದುರಸ್ತಿಗೆ ಅನುದಾನ ಬಿಡುಗಡೆಯಾಗಿದ್ದು ಕೂಡಲೇ ದುರಸ್ತಿ ಕಾರ್ಯ ಆರಂಭಿಸಲಾಗುವುದು. ಮಳೆಯಿಂದ ಹಾನಿಯಾಗಿದ್ದನ್ನು ದುರಸ್ತಿ ಮಾಡಿದ ಬಗ್ಗೆ ಮತ್ತು ಹಾನಿಯಾಗಿರುವ ಬಗ್ಗೆ ಪ್ರತ್ಯೇಕವಾಗಿ ವರದಿ ನೀಡಬೇಕು. ಮಳೆಗೆ ಮೊದಲು 57 ಕೆರೆ ಒಡಲು ತುಂಬಿಸಲಾಗಿತ್ತು. ಹಿಂಗಾರಿನಲ್ಲಿ ಸುರಿದ ಮಳೆಗೆ ಕೆರೆಗಳ ಕಟ್ಟೆ, ಕೋಡಿ ಒಡೆದು ಶಿಥಿಲಾವಸ್ಥೆಗೆ ತಲುಪಿರುವ ಕುರಿತು ಸಮಗ್ರವಾಗಿ ಪರಿಶೀಲಿಸಿ ವರದಿ ನೀಡಬೇಕು ಎಂದರು.

ನಗರದ ಪ್ರದೇಶದಲ್ಲಿ ಅನಧಿಕೃತ ಹಂದಿ ಸಾಕಾಣಿಕೆ ಮಾಡಿ ನಗರ ಸೌಂದರ್ಯ ಹಾಳು ಮಾಡುವವರ ವಿರುದ್ಧ ಮತ್ತು ಬಿಡಾಡಿ ದನಗಳಿಂದ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿದ್ದು ಸಂಬಂಧಿಸಿದವರ ಮಾಲೀಕರ ವಿರುದ್ಧ ನಿರ್ಧಾಕ್ಷಿಣ್ಯವಾಗಿ ಕಾನೂನು ಕ್ರಮವಹಿಸಲಾಗುವುದು. ನಗರದಲ್ಲಿ ಸ್ವಚ್ಚತೆಯನ್ನು ಕಾಪಾಡುವುದು ನಮ್ಮ-ನಿಮ್ಮೆಲ್ಲರ ಹೊಣೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ ವಿಠಲರಾವ್, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ , ಜಿಲ್ಲಾ ಪಂಚಾಯಿತ್ ಉಪ ಕಾರ್ಯದರ್ಶಿ ಮಮತಾ ಹೊಸಗೌಡರ್ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ

**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕ ದಿನಾಚರಣೆ ಕಾರ್ಯಕ್ರಮವನ್ನು ಅ.09 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಏರ್ಪಡಿಸಲಾಗಿದೆ.ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಹಾಗೂ ಬಳ್ಳಾರಿ ಉಸ್ತುವಾರಿ ಸಚಿವರಾದ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್, ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ ಹೆಚ್.ಎಂ ಅವರು ತಿಳಿಸಿದ್ದಾರೆ.

## ವ್ಯಕ್ತಿಗಿಂತ ವ್ಯಕ್ತಿತ್ವ ದೊಡ್ಡದು, ವ್ಯಕ್ತಿತ್ವಕ್ಕೆ ವ್ಯಕ್ತಿಯನ್ನು ಗೆಲ್ಲುವ ಶಕ್ತಿ



**ಹಾಸನ:** ವ್ಯಕ್ತಿಗಿಂತ ವ್ಯಕ್ತಿತ್ವ ದೊಡ್ಡದು, ವ್ಯಕ್ತಿತ್ವಕ್ಕೆ ವ್ಯಕ್ತಿಯನ್ನು ಗೆಲ್ಲುವ ಶಕ್ತಿ ಇರುತ್ತದೆ ಎಂದು ಮಂಡ್ಯ ಜಿಲ್ಲೆಯ ಜಿಲ್ಲಾಧಿಕಾರಿ ಡಾ. ಕುಮಾರ್ ಅಭಿಪ್ರಾಯಪಟ್ಟರು.

ತಾಲೂಕಿನ ಬಿಡಾರದಹಳ್ಳಿ ಗ್ರಾಮದಲ್ಲಿ ನಗರದ ಎಂ.ಜಿ. ರಸ್ತೆಯಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್.ಎಸ್.ಎಸ್. ಘಟಕದ ವತಿಯಿಂದ ಶನಿವಾರದಿಂದ ಹಮ್ಮಿಕೊಂಡಿರುವ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸಾಮಾಜಿಕ ಪ್ರಜ್ಞೆ, ನಾಡನುಡಿಯ ಬಗ್ಗೆ ಅಭಿಮಾನ ದೇಶಾಭಿಮಾನ, ಸೇವಾ ಮನೋಭಾವ ಮತ್ತು ಸಾಮಾಜಿಕ ಕಳಕಳಿ ವಿದ್ಯಾರ್ಥಿ ದೆಸೆಯಲ್ಲೇ ಮನಸ್ಸಿನಲ್ಲಿ ಭದ್ರವಾಗಿ ಬೇರೂರಬೇಕು. ಇದು ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಗಳಿಂದ ಸಾಧ್ಯ. ಶಿಕ್ಷಣಕ್ಕೆ ಪೂರಕವಾದ ಇಂತಹ ಯೋಜನೆಗಳು ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಕೊಡುಗೆ ನೀಡುತ್ತದೆ ಎಂದು ತಿಳಿಸಿದರು.

ಬೂದೇಶ್ವರ ಮಠದ ಧರ್ಮದರ್ಶಿ ತಮ್ಮಣ್ಣಗೌಡ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳಲ್ಲಿ ಪಠ್ಯೇತರ ಚಟುವಟಿಕೆ ಕುರಿತು ಅರಿವು ಶಾಂತಿಪಾಲನೆ ಶಿಸ್ತು ಸಂಯಮ ಕಲಿಸುವ ಕಾರ್ಯಕ್ರಮ. ಉನ್ನತ ಶಿಕ್ಷಣದ ಜೊತೆ ವಿದ್ಯಾರ್ಥಿಗಳಿಗೆ ಉನ್ನತ ಚಿಂತನೆಯು ಮುಖ್ಯ. ಬೂದೇಶ್ವರ ಮಠ ಹಲವಾರು ವರ್ಷಗಳಿಂದ ಈ ಹಿಂದೆ ನಡೆದ ಎಲ್ಲಾ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಗಳಿಗೆ ಬೆಂಬಲವನ್ನು ನೀಡುತ್ತಾ ಬಂದಿದೆ ಹಾಗೆಯೇ ಮುಂದೆಯೂ ನೀಡುತ್ತೇವೆ. ಬೂದೇಶ್ವರ ಮಠ ಎಂದಿಗೂ ಸೇವಾ ಯೋಜನೆಗಳಿಗೆ ತನ್ನ ಬೆಂಬಲವನ್ನು ನೀಡುತ್ತದೆ ಎಂದರು.

ಬೂದೇಶ್ವರ ಮಠದ ಮಾಜಿ ಧರ್ಮದರ್ಶಿ ಮೂರ್ತಣ್ಣ ಮಾತನಾಡಿ, ಗ್ರಾಮದಲ್ಲಿ ಲಭ್ಯವಿರುವ ಎಲ್ಲಾ ಸೌಲಭ್ಯಗಳನ್ನು ಬಳಸಿಕೊಂಡು ಮೊಬೈಲ್‌ಗಳಿಂದ ವಿದ್ಯಾರ್ಥಿಗಳು ದೂರವಿದ್ದು ಗ್ರಾಮೀಣರಂತೆಯೇ ಬದುಕು ನಡೆಸಬೇಕು ಎಂದು ಕರೆಕೊಟ್ಟರು.

ಹಾಸನ ವಿಶ್ವವಿದ್ಯಾನಿಲಯದ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಸಂಯೋಜನಾಧಿಕಾರಿ ಯೋಗೇಶ್ ಮಾತನಾಡಿ, ರಾಷ್ಟ್ರೀ ಗಳಾದ ಸೇವಾ ಯೋಜನೆ ದೇಶಕ್ಕೆ ಮಹಾತ್ಮ ಗಾಂಧೀಜಿಯವರ ಅದ್ಭುತ ಕೊಡುಗೆ ಅಂದು ಕೇವಲ 400 ಜನರಿಂದ ಪ್ರಾರಂಭವಾದ ಇದು ಇಂದು 40 ಕೋಟಿ ಸದಸ್ಯರನ್ನು ರಾಷ್ಟ್ರಾದ್ಯಂತ ಹೊಂದಿದ್ದು, ಸೇವೆಯೇ ಪರಮಧರ್ಮ ಎಂದು ಅಭಿಪ್ರಾಯಪಟ್ಟರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಜಿ. ಕವಿತಾ ಮಾತನಾಡಿ, ಶಿಬಿರಾರ್ಥಿಗಳು ಏಳು ದಿವಸಗಳ ಕಾಲ ಪುಣ್ಯಕ್ಷೇತ್ರದಲ್ಲಿದ್ದು ಇಲ್ಲಿನ ಸೇವೆ ಮಾಡಲು ಅವಕಾಶವನ್ನು ಪಡೆದಿರುವುದು ನಿಜಕ್ಕೂ ಖುಷಿಯ ವಿಚಾರ. ಈ ಊರಿನ ಹಸಿರು ಮತ್ತು ಪ್ರಶಾಂತತೆ ನಿಜಕ್ಕೂ ಅದ್ಭುತ. ಒಂದೇ ಸ್ಥಳದಲ್ಲಿ ಏಳು ದಿನಗಳ ಕಾಲ ವಿವಿಧ ಸಾಂಸ್ಕೃತಿಕ ಹಿನ್ನೆಲೆಯಿಂದ ಬಂದಿರುವ ನೂರಕ್ಕೂ ಹೆಚ್ಚು ವಿದ್ಯಾರ್ಥಿನಿಯರು ವಾಸವಿರುವುದು ಪರಸ್ಪರ ಹೊಂದಾಣಿಕೆ0ಯೊಂದಿಗೆ ಬಾಳುವುದನ್ನು ಕಲಿಸುತ್ತದೆ. ಹೀಗೆ ಸೌಹಾರ್ದದಿಂದ ಬಾಳುವುದು ಇಂದಿನ ಸಮಾಜದಲ್ಲಿ ಬಹಳ ಮುಖ್ಯವಾದಂತಹ ಕೌಶಲ್ಯ. ಈ ಶಿಬಿರ ನಿಮಗೆ ಇದನ್ನು ಕಲಿಸುತ್ತದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶಿಬಿರಾರ್ಥಿಗಳಿಗೆ ರಾಷ್ಟ್ರೀಯ ಸೇವಾ ಯೋಜನೆಯ ಪ್ರತಿಜ್ಞಾವಿಧಿಯನ್ನು ಬೋಧಿಸಲಾಯಿತು.

ಬೂದೇಶ್ವರ ಮಠದ ಕಾರ್ಯದರ್ಶಿ, ಗುರುರಾಜ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಗುರು, ನಿಟ್ಟೂರು ಗ್ರಾಮದ ಎಸ್. ಕೆ. ರಘುನಾಥ್, ವೆಂಕಟೇಶ್, ಭರತ್, ನಾಯಕ್, ಚಂದ್ರಶೇಖರ್, ನಟರಾಜ್, ಮಹಿಳಾ ಕಾಲೇಜಿನ ವ್ಯವಸ್ಥಾಪಕ ಹರ್ಷ, ಕಾಲೇಜಿನ ಅಧ್ಯಾಪಕರು ಹಾಗೂ ವಿದ್ಯಾರ್ಥಿನಿಯರು ಹಾಜರಿದ್ದರು.

## ಚನ್ನಗಿರಿ ಕೆ.ಎಸ್.ಆರ್.ಟಿ.ಸಿ ನೂತನ ಬಸ್ ಘಟಕದ ಉದ್ಘಾಟನಾ ಸಮಾರಂಭ

**ದಾವಣಗೆರೆ :** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ದಾವಣಗೆರೆ ವಿಭಾಗದ ವತಿಯಿಂದ ಅಕ್ಟೋಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ಚನ್ನಗಿರಿ (ಅಜ್ಜಿಹಳ್ಳಿ) ನೂತನ ಬಸ್ ಘಟಕದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಚನ್ನಗಿರಿ ಶಾಸಕರಾದ ಬಸವರಾಜು.ವಿ.ಶಿವಗಂಗಾ ಅಧ್ಯಕ್ಷತೆ ವಹಿಸುವರು. ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಘನ ಉಪಸ್ಥಿತರಾಗಿರುವರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಗುಬ್ಬಿ ಕ್ಷೇತ್ರದ ಶಾಸಕರಾದ ಎಸ್.ಆರ್ ಶ್ರೀನಿವಾಸ್ ನೂತನ ಬಸ್ ಮಾರ್ಗಗಳ ಉದ್ಘಾಟನೆಯನ್ನು ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ವಿಧಾನ ಪರಿಷತ್ ಸದಸ್ಯರಾದ ಡಿ.ಎಸ್ ಅರುಣ್, ಡಾ.ಧನಂಜಯ ಸರ್ಜಿ, ಬಯಲು ಸೀಮೆ ಅಭಿವೃದ್ದಿ ಮಂಡಳಿಯ ಅಧ್ಯಕ್ಷರಾದ ಹೆಚ್.ಬಿ.ಮಂಜಪ್ಪ, ಕರ್ನಾಟಕ ಜೀವ ವೈವಿಧ್ಯ ನಿಗಮ ಮಂಡಳಿಯ ಅಧ್ಯಕ್ಷರಾದ ವಡ್ನಾಳ್ ಜಗದೀಶ್, ಕ.ರಾ.ರ.ಸಾ.ನಿಗಮದ ಉಪಾಧ್ಯಕ್ಷರಾಧ ಮಹಮ್ಮದ್ ರಿಜ್ವಾನ್ ನವಾಬ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನ ಊರು.ಟಿ.ಬಸವರಾಜ್,ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಸಿ.ಹಚ್ ಶ್ರೀನಿವಾಸ್, ಅಜ್ಜಿಹಳ್ಳಿ ಗ್ರಾ.ಪಂ ಅಧ್ಯಕ್ಷರಾದ ಗೋವಿಂದರಾಜ್ ಆರ್, ಉಪಾಧ್ಯಕ್ಷರಾದ ಸವಿತ.ಟಿ.ಆರ್ ಅಂಜಿನಪ್ಪ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಸಾರಿಗೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ.ಎನ್.ವಿ ಪ್ರಸಾದ್, ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂಪಾಷ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಭಾಗವಹಿಸುವವರು.

## ಅರ್ಜಿ ಆಹ್ವಾನ; ಅವಧಿ ವಿಸ್ತರಣೆ

**ಶಿವಮೊಗ್ಗ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26 ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ವ್ಯಾಸಂಗ ಮಾಡುತ್ತಿರುವ ಪ್ರವರ್ಗ–1, 2ಎ, 3ಎ, 3ಬಿ, ಪ.ಜಾ./ಪ.ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಕಡೆಯ ದಿನಾಂಕವನ್ನು ಅ. 14ರವರೆಗೆ ವಿಸ್ತರಿಸಲಾಗಿದೆ.

ಆಸಕ್ತರು ಅರ್ಜಿಯನ್ನು https://shp.karnataka.gov.in/bcwd ಮೂಲಕ ಅ.14 ರೊಳಗಾಗಿ ಸಲ್ಲಿಸುವುದು.

ಅರ್ಜಿಯನ್ನು ಸಲ್ಲಿಸಲು ಪ್ರವರ್ಗ–1, ಎಸ್.ಸಿ ಮತ್ತು ಎಸ್.ಟಿ. ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ.2.50 ಲಕ್ಷಕ್ಕಿಂತ ಮೀರಿರಬಾರದು. ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ.1.00 ಲಕ್ಷ ಮೀರಿರಬಾರದು.

ತಾಲೂಕುವಾರು ವಿದ್ಯಾರ್ಥಿನಿಲಯದ ವಿವರ ಹಾಗೂ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರಿ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ ವಿಳಾಸ https://bcwd.karnataka.gov.in ನ್ನು ಸಂಪರ್ಕಿಸುವುದು. ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳಾದಲ್ಲಿ ಇ–ಮೇಲ್ bcwdhelpline@.karnataka.gmail.com ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ.8050770004/8050770005 ಗಳನ್ನು ಸಂಪರ್ಕಿಸುವುದು.

## ಸಮೀಕ್ಷಾ ಕಾರ್ಯ ತ್ವರಿತವಾಗಿ ಪೂರ್ಣಗೊಳಿಸಿ



**ಬಳ್ಳಾರಿ:** ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯಕ್ಕೆ ಇನ್ನು ಮೂರು ದಿನ ಬಾಕಿ ಇದ್ದು, ನಗರ, ಸ್ಥಳೀಯ-ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಾಕಿ ಇರುವ ಮನೆಗಳ ಸಮೀಕ್ಷಾ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಶನಿವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ಈವರೆಗೆ ನಡೆದಿರುವ ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯದ ಪ್ರಗತಿ ಸಭೆ ನಡೆಸಿ ಅವರು ಮಾತನಾಡಿದರು.

ಬಳ್ಳಾರಿ ನಗರ ಮತ್ತು ತಾಲ್ಲೂಕು ವ್ಯಾಪ್ತಿಯಲ್ಲಿ ಇನ್ನೂ ಪ್ರಗತಿಯಾಗಬೇಕಿದ್ದು, ಗಣತಿದಾರರಿಗೆ ಮಾರ್ಗದರ್ಶನ ನೀಡಬೇಕು. ಹೆಚ್ಚುವರಿ ಸಿಬ್ಬಂದಿ ಅಥವಾ ಈಗಾಗಲೇ ಪೂರ್ಣಗೊಳಿಸಿರುವ ಸಿಬ್ಬಂದಿಗಳಿದ್ದಲ್ಲಿ ನೇಮಿಸಿಕೊಳ್ಳಬೇಕು ಎಂದು ನೋಡೆಲ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜೆಸ್ಕಾಂ ಇಲಾಖೆಯ ಮೀಟರ್ ರೀಡರ್ ಗಳು ಜಿಲ್ಲೆಯಲ್ಲಿ ವಿವಿಧ ಸರ್ಕಾರಿ ಕಟ್ಟಡಗಳಿಗೂ ಯುಹೆಚ್‌ಐಡಿ ಸ್ಟಿಕರ್ ಅಂಟಿಸಿದ್ದು, ಇದರಿಂದ ಗಣತಿದಾರರಿಗೆ ಸಮೀಕ್ಷಾ ಕಾರ್ಯಕ್ಕೆ ತೊಂದರೆಯಾಗಿದೆ. ಹಾಗಾಗಿ ಮೀಟರ್ ರೀಡರ್ ಗಳು ಗಣತಿದಾರರಿಗೆ ಪೂರಕ ಮನೆಗಳನ್ನು ತೋರಿಸಲು ಹಾಗೂ ಅವರ ಜೊತೆ ತೆರಳುವಂತೆಯೂ ಜೆಸ್ಕಾಂ ಅಧಿಕಾರಿಗಳಿಗೆ ತಿಳಿಸಿದರು.

ಇದೇ ವೇಳೆ ತಾಲ್ಲೂಕುವಾರು ನೇಮಿಸಿದ ನೋಡೆಲ್ ಅಧಿಕಾರಿಗಳಿಂದ ಆಯಾ ಸ್ಥಳೀಯ-ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಾಕಿಯಿರುವ ಮನೆಗಳ ಮಾಹಿತಿ ಪಡೆದುಕೊಂಡ ಜಿಲ್ಲಾಧಿಕಾರಿಯವರು, ಇರುವ ಕಾಲಾವಧಿಯಲ್ಲಿ ತ್ವರಿತವಾಗಿ ಪೂರ್ಣಗೊಳಿಸುವಂತೆ ತಾಕೀತು ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಸಹಾಯಕ ಆಯುಕ್ತ ಪಿ.ಪ್ರಮೋದ್, ಡಿಎಂಎಫ್ ವಿಶೇಷಾಧಿಕಾರಿ ಲೋಕೇಶ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ, ಜೆಸ್ಕಾಂ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## 36ನೇ ಸೌತ್‌ಜೋನ್ ಜೂ. ಅಥ್ಲೇಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಪದಕ ಪಡೆದ ಜಿಲ್ಲಾ ಕ್ರೀಡಾಪಟುಗಳು

**ಶಿವಮೊಗ್ಗ:** ಆಂದ್ರಪ್ರದೇಶದ ಗುಂಟೂರು ನಾಗಾರ್ಜುನ್ ಯೂನಿವರ್ಸಿಟಿಯಲ್ಲಿ ಸೆ. 23 ರಿಂದ 25ರವರೆಗೆ ಅಥ್ಲೆಟಿಕ್ಸ್ ಅಸೋಸಿಯೇಸನ್ಸ್ ವತಿಯಿಂದ ನಡೆದ 36ನೇ ಸೌತ್‌ಜ್ಹೋನ್ ಜೂನಿಯರ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್–2025ರ ಕ್ರೀಡಾಕೂಟದಲ್ಲಿ ಶಿವಮೊಗ್ಗ ಜಿಲ್ಲೆಯ ಕ್ರೀಡಾಶಾಲೆ/ ವಸತಿ ನಿಲಯಗಳ ಕ್ರೀಡಾಪಟಗಳು ಭಾಗವಹಿಸಿ ಪದಕಗಳನ್ನು ಗಳಿಸಿದ್ದಾರೆ.

ಸಂಜಯ್ ಸುನೀಲ್ ಹಂಚಿನಮನೆ 60ಮೀ ಮಿಡ್ಲ್ ಪ್ರಥಮ, ರಿಲೇಯಲ್ಲಿ ದ್ವಿತೀಯ, ಶರತ್ ಕೆ.ಜೆ. 600 ಮೀ ಮತ್ತು ಮಿಡ್ಲ್ ರಿಲೇಯಲ್ಲಿ ದ್ವಿತೀಯ, ಸಚಿನ್ ಎಲ್.ಜೆ.. ಮಿಡ್ಲ್ ರಿಲೇಯಲ್ಲಿ ಮತ್ತು ಮತ್ತು ಸಿರಿ ಕೆ.ಜೆ. ಮಿಡ್ಲ್ ರಿಲೇ ತೃತೀಯ ಸ್ಥಾನಗಳಲ್ಲಿ ವಿಜೇತರಾಗಿದ್ದು, ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದಲ್ಲಿ ಬಾಳಪ್ಪ ಮಾನೆ ಅಥ್ಲೆಟಿಕ್ ದೈನಂದಿನ ತರಬೇತಿ ನೀಡುತ್ತಿದ್ದಾರೆ. ವಿಜೇತರಿಗೆ ಜಿಲ್ಲಾಧಿಕಾರಿಗಳು, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು, ಜಿಲ್ಲಾ ಅಥ್ಲೆಟಿಕ್ ಅಸೋಸಿಯೋಶನ್ ಕಾರ್ಯದರ್ಶಿಗಳು ಹಾಗು ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ. (ಛಾಯಾಚಿತ್ರ ಲಗತ್ತಿಸಿದೆ)

# ಮಾನಸಿಕ ಖಿನ್ನತೆಗಳ ಮನಸ್ಸುಗಳನ್ನು ಪುಳಕಿತಗೊಳಿಸುವ ಶಕ್ತಿ ಸಾಂಸ್ಕೃತಿಕ ಚಟುವಟಿಕೆಗಳಿಲ್ಲಿದೆ




**ದಾವಣಗೆರೆ:** ಮಾನವನು ಕೇವಲ ಹೊಟ್ಟೆಪಾಡಿಗೆ ಸೀಮಿತವಾಗದೇ ಸಾಂಸ್ಕೃತಿಕ, ಸಮಾಜ ಸೇವೆಗಳಿಗೆ ತೊಡಗಿಕೊಂಡರೆ ನಮ್ಮ ನಿಮ್ಮೆಲ್ಲರ ಜೀವನಕ್ಕೆ ಸಾರ್ಥಕತೆ ಬರುತ್ತದೆ. ಮಾನಸಿಕ ಖಿನ್ನತೆಗಳ ಮನಸ್ಸುಗಳನ್ನು ಪುಳಕಿತಗೊಳಿಸುವ ಶಕ್ತಿ ಸಾಂಸ್ಕೃತಿಕ ಚಟುವಟಿಕೆಗಳಿಲ್ಲಿದೆ. ವಾಣಿಜ್ಯ ನಗರಿಯನ್ನು ಸಾಂಸ್ಕೃತಿಕ ನಗರವನ್ನಾಗಿ ಪರಿವರ್ತಿಸಿದ ಸಾಧನೆ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಕಳೆದ ಮೂರುವರೆ ದಶಕಗಳಿಂದ ನಿರಂತರವಾಗಿ ಕಠಿಣ ಪರಿಶ್ರಮದಿಂದ ಸಾಧನೆ ಮಾಡಿದ ಸಾಲಿಗ್ರಾಮ ಗಣೇಶ್ ಶೆಣೈ ಯವರಿಗೆ ಕೃತಜ್ಞತೆ ಸಲ್ಲಿಸಬೇಕು ಎಂದು ದಾವಣಗೆರೆಯ ವಿಶ್ವವಿದ್ಯಾಲಯದ ದೃಶ್ಯಕಲಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಸತೀಶ್‌ಕುಮಾರ್ ಪಿ.ವಲ್ಲೇಪುರೆ ತಮ್ಮ ಅಂತರಾಳದ ಅನಿಸಿಕೆ ಹಂಚಿಕೊಂಡರು.

ದಾವಣಗೆರೆಯ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ನಿನ್ನೆ ತಾನೇ ನಡೆದ ದಸರಾ ಹಬ್ಬದ ಪ್ರಯುಕ್ತ ಉಚಿತ ವಿವಿಧ ಸ್ಪರ್ಧೆಗಳ ಸಮಾರಂಭವನ್ನು ಜ್ಯೋತಿ ಬೆಳಗುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಮುಖ್ಯ ಅತಿಥಿಗಳಾಗಿ ವೇದಿಕೆಯಲ್ಲಿ ಉಪಸ್ಥಿತರಿದ್ದ ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ ಮಾತನಾಡಿ, ಅಡುಗೆ ಮನೆಗೆ ಸೀಮಿತವಾದ ಮಹಿಳೆಯರಿಗೆ ಅವರಲ್ಲಿರುವ ಪ್ರತಿಭೆಗಳನ್ನು ಅನಾವರಣಗೊಳಿಸಿ ಮುಕ್ತವಾದ ಅವಕಾಶ ಕೊಡುತ್ತಿರುವುದು ಶೆಣೈಯವರ ಪರಿಶ್ರಮ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ ಕಲಾಕುಂಚ ಸಂಸ್ಥೆಯ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್ ಮಾತನಾಡಿ, ಕೆಲವರಿಗೆ ಅನಾರೋಗ್ಯದಿಂದ ಬಳಲುವವರಿಗೆ ದಿವ್ಯ ಔಷಧ ಈ ಸಾಂಸ್ಕೃತಿಕ ಚಟುವಟಿಕೆಗಳು. ಈಗಿನ ಯುವ ಪೀಳಿಗೆಗಳು ಮೊಬೈಲ್‌ನಲ್ಲಿ ತಲ್ಲಿನವಾಗಿ ಸಾಮಾನ್ಯ ಜ್ಞಾನ, ಸಂಸ್ಕೃತಿ, ಸಂಸ್ಕಾರಗಳ ಕೊರತೆಯಿದೆ. ಈ ಕಲಾಕುಂಚ ಸಂಸ್ಥೆ ಶೈಕ್ಷಣಿಕ ಕಾಳಜಿಯೊಂದಿಗೆ ಮಕ್ಕಳಲ್ಲಿ ಅರಿವು ಮೂಡಿಸುವ ಕಾರ್ಯ ಶ್ಲಾಘನೀಯ ಎಂದರು.

ಕಲಾಕುಂಚ ಮಹಿಳಾ ವಿಭಾಗದ ಉಪಾಧ್ಯಕ್ಷರಾದ ಶ್ರೀಮತಿ ಗಿರಿಜಮ್ಮ ನಾಗರಾಜಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಶ್ರೀಮತಿ ರೇಣುಕಾ ರಾಮಣ್ಣನವರ ಪ್ರಾರ್ಥನೆಯೊಂದಿಗೆ ಪ್ರಾರಂಭವಾದ ಸಮಾರಂಭಕ್ಕೆ ಕಲಾಕುಂಚ ಸಿದ್ದವೀರಪ್ಪ ಬಡಾವಣೆ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್ ಸ್ವಾಗತಿಸಿದರು. ಶ್ರೀಮತಿ ಚಂದ್ರಶೇಖರ ಅಡಿಗ ಸಮಾರಂಭವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು. ಆಕರ್ಷಕ ಗೃಹಿಣಿ ಸ್ಪರ್ಧೆ, ಮಕ್ಕಳಿಗೆ ಆಟೋಟ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಕೊನೆಯಲ್ಲಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಂದಿಸಿದರು.

# ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4 ಕೋಟಿ ವಿಶೇಷ ಅನುದಾನ



**ಚಿಕ್ಕಮಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4 ಕೋಟಿ ವಿಶೇಷ ಅನುದಾನವನ್ನುಕ್ಷೇತ್ರಕ್ಕೆ ನೀಡಿದ್ದುಅದರಲ್ಲಿಆರ್ಥಿಕ ಸಂಕಷ್ಟ ಎದುರಿಸುತ್ತಿರುವ ದೇವಾಲಯಗಳ ನಿರ್ಮಾಣಕ್ಕೆ ನೆರವು ನೀಡುತ್ತಿರುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.

ತಾಲೂಕಿನ ಮೂಗ್ತಿಹಳ್ಳಿ ಗ್ರಾಮದಲ್ಲಿ ನಿರ್ಮಿಸುತ್ತಿರುವ ಶ್ರೀ ಕೆಂಚರಾಯಸ್ವಾಮಿದೇವ 'ಸ್ಥಾನದಜೀರ್ಣೋದ್ಧಾರಕ್ಕೆ ಶಾಸಕರ ನಿಯಿಂದ 5 ಲಕ್ಷ ರೂ.ಗಳ ಚೆಕ್ಕನ್ನುದೇವಾಸ್ಥಾನಅಭಿವೃದ್ಧಿ ಸಮಿತಿಗೆ ಭಾನುವಾರ ಹಸ್ತಾಂತರಿಸಿ ಅವರು ಮಾತನಾಡಿದರು.

ಪ್ರಾಯಶಃ ನಮ್ಮ ಸರಕಾರಅಕಾರಕ್ಕೆ ಬಂದ ಮೇಲೆ ನಮ್ಮಘೋಷಣೆಜನರಿಂದಆಯ್ಕೆಯಾಗಿಜನರಿಗೋಸ್ಕರ ಕೆಲಸ ಮಾಡುವುದಾಗಿದೆ.ಜನರ ಮನೆ ಬಾಗಿಲಿಗೆ ಈಗಾಗಲೇ ಸರಕಾರದಗ್ಯಾರಂಟಿಯೋಜನೆಯ ಸವಲತ್ತುಗಳು ತಲುಪುತ್ತಿವೆ. 10 ಕಿಲೋ ಅಕ್ಕಿ, ಉಚಿತಕರೆಂಟ್, ಬಸ್ ಫ್ರೀ ಮಾಡಿದ್ದೇವೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ನೇತೃತ್ವದಲ್ಲಿ ಸರಕಾರದ ಸೌಲಭ್ಯಗಳು ಎಲ್ಲ ಸಮುದಾಯದ ಬಡಜನರಿಗೆತಲುಪಿಸುತ್ತಿದ್ದೇವೆಎಂದರು.

ಮುಖ್ಯಮಂತ್ರಿಗಳು 4 ಕೋಟಿ ವಿಶೇಷ ಅನುದಾನವನ್ನು ನನ್ನಕ್ಷೇತ್ರಕ್ಕೆಕೊಟ್ಟಿದ್ದಾರೆ. ಕ್ಷೇತ್ರದಲ್ಲಿ 416 ಹಳ್ಳಿಗಳಿದ್ದರೂ ಕೆಲವು ಕಡೆ ಬಡವರುಕಷ್ಟಪಟ್ಟುದೇವಸ್ಥಾನ ನಿರ್ಮಿಸುತ್ತಿದ್ದಾರೆ.ಅಂತಹವರಿಗೆ 5-10 ಲಕ್ಷಕೊಡುವ ಕೆಲಸ ಮಾಡುತ್ತಿದ್ದೇವೆ. ಆ ಹಣ ಪಡೆಯಲು ನಿರ್ಮಿತಿಕೇಂದ್ರ, ಲ್ಯಾಂಡ್‌ಆರ್ಮಿಗೆಅಲೆಯುಬಾರದು ಎಂಬ ಕಾರಣಕ್ಕೆ ಮನೆ ಬಾಗಿಲಿಗೆ ಹಣತಲುಪಿಸುತ್ತಿದ್ದೇವೆ. ಊರಿನಅಭಿವೃದ್ಧಿ ಕೆಲಸಗಳನ್ನು ಆದ್ಯತೆ ಮೇರೆಗೆ ಮಾಡಲಾಗುವುದುಎಂದು ಹೇಳಿದರು. ಮಹಿಳೆಯರು ಗೃಹ ಲಕ್ಷ್ಮಿಯೋಜನೆ ಅಡಿ 1 ಸಾವಿರರೂ.ಸ್ವಂತಕ್ಕೆ ಬಳಸಿಕೊಂಡರೆ, ಉಳಿದ 1 ಸಾವಿರ ಮಕ್ಕಳ, ಮೊಮ್ಮಕ್ಕಳ ಶಿಕ್ಷಣಕ್ಕೆ ಮೀಸಲಿಡಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕುಎಂದು ಮನವಿ ಮಾಡಿದರು. ಗ್ರಾ.ಪಂ.ಸದಸ್ಯ ಪ್ರಭಾಕರ್, ಸಂದೀಪ್, ದಿನೇಶ್, ಎಪಿಎಂಸಿ ಮಾಜಿಅಧ್ಯಕ್ಷ ವಿಕ್ರಾಂತ್, ದೇವಸ್ಥಾನದ ಮುಖ್ಯಸ್ಥರಾದಜಯಣ್ಣ, ನಾರಾಯಣ, ಸಿದ್ದಯ್ಯ, ನಿರಂಜನ್ ಮತ್ತಿತರರಿದ್ದರು.

## ಅ.10ಕ್ಕೆ ಪ್ರೊ.ಬಿ.ವಿ.ವೀರಭದ್ರಪ್ಪ ಅವರ ವೈಚಾರಿಕ ಸಾಹಿತ್ಯ ಕುರಿತ ಸಂವಾದ

**ದಾವಣಗೆರೆ:** ಬೆಂಗಳೂರಿನ ಡಾ.ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದಿಂದ ಪ್ರೊ.ಬಿ.ವಿ.ವೀರಭದ್ರಪ್ಪ ಅವರ ವೈಚಾರಿಕ ಸಾಹಿತ್ಯ ಕುರಿತು ಸಂವಾದ ಕಾರ್ಯಕ್ರಮ ಅಕ್ಟೋಬರ್ 6ರ ಬೆಳಿಗ್ಗೆ 10ಕ್ಕೆ ದಾವಣಗೆರೆಯ ಬಾಪೂಜಿ ಎಂಬಿಎ ಕಾಲೇಜು ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷೆ ಎಚ್.ಆರ್.ಸುಜಾತಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿಂತಕ ಡಾ.ಜಿ.ರಾಮಕೃಷ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ. ಅತಿಥಿಗಳಾಗಿ ಕವಿ ಪ್ರೊ.ಎಸ್.ಜಿ.ಸಿದ್ದರಾಮಯ್ಯ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಬೆಂಗಳೂರಿನ ಡಾ.ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದ ಅಧ್ಯಕ್ಷೆ ಎಚ್.ಆರ್. ಸುಜಾತಾ ವಹಿಸಲಿದ್ದಾರೆ. ಅನಂತಮ್ಮ ವೀರಭದ್ರಪ್ಪ ಉಪಸ್ಥಿತಿ ಇರಲಿದೆ. ನಂತರ ನಡೆಯುವ ಗೋಷ್ಠಿಯಲ್ಲಿ ಬೆಳಗ್ಗೆ 11:15 ರಿಂದ ವಿಷಯ ಧರ್ಮ ಮತ್ತು ವೈಚಾರಿಕತೆ ಕುರಿತು ವಿಷಯ ಮಂಡನೆ ಆಗಲಿದೆ. ಡಾ.ಎಂ.ಎಸ್. ಆಶಾದೇವಿ, ಸತೀಶ್ ಕುಲಕರ್ಣಿ ಭಾಗವಹಿಸಲಿದ್ದಾರೆ ಎಂದರು.

ಗೋಷ್ಠಿ-2, ಮಧ್ಯಾಹ್ನ 2 ರಿಂದ ನಡೆಯಲಿದ್ದು, ವಿಷಯ ಮಹಿಳಾ ಮತ್ತು ದಲಿತ ನೋಟ ಕುರಿತು ಇರುತ್ತದೆ. ಈ ಗೋಷ್ಠಿಯಲ್ಲಿ ಡಾ.ಅನಸೂಯಾ ಕಾಂಬ್ಳೆ, ಹುಕ್ಕೇರಿ ಡಾ. ರವಿಕುಮಾರ್ ನೀಹ ಇರಲಿದ್ದಾರೆ. ಸಂಜೆ 4ಕ್ಕೆ ಸಮಾರೋಪ ಕಾರ್ಯಕ್ರಮ ನಡೆಯಲಿದ್ದು, ಕೇಂದ್ರ ಸಾಹಿತ್ಯ ಅಕಾಡೆಮಿಯ ಹಿಂದಿನ ಕಾರ್ಯದರ್ಶಿ ಅಗ್ರಹಾರ ಕೃಷ್ಣಮೂರ್ತಿ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಎನ್.ಮಲ್ಲೇಶ್, ಬಾ.ಮಾ.ಬಸವರಾಜಯ್ಯ, ಸುಧಾ, ಚಂದ್ರಮೌಳಿ ಆರ್. ಇತರರು ಇದ್ದರು.

## ಅ.8ಕ್ಕೆ ಒಳಮೀಸಲಾತಿ ಹೋರಾಟಗಾರರಿಗೆ ಹಾಗೂ ನೂತನ ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ಸನ್ಮಾನ ಕಾರ್ಯಕ್ರಮ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾದಿಂದ ಒಳ ಮೀಸಲಾತಿಗಾಗಿ 35 ವರ್ಷ ಹೋರಾಟ ಮಾಡಿದವರಿಗೆ ಹಾಗೂ ನೂತನ ನಿಗಮ ಮಂಡಳಿಗಳಿಗೆ ಅಧ್ಯಕ್ಷರುಗಳಾಗಿ ನೇಮಕಗೊಂಡವರಿಗೆ ಅ.8 ರಂದು ಮಧ್ಯಾಹ್ನ 3 ಗಂಟೆಗೆ ಹರಪನಹಳ್ಳಿ ತಾಲ್ಲೂಕಿನ ಉಚ್ಚಂಗಿದುರ್ಗದ ಹಾಲಮ್ಮನ ತೋಪಿನಲ್ಲಿ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಾಸಭಾ ಮುಖಂಡ ಬಿ.ಹೆಚ್.ವೀರಭದ್ರಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಒಳಮೀಸಲಾತಿ ಹೋರಾಟ ಆರಂಭವಾಗಿ ಸುಮಾರು 35-40 ವರ್ಷಗಳಾಗಿವೆ. ಎಸ್.ಎಂ.ಕೃಷ್ಣ ನೇತೃತ್ವದ ಸರ್ಕಾರ ನ್ಯಾ.ಸದಾಶಿವ ಆಯೋಗ ರಚಿಸಿತು. ನಂತರ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ನಡೆಸಲು ಹೆಚ್. ಕಾಂತರಾಜು ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವನ್ನು ರಚಿಸಿತು. ಜೆ.ಮಾಧುಸ್ವಾಮಿ ನೇತೃತ್ವದಲ್ಲಿ ಸಂಪುಟ ಉಪಸಮಿತಿ ಚಿಸಿ ಒಳಮೀಸಲಾತಿ ವರ್ಗೀಕರಣ ಮಾಡಿಸಿತಾದರೂ ಕೇಂದ್ರ ಸರ್ಕಾರದ ಅನುಮೋದನೆ ಪಡೆಯುವಲ್ಲಿ ವಿಫಲವಾಯಿತು ಎಂದರು.2024 ಭಾರತದ ಸರ್ವೋಚ್ಚ ನ್ಯಾಯಾಲಯದ ಏಳು ಜನ ನ್ಯಾಯಾಧೀಶರು ಒಳಮೀಸಲಾತಿ ವರ್ಗೀಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗಿದೆ ಎಂದು ಬಹುಮತದ ತೀರ್ಪು ನೀಡಿದ ಮೇರೆಗೆ ರಾಜ್ಯ ಸರ್ಕಾರಗಳು ಒಳ ಮೀಸಲಾತಿ ವರ್ಗೀಕರಣಕ್ಕೆ ಮುಂದಾದವು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಶೇಕಡಾ 17ರ ಮೀಸಲಾತಿಯನ್ನು ಕ್ರಮವಾಗಿ 6, 6, 5 ಶೇಕಡಾವಾರು ವಿಭಜಿಸಿ ಅನುಮೋದಿಸಲಾಗಿದೆ ಎಂದರು.ಈ ಹಿನ್ನೆಲೆಯಲ್ಲಿ ಸುಮಾರು 35-40 ವರ್ಷಗಳಿಂದ ಒಳಮೀಸಲಾತಿ ವರ್ಗೀಕರಣಕ್ಕಾಗಿ ಹೋರಾಟ ಮಾಡಿಕೊಂಡು ಬಂದಿರುವ ದಲಿತ ಸಂಘಟನೆಗಳು ಹಾಗೂ ಮಾದಿಗ ಸಂಘಟನೆಗಳ ಹೋರಾಟಗಾರರಿಗೆ ಹಾಗೂ ನೂತನ ನಿಗಮ ಮಂಡಳಿಗಳಿಗೆ ಅಧ್ಯಕ್ಷರುಗಳಾಗಿ ನೇಮಕ ಗೊಂಡವರಿಗೆ ಸನ್ಮಾನ ಸಮಾರಂಭವನ್ನು ಗಣ್ಯರ ಸಮ್ಮುಖದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

## ಸಾರಿಗೆ ಇಲಾಖೆಯ ಸಮಗ್ರ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಿ: ಟಿ.ಎಲ್.ರಂಗನಾಥ್

**ದಾವಣಗೆರೆ:** ಸಾರಿಗೆ ಇಲಾಖೆಯ ಸಮಗ್ರ ಸಮಸ್ಯೆ ಬಗೆಹರಿಸಬೇಕು ಎಂದು ಸಾಮಾಜಿಕ ಅಭಿವೃದ್ಧಿ ರಂಗದ ಅಧ್ಯಕ್ಷ ಟಿ.ಎಲ್. ರಂಗನಾಥ್ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸಂಪೂರ್ಣ ಹಾಳಾಗಿರುವ ರಸ್ತೆಗಳ ದುರಸ್ತಿಗೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿ ಸಾರಿಗೆ ಮತ್ತು ಲೋಕೋಪಯೋಗಿ ಇಲಾಖೆ ಸಚಿವರಿಗೆ ಮನವಿ ಸಲ್ಲಿಸಲಾಗುವುದು. ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳದಿದ್ದಲ್ಲಿ ರಾಜ್ಯಾದ್ಯಂತ ತೀವ್ರ ಸ್ವರೂಪದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

# ವಿಶ್ವಕರ್ಮರ ಕೊಡುಗೆ ಅಮೂಲ್ಯ ಮತ್ತು ಅಪಾರ



**ಗದಗ :** ದೇಶಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು

.ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ದೇಶದ ಬೆನ್ನೆಲುಬು ರೈತನಾದರೆ ರೈತನಿಗೆ ಹೊಲದಲ್ಲಿ ಉಳುಮೆ ಮಾಡಲು ಉಪಯೋಗಿಸುವ ಸಲಕರಣೆಗಳನ್ನು ಪೂರೈಕೆ ಮಾಡುವವರು ವಿಶ್ವಕರ್ಮದವರಾಗಿದ್ದಾರೆ. ಭಾರತೀಯ ಸಂಸ್ಕೃತಿಯನ್ನು ಬೆಳೆಸಿದವರು ವಿಶ್ವಕರ್ಮರು. ಭಾರತ ದೇಶದಲ್ಲಿ ವಿವಿಧ ಐತಿಹಾಸಿಕ ದೇವಾಲಯಗಳನ್ನು ನಿರ್ಮಾಣ ಮಾಡಿದ ಹಿರಿಮೆ ವಿಶ್ವಕರ್ಮರಿಗೆ ಸಲ್ಲುತ್ತದೆ. ಶ್ರಮ ಹಾಗೂ ಕಾಯಕ ನಿಷ್ಠೆ ಇನ್ನೊಂದು ಹೆಸರೇ ವಿಶ್ವಕರ್ಮರು. ವಿಶ್ವಕರ್ಮನೆಂಬುವನು ಇಲ್ಲದಿದ್ದರೆ ಈ ಜಗತ್ತಿಗೆ ಅಸ್ತಿತ್ವವೇ ಇರುತ್ತಿರಲಿಲ್ಲ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ. ವೇದೋಪನಿಷತ್‌ಗಳು ಸಹ ವಿಶ್ವ ಕರ್ಮನನ್ನು ಕೊಂಡಾಡಿವೆ ಎಂದರು.

ರಾಜ ವಿಷ್ಣುವರ್ಧನನು ಹೊಯ್ಸಳ ಸಾಮ್ರಾಜ್ಯದ ಪ್ರಸಿದ್ಧ ರಾಜನಾಗಿದ್ದ. ಇವನ ರಾಣಿ ಶಾಂತಲೆಯು ಶಿಲ್ಪಕಲೆ ಹಾಗೂ ಸಂಸ್ಕೃತಿಯಲ್ಲಿ ಹೆಚ್ಚಿನ ಆಸಕ್ತಿಯುಳ್ಳವಳಾಗಿದ್ದಳು. ಬೇಲೂರಿನ ಚನ್ನಕೇಶವ ದೇವಾಲಯ, ಹಳೆಬೀಡಿನ ಹೊಯ್ಸಳೇಶ್ವರ ದೇವಾಲಯ ಸೇರಿದಂತೆ ವಿವಿಧ ದೇವಾಲಯಗಳ ನಿರ್ಮಾತೃ ವಿಶ್ವಕರ್ಮ ಸಮಾಜದ ಅಮರ ಶಿಲ್ಪಿ ಜಕಣಾಚಾರಿಯವರಾಗಿದ್ದಾರೆ. ಈಗಿನ ಮಕ್ಕಳಿಗೆ ವಿಶ್ವಕರ್ಮರ ಮಾರ್ಗದರ್ಶನ ತಿಳಿಸಬೇಕು ಹಾಗೂ ಸಾಹಿತ್ಯದ ಒಲವನ್ನು ಬೆಳೆಸಲು ಪ್ರೇರೇಪಿಸಬೇಕು. ಎಲ್ಲರೂ ಕಾಯಕ ತತ್ವ ಬೆಳೆಸಿಕೊಳ್ಳಬೇಕು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ ಅವರು ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ರಾಜ್ಯ ಸರ್ಕಾರದಿಂದ ವಿಶ್ವ ಕರ್ಮ ಜಯಂತಿ ಆಚರಿಸುತ್ತಿರುವುದು ಬಹಳ ಸಂತೋಷ ವಿಷಯವಾಗಿದೆ.

ಯಾವುದೇ ಸಾಧನೆಯಾಗಬೇಕಾದರೆ ಸಂಘಟನೆಯು ಬಹಳ ಮುಖ್ಯವಾಗಿರುತ್ತದೆ. ವಿಶ್ವ ಕರ್ಮ ಸಮಾಜದವರು ಒಗ್ಗಟ್ಟಾಗಿ ಮುಂದೆ ಬರಬೇಕು. ಸರ್ಕಾರದ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಹಿರಿಯ ಸಾಹಿತಿ ಡಿ.ವಿ.ಬಡಿಗೇರ ಉಪನ್ಯಾಸ ನೀಡುತ್ತಾ ಮಾತನಾಡಿ, ವಿಶ್ವಕರ್ಮರ ಪೂಜೆ ಈ ಮೊದಲು ವ್ಯಕ್ತಿಗರ ಹಾಗೂ ಮನೆಗಳಿಗೆ ಸೀಮಿತವಾಗಿತ್ತು. ಆದರೆ ಈಗ ರಾಜ್ಯ ಸರ್ಕಾರದ ಅದೇಶದನ್ವಯ ಜಯಂತಿ ಆಚರಣೆ ಅರ್ಥಪೂರ್ಣವಾಗಿ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಎಲ್ಲಿ ಶ್ರಮದ ಬೆವರ ಹನಿ ಇದೆ ಅಲ್ಲಿ ನಾನು ಇದ್ದೇನೆ ಎಂದು ವಿಶ್ವ ಕರ್ಮರು ಹೇಳುತ್ತಾರೆ. ವಿಶ್ವಕರ್ಮರು ಶ್ರಮ ಪ್ರಿಯರು, ಕಾಯಕ ಪ್ರಿಯರಾಗಿದ್ದಾರೆ. ವೇದ, ಪುರಾಣ, ಶೃತಿ ಸ್ಮೃತಿಗಳಲ್ಲಿ ಸರ್ವಜ್ಞರ ವಚನಗಳಲ್ಲಿಯೂ ಸಹ ವಿಶ್ವ ಕರ್ಮರ ಪ್ರಾಮುಖ್ಯತೆ ಬಗ್ಗೆ ಉಲ್ಲೇಖಿಸಲಾಗಿದೆ. ವಿಶ್ವ ಕರ್ಮನಿಲ್ಲದ ಜಗತ್ತು ಶೂನ್ಯ. ಸಕಲ ವಿದ್ಯೆಗಳು ವಿಶ್ವಕರ್ಮನಿಂದಲೇ ಬಂದಿವೆ.

ವಿಶ್ವ ಕರ್ಮನಿಲ್ಲದಿದ್ದರೆ ಜಗತ್ತಿನ ಅಸ್ತಿತ್ವ ಇರುತ್ತಿರಲಿಲ್ಲ ಎಂದು ಸಂತ ಕವಿ ವೇಮನರು ತಿಳಿಸಿದ್ದಾರೆ. ಸಕಲ ಚರಾಚರ ವಸ್ತುಗಳಲ್ಲ ವಿಶ್ವ ಕರ್ಮ ಇದ್ದಾನೆ. ವಿಶ್ವಕರ್ಮರು ಕಾಯಕ ಯೋಗಿಗಳು ಎಂದು ವಿವರಿಸುತ್ತಾ ತಮ್ಮ ಚುಟುಕು ಸಾಹಿತ್ಯದ ಮೂಲಕ ವಿಶ್ವ ಕರ್ಮರನ್ನು ಕೊಂಡಾಡಿರುವುದು ನೆರೆದ ಜನಸ್ತೋಮದ ಗಮನ ಸೆಳೆಯಿತು.

ಇದೇ ಸಂದರ್ಭದಲ್ಲಿ ಕವಿ ಸಾಹಿತಿ ಗೋಪಾಲ ಬಡಿಗೇರ ಅವರು ರಚಿಸಿದ ಶ್ರೀ ವಿಶ್ವ ಕರ್ಮ ಸ್ತುತಿ ಮಾಲಾ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಎಸ್.ಎಸ್. ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದರಿಗ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿಶ್ವ ಕರ್ಮ ಸಮಾಜ ಅಧ್ಯಕ್ಷ ದೇವೇಂದ್ರಪ್ಪ ಬಡಿಗೇರ, ವಿಶ್ವಕರ್ಮ ನೌಕರರ ಸಂಘದ ಅಧ್ಯಕ್ಷ ಆರ್.ಡಿ.ಕಡ್ಲಿಕೊಪ್ಪ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕಾರ್ಮಿಕ ಇಲಾಖೆಯ ಅಧಿಕಾರಿ ಶ್ರೈಶೈಲ ಸೋಮನಕಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಶ್ರೀಧರ್ ಚಿನಗಡಿ, ಹರಿನಾಥಬಾಬು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿಶ್ವ ಕರ್ಮ ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು.

ಸುತಾರ ತಂಡದವರು ನಾಡಗೀತೆ ಪ್ರಸ್ತುತಪಡಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿದರು. ವಿಶ್ವನಾಥ ಕಮ್ಮಾರ ಕಾರ್ಯಕ್ರಮ ನಿರೂಪಿಸಿದರು.

# ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಗೆ ಮಾಹಿತಿ ನೀಡಿ ಸಹಕರಿಸಿ : ಗುರುದತ್ತ ಹೆಗಡೆ

**ಶಿವಮೊಗ್ಗ :** ರಾಜ್ಯದ ಜನರ ಜೀವನ ಗುಣಮಟ್ಟವನ್ನು ಸುಧಾರಿಸುವ ಹಾಗೂ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ದಾಖಲೆಗಳನ್ನು ಸಂಗ್ರಹಿಸುವ ನಿಟ್ಟಿನಲ್ಲಿ ಹಿಂದುಳಿದ ವರ್ಗಗಳ ಆಯೋಗವು ರಾಜ್ಯದಾದ್ಯಂತ ಆರಂಭಗೊಳಿಸಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಸಮೀಕ್ಷಾ ಕಾರ್ಯದಲ್ಲಿ ಜಿಲ್ಲೆಯ ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿನ ಜನರು ತಮ್ಮ ಮಾಹಿತಿಯನ್ನು ನೀಡಿ, ಸಮೀಕ್ಷೆಗೆ ಸಹಕರಿಸುವಂತೆ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ಜನರಲ್ಲಿ ಮನವಿ ಮಾಡಿದ್ದಾರೆ.

ಅವರು ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಆರ್ಥಿಕ ಮತ್ತು ಸಾಮಾಜಿಕ ಗಣತಿ ಬಗ್ಗೆ ಮಾಹಿತಿ ನೀಡಿ ಮಾತನಾಡುತ್ತಿದ್ದರು. ಜಿಲ್ಲೆಯಲ್ಲಿ ಅಂದಾಜು 4.85ಲಕ್ಷ ಕುಟುಂಬಗಳ ಪೈಕಿ ಈಗಾಗಲೇ 4ಲಕ್ಷ ಮನೆಗಳ ಸಮೀಕ್ಷಾ ಕಾರ್ಯ ಪೂರ್ಣಗೊಂಡು ಶೇ. 80ರಷ್ಟು ಪ್ರಗತಿ ಸಾಧಿಸಲಾಗಿದ್ದು, ಉಳಿದ ಮನೆಗಳ ಸಮೀಕ್ಷೆಯನ್ನು ಮುಂದಿನ ಎರಡು ದಿನಗಳೊಳಗಾಗಿ ಪೂರ್ಣಗೊಳಿಸಿ ನಿರೀಕ್ಷಿತ ಪ್ರಗತಿ ಸಾಧಿಸಲಾಗುವುದು. ಅದಕ್ಕಾಗಿ 4543ಬ್ಲಾಕ್ಗಳನ್ನು ಸೃಜಿಸಲಾಗಿದೆ ಎಂದವರು ತಿಳಿಸಿದರು.

ಈಗಾಗಲೇ ಜಿಲ್ಲೆಯ ಸೊರಬ ತಾಲೂಕಿನಲ್ಲಿ ಶೇ.100ರಷ್ಟು ಸಮೀಕ್ಷಾ ಕಾರ್ಯ ಪೂರ್ಣಗೊಳಿಸಲಾಗಿದೆ. ಅಲ್ಲದೇ ಶಿಕಾರಿಪುರದಲ್ಲಿ ಶೇ.90ರಷ್ಟು ಗಣತಿ ಪೂರ್ಣಗೊಂಡಿರುವ ಮಾಹಿತಿ ಇದೆ. ಉಳಿದಂತೆ ಜಿಲ್ಲೆಯಾದ್ಯಂತ ಸಮೀಕ್ಷೆ ಪ್ರಗತಿ ಹಂತದಲ್ಲಿದೆ. ಸಮೀಕ್ಷೆಗೆ ಅಡಚಣೆಯಾಗುತ್ತಿರುವ ಕೆಲವು ಸ್ಥಳಗಳನ್ನು ಗುರುತಿಸಿ, ಸಮೀಕ್ಷೆಗೆ ಪರ್ಯಾಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದರು.

ಗಣತಿದಾರರು ಮನೆಮನೆ ಸಮೀಕ್ಷೆಗೆ ಬಂದಾಗ ಮಾಹಿತಿ ನೀಡಿ ಸಹಕರಿಸಿ ಎಂದು ಮನವಿ ಮಾಡಿದ ಅವರು, ಒತ್ತಾಯಪೂರ್ವಕವಾಗಿ ಮಾಹಿತಿ ಪಡೆದುಕೊಳ್ಳಲಾಗದು. ಸಮೀಕ್ಷೆಗೆ ಸರಿಯಾದ ಮಾಹಿತಿ ನೀಡಿದಲ್ಲಿ, ಸರ್ಕಾರದ ಯೋಜನೆಗಳ ಲಾಭ ಇನ್ನಷ್ಟು ಸಾರ್ವಜನಿಕರು ಪಡೆದುಕೊಳ್ಳಲು ಅನುಕೂಲವಾಗಲಿದೆ. ಇಲ್ಲದಿದ್ದಲ್ಲಿ ಮಾಹಿತಿ ನಿಖರವಾಗಿ ದಾಖಲಿಸಲಾಗದೆ ಸೌಲಭ್ಯಗಳಿಂದ ವಂಚಿತರಾಗಬಹುದಾದ ಸಂಭವವಿದೆ ಎಂದವರು ನುಡಿದರು.

ಸಮೀಕ್ಷಾ ಕಾರ್ಯದ ಪೂರ್ವದಲ್ಲಿ ಮನೆಮನೆಗೆ ಅಂಟಿಸಲಾಗಿರುವ ಗುರುತಿನ ಸಂಖ್ಯೆಯನ್ನು ಖಾಲಿ ಮನೆ, ಧಾರ್ಮಿಕ ಸ್ಥಳಗಳು,ವಾಣಿಜ್ಯ ಕಟ್ಟಡಗಳು ಸೇರಿದಂತೆ ಮತ್ತಿತರೆಡೆ ಅಂಟಿಸಲಾಗಿದೆ. ಇವುಗಳನ್ನು ಸಮೀಕ್ಷಾ ಕಾರ್ಯಕ್ಕೆ ನಿಯೋಜಿತರಾದ ಮೇಲ್ವಿಚಾರಕರು ಇನ್ನೂ ಒಂದೆರೆಡು ದಿನಗಳಲ್ಲಿ ಅವುಗಳನ್ನು ಸರಿಪಡಿಸಿ, ಅಂತಿಮ ಮಾಹಿತಿಯನ್ನು ನೀಡಲಿದ್ದಾರೆ ಎಂದವರು ನುಡಿದರು.

ಕೆಲವು ಸ್ಥಳಗಳಲ್ಲಿನ ಟವರ್‌ಸಮಸ್ಯೆಗೆ ತಕ್ಷಣದ ಪರಿಹಾರ ಕಂಡುಕೊಂಡು ವಾಸಸ್ಥಳಕ್ಕೆ ಬಂದು ಸಮೀಕ್ಷೆ ಮಾಡಿ ಎಂದು ಕೆಲವು ಗ್ರಾಮೀಣ ಪ್ರದೇಶಗಳಲ್ಲಿನ ನಿವಾಸಿಗಳು ಬೇಡಿಕೆ ಇಟ್ಟಿರುವುದು ಗಮನಕ್ಕೆ ಬಂದಿದೆ. ಈ ಸಮಸ್ಯೆ ತಕ್ಷಣಕ್ಕೆ ಇತ್ಯರ್ಥಪಡಿಸಲು ಸಾಧ್ಯವಾಗದು. ಇದನ್ನು ಆದ್ಯತೆಯ ಮೇರೆಗೆ ಸಹಕರಿಸಲು ಗಮನಹರಿಸಲಾಗುವುದು. ಗ್ರಾಮೀಣರು ಮಾಹಿತಿ ನೀಡಿ ಸಹಕರಿಸುವಂತೆ ಮನವಿ ಮಾಡಿದರು.

ಈ ಸಮೀಕ್ಷಾ ಕಾರ್ಯದಲ್ಲಿ ಕಂದಾಯ, ಬಿ.ಸಿ.ಎಂ., ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿ ಸಹಕಾರ ಪಡೆದುಕೊಳ್ಳಲಾಗಿದೆ. ಸಮೀಕ್ಷೆಯ ಕುರಿತು ಸಮಸ್ಯೆಗಳಿಗಾಗಿ ನಗರದ ಮಹಾನಗರಪಾಲಿಕೆ ಮತ್ತು ಸಾಗರದ ತಾಲೂಕು ಕಚೇರಿಯಲ್ಲಿ ಸಹಾಯವಾಣಿ ಕೇಂದ್ರಗಳನ್ನು ಆರಂಭಿಸಿರುವುದಾಗಿ ಅವರು ತಿಳಿಸಿದರು.

ಜಿಲ್ಲೆಯ ಹೊಸನಗರ, ಸಾಗರ ಮತ್ತು ತೀರ್ಥಹಳ್ಳಿ ತಾಲೂಕುಗಳ ಕೆಲವು ಆಯ್ದ ಭಾಗಗಳಲ್ಲಿ ನೆಟ್ವರ್ಕ್ ಸಮಸ್ಯೆಯಿಂದಾಗಿ ಗಣತಿ ಕಾರ್ಯಕ್ಕೆ ಅಡಚಣೆ ಉಂಟಾಗುತ್ತಿದೆ. ಈ ಸಮೀಕ್ಷೆಯನ್ನು ನಿಗಧಿಪಡಿಸಿದ ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲು ಪರ್ಯಾಯ ಕ್ರಮಗಳನ್ನು ಕೈಗೊಂಡಿದ್ದು, ಸಮೀಪದ ಗ್ರಾಮ ಪಂಚಾಯಿತಿ ಅಥವಾ ಶಾಲೆಗಳಲ್ಲಿ ನೆಟ್ವರ್ಕ್ ಸೌಲಭ್ಯವಿರುವ ಸ್ಥಳಗಳಲ್ಲಿ ದಾಖಲೆಗಳನ್ನು ಸಂಗ್ರಹಿಸುವಂತೆ ಸೂಚಿಸಲಾಗಿದೆ.

250ಕ್ಕೂ ಹೆಚ್ಚಿನ ಸ್ಥಳಗಳನ್ನು ಗುರುತಿಸಿ, ಸಮೀಕ್ಷೆ ನಡೆಸಲಾಗುತ್ತಿದೆ. ಅದಕ್ಕಾಗಿ ಸ್ಥಳೀಯ ಸಂಸ್ಥೆಗಳ ಅಧಿಕಾರಿ-ಸಿಬ್ಬಂಧಿಗಳ ಸಹಕಾರವನ್ನು ಪಡೆದುಕೊಳ್ಳಲಾಗುತ್ತಿದೆ ಎಂದರು. ಎನ್.ಹೇಮಂತ್, ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎನ್.ಹೇಮಂತ್, ಅಪರ ಜಿಲ್ಲಾಧಿಕಾರಿ ಅಭಿಷೇಕ್ವ್, ಮತ್ತು ಇತರೆ ಹಿಂದುಳಿದ ವರ್ಗಗಳ ಇಲಾಖೆಯ ಜಿಲ್ಲಾ ಅಧಿಕಾರಿ ಶ್ರೀಮತಿ ಶೋಭಾ ಅವರು ಉಪಸ್ಥಿತರಿದ್ದರು.

# ಶಿವಮೊಗ್ಗ ಜಿಲ್ಲಾ ಮಟ್ಟದ ಯುವಜನೋತ್ಸವ

**ಶಿವಮೊಗ್ಗ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅ. 15 ರಂದು ಬೆಳಗ್ಗೆ 9.00 ರಿಂದ ಕುವೆಂಪು ರಂಗಮಂದಿರದಲ್ಲಿ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ ಜಾನಪದ ನೃತ್ಯ, ಜಾನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಘೋಷಣೆ ಹಾಗೂ ಕವಿತೆ ಬರೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವ ಯುವಕ/ ಯುವತಿಯರು 15 ರಿಂದ 29 ವರ್ಷ ವಯೋಮಿತಿಯೊಳಗಿದ್ದು, ನೋಂದಣಿ ಸಮಯದಲ್ಲಿ ಆಧಾರ್ ಕಾರ್ಡ್/ಎಸ್. ಎಸ್.ಎಲ್.ಸಿ. ಅಂಕಪಟ್ಟಿ/ ಜನನ ಪ್ರಮಾಣ ಪತ್ರ ಇವುಗಳಲ್ಲಿ ಯಾವುದಾದೊಂದು ದಾಖಲೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಶಿವಮೊಗ್ಗ ಜಿಲ್ಲೆಯಲ್ಲಿ ವಾಸವಾಗಿರುವ ದೃಢೀಕರಣ ಪತ್ರವನ್ನು ತರಬೇಕು. ರಾಷ್ಟ್ರಮಟ್ಟದ ಯುವಜನೋತ್ಸವದಲ್ಲಿ ಸತತವಾಗಿ 3 ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೆ ಅಂತಹ ಯುವಜನರು ಭಾಗವಹಿಸುವಂತಿಲ್ಲ.

ಆಸಕ್ತರು ಅ. 14 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಇವರ ಕಚೇರಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಶಿವಮೊಗ್ಗ ಕಚೇರಿಯನ್ನು ಸಂಪರ್ಕಿಸುವುದು.

## ಅ.8ರಂದು ಅಂತರಾಷ್ಟ್ರೀಯ ಸಂಗೀತ ನೃತ್ಯೋತ್ಸವ

**ದಾವಣಗೆರೆ:** ಚಿರಂತನ ಸಾಂಸ್ಕೃತಿಕ ಸಂಸ್ಥೆಯಿಂದ ಅ.8ರಂದು ಬಾಲಿಯ ಇಂಡೋನೇಷಿಯ ಇನ್ಸ್ಟಿಟ್ಯೂಟ್ ಆಫ್ ಆರ್ಟ್ಸ್‌ನ ಸಿಟ್ರಾ ಕೆಲಾಂಜೆನ್ ಹಾಲ್‌ನಲ್ಲಿ 6ನೇ ಅಂತರಾಷ್ಟ್ರೀಯ ಸಂಗೀತ ನೃತ್ಯೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಂಸ್ಥೆಯ ಮಾಧವ ಪದಕಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಸಂಸ್ಥೆ ಕಳೆದ 23 ವರ್ಷಗಳಿಂದ ಸಕ್ರಿಯವಾಗಿ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸುತ್ತಾ ಬಂದಿದೆ. ಇಂಡೋನೇಷಿಯಾ ದೇಶದ ಸರ್ಕಾರದೊಂದಿಗೆ ಕೈಜೋಡಿಸಿ ಬೃಹತ್ ಸಂಗೀತ, ನೃತ್ಯೋತ್ಸವ ಆಯೋಜಿಸಿರುವುದು ದಾವಣಗೆರೆಗೆ ಹೆಮ್ಮೆಯ ಸಂಗತಿ. ದಾವಣಗೆರೆಯಿಂದ 8 ಮತ್ತು ಭಾರತದಿಂದ 80 ಮಕ್ಕಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದಾರೆ. ಒಟ್ಟಾರೆ 110ಕ್ಕೂ ಹೆಚ್ಚು ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಚಿರಂತನಾ ಸಂಸ್ಥೆಯ ಅಧ್ಯಕ್ಷರಾದ ದೀಪಾ ಎನ್.ರಾವ್ ಇದ್ದರು.

## ತರೀಕೆರೆ-ಮೊಸರಳ್ಳಿ ರೈಲು ಮಾರ್ಗ ಪರೀಶೀಲನೆ: ವಾಹನಗಳ ಒಡಾಟಕ್ಕೆ ಬದಲಿ ಮಾರ್ಗ

**ಶಿವಮೊಗ್ಗ:** ತರೀಕೆರೆ ಮೊಸರಳ್ಳಿ ನಡುವೆ ಬರುವ ಎಲ್‌ಸಿ.ನಂ: 24 ಮತ್ತು25 ಗಳನ್ನು ಮುಚ್ಚಲು ಅದಕ್ಕಾಗಿ ಎಲ್‌ಸಿ ಓಪನ್ನಿಗೆ ಮತ್ತು ಪರೀಕ್ಷೆಗಾಗಿ ಅ.06 ರಿಂದ 08 ರವರೆಗೆ ತಾತ್ಕಾಲಿಕವಾಗಿ ವಾಹನಗಳು ಮತ್ತು ಸಾರ್ವಜನಿಕರು ಸಮೀಪದ ಬದಲಿ ಮಾರ್ಗಗಳಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿ ಆದೇಶ ನೀಡಿರುತ್ತಾರೆ.

ಎಲ್‌ಸಿ 24- ಕಾಳಿಂಗಹಳ್ಳಿ ರಸ್ತೆ ರೈಲು ನಿಲ್ದಾಣ ಅ. 06 ರಂದು ಬೆ. 9.00 ರಿಂದ 07 ರಂದು ಬೆ 10.00ರವರೆಗೆ ಮಾರ್ಗ-1 ಬಾರಂದೂರು ಮೂಲಕ ಎಲ್.ಸಿ. 25 ಹಳ್ಳಿಕೆರೆ ಮುಖಾಂತರ ಮೊಸರಳ್ಳಿಗೆ ಹೋಗುವುದು ಹಾಗು 2) ಅಪ್ಪಾಜಿ ಬಡಾವಣೆಯಿಂದ ಕಾಳಿಂಗನಹಳ್ಳಿ ರಸ್ತೆ, ಭದ್ರಾವತಿಯಿಂದ ಮೊಸರಳ್ಳಿಗೆ ಹೋಗುವ ವಾಹನಗಳು ಶಿವನಿ ಕ್ರಾಸ್ ಮುಖಾಂತರ ಅಂತರಗಂಗೆಯಿಂದ ಮೊಸರಳ್ಳಿಗೆ ಹೋಗುವುದು.

ಎಲ್.ಸಿ.25- ಕೆಂಚೇನಹಳ್ಳಿ ರಸ್ತೆ ರೈ.ನಿ.-ಅ.07 ಮತ್ತು 08 ರಂದು ಮಾರ್ಗ-1 ಬರಂದೂರು ಮೂಲಕ ಎಲ್‌ಸಿ -24 2) ಅಪ್ಪಾಜಿ ಬಡಾವಣೆಯಿಂದ ಕಾಳಿಂಗನಹಳ್ಳಿ ರಸ್ತೆ ಭದ್ರಾವತಿಯಿಂದ ಮೊಸರಳ್ಳಿಗೆ ಹೋಗುವ ವಾಹನಗಳು ಶಿವನಿ ಕ್ರಾಸ್ ಮುಖಾಂತರ ಅಂತರಗಂಗೆ ಯಿಂದ ಮೊಸರಳ್ಳಿಗೆ ಹೋಗುವುದು.

ಈ ಬದಲಿ ಮಾರ್ಗಗಳಲ್ಲಿ ಸಂಚರಿಸಿ ಇಲಾಖೆಯೊಂದಿಗೆ ಸಹಕರಿಸುವಂತೆ ಕೋರಿದೆ.

## ಕಟ್ಟಡದ ಎತ್ತರವನ್ನು 21ರಿಂದ 15 ಮೀಟರ್‌ಗೆ ಪರಿಷ್ಕರಿಸಿದ ರಾಜ್ಯ ಸರ್ಕಾರ

# 4 ಅಂತಸ್ತು ಕಟ್ಟಡಕ್ಕೆ ಫೈರ್ ಎನ್‌ಒಸಿ ಕಡ್ಡಾಯ

### ರೂ 734 ಕೋಟಿ ಮೌಲ್ಯದ ಆಸ್ತಿ ನಷ್ಟ

**ಅಗ್ನಿಶಾಮಕ ಇಲಾಖೆಗೆ 2022-23ರಲ್ಲಿ 2.87 ಲಕ್ಷ ಕರೆಗಳು ಬಂದಿದ್ದು, 404.44 ಕೋಟಿ ರೂ. ಅಸ್ತಿ ನಷ್ಟವಾಗಿದೆ. ಆ ಪೈಕಿ 76 ಮಂದಿ ಮೃತಪಟ್ಟಿದ್ದರೆ, 123 ಮಂದಿ ರಕ್ಷಣೆ ಮಾಡಲಾಗಿದೆ. 221 ಜನರು ರಕ್ಷಣೆ ಮಾಡಲಾಗಿದೆ 201 ಮಂದಿ ಗಾಯಗೊಂಡಿದ್ದಾರೆ ತುರ್ತು ವಾಹನಗಳೂ ಸ್ಥಳಕ್ಕೆ ದೌಡಹಿಸುವಷ್ಟರಲ್ಲಿ 2023-24 ನೇ ಸಾಲಿನಲ್ಲಿ 1344 ಜನರು ಪ್ರಾಣ ಕಳಿದುಕೊಂಡರು 2024-25 1522 ಮಂದಿ ಮೃತಪಟ್ಟಿದ್ದಾರೆ 2.38 ಲಕ್ಷ ಕರೆಗಳು ಬಂದಿದ್ದು, 330.26 ಕೋಟಿರೂ. ಆಸ್ತಿ ನಷ್ಟವಾಗಿದೆ. 48 ಮಂದಿ ಮೃತಪಟ್ಟಿದ್ದಾರೆ. 121 ಜನರ ರಕ್ಷಣೆ ಮಾಡಲಾಗಿದೆ. 201 ಮಂದಿ ಗಾಯಗೊಂಡಿದ್ದಾರೆ. ತುರ್ತು ವಾಹನಗಳು ಸ್ಥಳಕ್ಕೆ ದೌಡಾಯಿಸುವಷ್ಟರಲ್ಲಿ 2023-24 0 1,344 ಣಚಿಭಿಟಿಂಜ 2024-25ನೇ ಸಾಲಿನಲ್ಲಿ 1,252 ಮಂದಿ ಮೃತಪಟ್ಟಿದ್ದಾರೆ. ಒಟ್ಟು ಎರಡು ವರ್ಷದಲ್ಲಿ ರಾಜ್ಯದ ವಿವಿಧ ಜಿಲ್ಲೆಯಲ್ಲಿ ಸಾವಿನ ಸಂಖ್ಯೆ ಎರಡೂವರೆ ಸಾವಿರ ದಾಟಿದ್ದು, 734 ಕೋಟಿ ರೂ. ಮೌಲ್ಯದ ಆಸ್ತಿ**

**ಬೆಂಗಳೂರು:** ರಾಜ್ಯದಲ್ಲಿ ಕಟ್ಟಡ ಅಗ್ನಿ ಅವಘಡ ಪ್ರಕರಣ ಹೆಚ್ಚುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿರುವ ಸರ್ಕಾರ ನಿರಾಕ್ಷೇಪಣಾ ಪತ್ರ (ಎನ್ ಒಸಿ) ನಿಯಮ ಪರಿಷ್ಕರಿಸಿದೆ. ಅಗ್ನಿ ಶಾಮಕ, ತುರ್ತು ಸೇವೆಗಳ ಇಲಾಖೆ ನಿಯಮದಂತೆ 21 ಮೀಟರ್ ಎತ್ತರದ ಕಟ್ಟಡಗಳಿಗೆ ಎನ್‌ಒಸಿ ಕಡ್ಡಾಯವಾಗಿತ್ತು. ಇನ್ಮುಂದೆ 15 ಮೀಟರ್ ಎತ್ತರದ ಕಟ್ಟಡಗಳಿಗೂ (ಅಂದಾಜು 4 ಅಂತಸ್ತು) ಎನ್‌ಒಸಿ ಕಡ್ಡಾಯವಾಗಿದೆ. ಶೈಕ್ಷಣಿಕ ಕಟ್ಟಡ, ಆಸ್ಪತ್ರೆ, ವಸತಿ, ವಾಣಿಜ್ಯ, ಕೈಗಾರಿಕೆ, ಗೋದಾಮಿನ ಉಪಯೋಗಕ್ಕಾಗಿ ಬಹುಮಹಡಿಯ 15 ಮೀಟರ್ ಎತ್ತರದ ಕಟ್ಟಡಗಳಿಗೆ ಕಡ್ಡಾಯವಾಗಿ ನಿರಾಕ್ಷೇಪಣಾ ಪತ್ರ ಪಡೆಯುವ ನಿಯಮ ಅನ್ವಯವಾಗಲಿದೆ.

**ಪರಿಶೀಲನಾ ವರದಿ ಸಲ್ಲಿಕೆ:** ಜಿಲ್ಲಾ ಮಟ್ಟದಲ್ಲಿ ಅಗ್ನಿಶಾಮಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಬಹುಮಹಡಿ ಕಟ್ಟಡ ಪರಿಶೀಲಿಸಿ ನಿಗದಿತ ನಮೂನೆಯಲ್ಲಿ ಸಂಬಂಧಪಟ್ಟ ಪ್ರಾದೇಶಿಕ ಅಗ್ನಿಶಾಮಕ ಅಧಿಕಾರಿಗಳಿಗೆ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ. ಪ್ರಾದೇಶಿಕ ಆಯುಕ್ತರು ಸಲ್ಲಿಸುವ ನಿರಾಕ್ಷೇಪಣಾ ವರದಿ ಪರಿಶೀಲಿಸಿ ಸಂಬಂಧಪಟ್ಟ




ಕಟ್ಟಡ ಮಾಲೀಕರಿಗೆ ನಿಗದಿತ ಶುಲ್ಕವನ್ನು ಸರ್ಕಾರಕ್ಕೆ ಪಾವತಿಸಲು ಕ್ರಮ ಕೈಗೊಳ್ಳುವಂತೆ ಆದೇಶದಲ್ಲಿ ತಿಳಿಸಲಾಗಿದೆ. ರಾಷ್ಟ್ರೀಯ ಕಟ್ಟಡ ಸಂಹಿತೆ 2016 ಆದೇಶನ್ವಯ 21 ಮೀಟರ್ ನಲ್ಲಿ ಅಂದಾಜು 5 ಅಂತಸ್ತಿನ ಕಟ್ಟಡ ನಿರ್ಮಾಣಕ್ಕೆ ಅಗ್ನಿಶಾಮಕ ಇಲಾಖೆಯಿಂದ ಎನ್‌ಓಸಿ ಪಡೆಯಲಾಗುತ್ತಿತ್ತು. ಆದರೆ, ಆದರೆ 15 ಮೀಟರ್ ಕಡ್ಡಾಯಗೊಳಿಸಿರುವುದರಿಂದ 4 ಅಂತಸ್ತಿನ ಕಟ್ಟಡಗಳಿಗೆ ನಿರಾಕ್ಷೇಪಣಾ

### 2 ವರ್ಷ 2,596 ಸಾವು

**ರಾಜ್ಯದಲ್ಲಿ ಅಗ್ನಿ ದುರಂತದಿಂದ ಕಳೆದ ಎರಡು ವರ್ಷದಲ್ಲಿ 2,595 ಜನರು ಮೃತಪಟ್ಟಿದ್ದಾರೆ. ವಾಣಿಜ್ಯ ಕಟ್ಟಡ, ಮನೆ, ಕಾರ್ಖಾನೆ, ಗೋದಾಮು ಸೇರಿದಂತೆ ವಿವಿಧ ಕಡೆ ಸಂಭವಿಸುತ್ತಿರುವ ದುರ್ಘಟನೆಯಿಂದ ಪ್ರತಿ ವರ್ಷ 1,200 ರಿಂದ 1,300 ಜನರು ಮೃತಪಡುತ್ತಿದ್ದಾರೆ.**

## ಕೃಷ್ಣಾ-ಭೀಮಾ ನದಿ ತೀರದಲ್ಲಿ ಪ್ರವಾಹ ಸ್ಥಿತಿ, ರಕ್ಷಣೆ ಪರಿಹಾರ ಕಾರ್ಯ ಕೈಗೊಳ್ಳಲು ಸಿಎಂ ಸೂಚನೆ



**ಕಲಬುರಗಿ:** ಭೀಮನದಿ ತೀರ ಹಾಗೂ ಬೆಣ್ಣೆತೋರಾದಲ್ಲಿ ಪ್ರವಾಹದ ಪರಿಸ್ಥಿತಿ ಉದ್ಭವಿಸಿರುವ ಹಿನ್ನೆಲೆಯಲ್ಲಿ ತೀವ್ರ ನಿಗಾವಹಿಸಿ, ಅಗತ್ಯ ರಕ್ಷಣಾ ಮತ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಂದಾಯ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲೆಯಲ್ಲಿ ಸುರಿದ ನಿರಂತರ ಮಳೆ ಹಾಗೂ ಕೃಷ್ಣ ನದಿಯ ಮಹಾರಾಷ್ಟ್ರದ ಉಜನಿ ಹಾಗೂ ನೀರ ಜಲಾಶಯದಿಂದ ಹೆಚ್ಚಿನ ಪ್ರಮಾಣದ ನೀರನ್ನು ಹೊರಬಿಟ್ಟಿರುವುದರಿಂದ ಪ್ರವಾಹ ಸ್ಥಿತಿ ಎದುರಾಗಿದೆ.

ಈ ಹಿನ್ನೆಲೆಯಲ್ಲಿ ಕಂದಾಯ ಸಚಿವರಾದ ಕೃಷ್ಣಬೈರೇಗೌಡ, ಮತ್ತು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಹಾಗೂ ಕಲ್ಬುರ್ಗಿ ಜಿಲ್ಲಾಧಿಕಾರಿಗಳಿಗೆ ಮುಖ್ಯಮಂತ್ರಿಗಳು ಅಗತ್ಯ ರಕ್ಷಣಾ, ಪರಿಹಾರ ಕಾರ್ಯಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಸಿಇಒ ಗಳು ಪ್ರವಾಹ ಪೀಡಿತ ಪ್ರದೇಶಗಳಿಗೆ ಖುದ್ದು ಭೇಟಿ ನೀಡಿ ತುರ್ತು ಕ್ರಮ ಕೈಗೊಳ್ಳಬೇಕು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ತಕ್ಷಣ ಜಿಲ್ಲೆಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ ಸೂಕ್ತ ಕ್ರಮ ಕೈಗೊಳ್ಳಲು ಜಿಲ್ಲಾಡಳಿತಕ್ಕೆ ಸೂಚನೆಗಳನ್ನು ನೀಡಬೇಕೆಂದು ನಿರ್ದೇಶನ ನೀಡಿದ್ದಾರೆ.

ಗ್ರಾಮೀಣಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆಯ ಅಪರ ಮುಖ್ಯಕಾರ್ಯದರ್ಶಿಗಳು ಸ್ಥಳಕ್ಕೆ ಭೇಟಿ ನೀಡಬೇಕು, ಮಾನವ ಮತ್ತು ರಾಸುಗಳ, ಜಾನವಾರುಗಳ ಪ್ರಾಣಹಾನಿ ಆಗದಂತೆ ಎಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ.

ಸಂತ್ರಸ್ಥರಿಗೆ ಆಹಾರ ಕೇಂದ್ರಗಳು, ಜಾನವಾರುಗಳಿಗೆ ಅಗತ್ಯ ಮೇವಿನ ವ್ಯವಸ್ಥೆ ಜೊತೆಗೆ ಜನಜಾನುವಾರು ಪ್ರಾಣಕ್ಕೆ ಕುತ್ತು ಉಂಟಾಗದಂತೆ ಅಗತ್ಯ ವ್ಯವಸ್ಥೆಗಳನ್ನು ಕೈಗೊಳ್ಳಬೇಕೆಂದು ಸಿಎಂ ಮುನ್ನೆಚ್ಚರಿಕೆ ನೀಡಿದ್ದಾರೆ.

## ಬೈಕ್ ಸವಾರರ ಜೀವ ಉಳಿಸುವುದಕ್ಕಾಗಿಯೇ ಹೆಲ್ಮೆಟ್ ಧಾರಣೆ

**ಸೊರಬ:** ಬೈಕ್ ಸವಾರರ ಜೀವ ಉಳಿಸುವುದಕ್ಕಾಗಿಯೇ ಹೆಲ್ಮೆಟ್ ಧಾರಣೆ ಕಾನೂನು ಜಾರಿಗೊಳಿಸಿರುವುದು ಎನ್ನುವುದನ್ನು ಪ್ರತಿಯೊಬ್ಬರು ಅರಿತುಕೊಳ್ಳಬೇಕು. ಅನೇಕ ಅಪಘಾತಗಳಲ್ಲಿ ತಲೆಗೆ ತೀವ್ರತರವಾಗಿ ಗಾಯಗೊಂಡು ಮರಣಹೊಂದಿದವರ ಸಂಖ್ಯೆಯೇ ಹೆಚ್ಚಿದೆ ಎಂದು ಪೊಲೀಸ್ ವೃತ್ತ ನಿರೀಕ್ಷಕ ಎಲ್. ರಾಜಶೇಖರ್ ಹೇಳಿದರು.

ಶುಕ್ರವಾರ ಪಟ್ಟಣದ ಪುರಸಭೆ ಮುಂಭಾಗದ ವೃತ್ತದಲ್ಲಿ ಪೊಲೀಸ್ ಇಲಾಖೆ ವತಿಯಿಂದ ಹಮ್ಮಿಕೊಂಡ ರಾಷ್ಟ್ರೀಯ ರಸತೆ ಸುರಕ್ಷತಾ ಸಪ್ತಾಹದ ಅಂಗವಾಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ ಅವರು ಮಾತನಾಡಿದರು.

ಹೆಲ್ಮೆಟ್ ಧರಿಸಿ ಬೈಕ್ ಚಲಾಯಿಸುವುದರಿಂದ ಆಕಸ್ಮಿಕ ಅಪಘಾತಗಳು ಎದುರಾದಾಗ ಕನಿಷ್ಠ ತಮ್ಮ ಜೀವವನ್ನು ಉಳಿಸಿಕೊಳ್ಳಬಹುದು. ಹೆಲ್ಮೆಟ್ ಧರಿಸದೇ ಅಜಾಗರೂಕತೆಯಿಂದ ಚಾಲನೆ ಮಾಡುವುದರಿಂದ ಪ್ರಾಣ ಹಾನಿ ಸಂಭವಿಸುವ

ಸಾಧ್ಯತೆ ಹೆಚ್ಚು. ವಾಹನ ಸವಾರರು ಅದರಲ್ಲೂ ಯುವಕರು ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಜೀವ ಮತ್ತು ಜೀವನ ಅಮೂಲ್ಯವಾದುದು ಎಂಬುದನ್ನು ಅರಿತುಕೊಳ್ಳಬೇಕು ಎಂದರು.

ಪಿಎಸ್‌ಐ ಎಂ.ಎಚ್. ನವೀನ್ ಮಾತನಾಡಿ, ಬೈಕ್ ಚಾಲನೆ ವೇಳೆ ತಲೆಗೆ ಪೆಟ್ಟಾಗಿ ಸಾವನ್ನಪ್ಪಿರುವವರು ಹೆಚ್ಚಾಗಿದ್ದಾರೆ.




ಇದಕ್ಕೆ ಹೆಲ್ಮೆಟ್ ಧರಿಸದಿರುವುದೇ ಮುಖ್ಯ ಕಾರಣ. ನಿಮ್ಮ ಮನೆಯವರು ಹಾಗೂ ನಿಮ್ಮನ್ನು ನಂಬಿದವರಿಗೋಸ್ಕರ ಹೆಲ್ಮೆಟ್ ಕಡ್ಡಾಯವಾಗಿ ಧರಿಸಲೇಬೇಕು. ವಾಹನಗಳ ಚಾಲನೆ ವೇಳೆ ಚಾಲನಾ ಪರವಾನಗಿ, ವಾಹನಗಳ ದಾಖಲೆ, ವಿಮೆ ಸೇರಿದಂತೆ ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ಹೊಂದಬೇಕು.

ಅಪ್ರಾಪ್ತರು ವಾಹನ ಚಾಲನೆ ಮಾಡಿದರೆ ಪೋಷಕರಿಗೆ ಅಥವಾ ವಾಹನಗಳ ಮಾಲೀಕರಿಗೆ 25 ಸಾವಿರ ರೂ., ದಂಡ ಬೀಳಲಿದೆ. 18 ವರ್ಷ ತುಂಬಿದ ನಂತರ ಸಾರಿಗೆ ಇಲಾಖೆಯಿಂದ ಚಾಲನಾ ಪರವಾನಗಿ ಪಡೆದು ವಾಹನ ಓಡಿಸಲು ಪೋಷಕರು ಅನುಮತಿ ನೀಡಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕಲ್ಲಂಗಡಿ ಹಣ್ಣಿನ ಮೂಲಕ ಹೆಲ್ಮೆಟ್ ಧರಿಸದಿದ್ದರೆ ಉಂಟಾಗ ಬಹುದಾದ ಹಾನಿಯ ಕುರಿತು ಪ್ರಾತ್ಯಕ್ಷಿಕೆಯನ್ನು ಸಾರ್ವಜನಿಕರಿಗೆ ತೋರಿಸಲಾಯಿತು.

ಎಎಸ್‌ಐ ಧರ್ಮರಾಜ್, ಹೆಡ್‌ಕಾನ್ಸ್‌ಟೇಬಲ್‌ಗಳಾದ ಸೋಮಾನಾಯ್ಕ್, ರಾಜು ನಾಯ್ಕ್, ಆರ್. ಗಿರೀಶ್, ಕಾನ್ಸ್‌ಟೇಬಲ್‌ಗಳಾದ ಹನುಮಂತಪ್ಪ, ದಿನೇಶ್ ಕುಮಾರ್,

ದಿನೇಶ್ ಕುಮಾರ್, ಇರ್ಶಾದ್ ಖಾನ್, ಡಿ. ಸೋಮಶೇಖರ, ಸಿ.ವಿ. ಉಮೇಶ್, ಕಿರಣ್‌ಕುಮಾರ್, ಸಿ.ಬಿ. ರವೀಂದ್ರ ಸೇರಿದಂತೆ ಸಾರ್ವಜನಿಕರು, ಆಟೋ ಚಾಲಕರು, ವಿದ್ಯಾರ್ಥಿಗಳು ಇದ್ದರು.

## ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಸಹಕಾರ

**ಶಿವಮೊಗ್ಗ:** ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಂ೨ುವ೨ುಬದ್ದಗ್ೊಳಿಸ್೨ುವಿಕ್ ಯೋಜನೆಯು ಒದು ವಿಶೇಷ ಯೋಜನೆಯಾಗಿದ್ದು ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ಕೃಷಿ ವಿಶ್ವವಿದ್ಯಾಲಯದಿಂದ ಲಭ್ಯವಿರುವ ಎಲ್ಲ ಸಹಕಾರ ನೀಡಲಾಗುವುದು ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ.ಆರ್.ಸಿ ಜಗದೀಶ್ ತಿಳಿಸಿದರು.

ಆತ್ಮನಿರ್ಭರ ಭಾರತ ಅಭಿಯಾನ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನ ಗಳ ಸಂಸ್ಕರಣೆ ಹಾಗೂ ರಫ್ತುನಿಗಮ ನಿಯಮಿತ(ಕೆಎಪಿಪಿಇಸಿ), ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕೃಷಿ ತರಬೇತಿ ಕೇಂದ್ರ ಹಳ್ಳಿಕೆರೆ ಹಾಗೂ ಕೃಷಿ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಗುರುವಾರ ಜಿ.ಪಂ. ಸಭಾಂಗಣದಲ್ಲಿ ಫಲಾನುಭವಿಗಳಿಗೆ ಏರ್ಪಡಿಸಲಾಗಿದ್ದ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ದಗೊಳಿಸುವಿಕೆ ಹಾಗೂ ಆತ್ಮ ಯೋಜನೆ ಕುರಿತಾದ ಅರಿಚು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹೊಸದಾಗಿ ಕಿರು ಉದ್ದಿಮೆ ಆರಂಭಿಸುವವರಿಗೆ ವಿಶ್ವವಿದ್ಯಾಲಯದಿಂದ ಸಂಸ್ಕರಣೆಗೆ ಜಾಗ, ಪ್ರಯೋಗಾಲಯ



ಹಾಗೂ ಬ್ಯಾಂಕ್ ಮೂಲಕ ಸಾಲ ಕೂಡ ಕೊಡಿಸಲಾಗುವುದು ಎಂದರು.

ಜಿಲ್ಲೆಯಿಂದ 100 ಟನ್‌ಗಳಷ್ಟು ಅಪ್ಪೆ ಮಿಡಿ ವಿದೇಶಕ್ಕೆ ರಫ್ತಾಗುತ್ತಿದೆ. ಮೆಕ್ಕೆಜೋಳದಿಂದ 50 ಕ್ಕೂ ಹೆಚ್ಚಿನ ಬಗೆಯ ಖಾದ್ಯವನ್ನು ಮಾಡಬಹುದು. ಹಾಗೂ ಹೊಸ ಹೊಸ ಖಾದ್ಯಗಳ ಸಂಶೋಧನೆಗೂ ಅವಕಾಶ ಇದೆ. ಮಸಾಲೆ ಪದಾರ್ಥಗಳ ಸಂಶೊಧನೆಗಳನ್ನು ಕೂಡ ಮಾಡಬಹುದು.

ಅಣಬೆ ಹಾಗೂ ಬೇಕರಿ ಉದ್ಯಮದಲ್ಲಿ ಆಸಕ್ತಿ ಇರುವರಿಗೆ ತರಬೇತಿ ನೀಡಲಾಗುತ್ತದೆ. ಚಾಕೊಲೇಟ್ ಉದ್ಯಮ ಮಾಡುವವರಿಗೂ ಪ್ರೋತ್ಸಾಹ ನೀಡಲಾಗುತ್ತದೆ. ಹಾಗೂ ವಿವಿಧ ಖಾದ್ಯಗಳಲ್ಲಿ ವಿಟಮಿನ್ ಮತ್ತು ಪ್ರೋಟಿನ್ ಮಟ್ಟವನ್ನು ಪರೀಕ್ಷೆ ಮಾಡಲಾಗುತ್ತದೆ ಎಂದ ಅವರು ತಾಂತ್ರಿಕತೆ ಬಗ್ಗೆ ತರಬೇತಿ ಹಾಗೂ ಖಾದ್ಯಗಳ ಪ್ಯಾಕಿಂಗ್‌ಗೂ ತರಬೇತಿ ನೀಡಲಾಗುವುದು. ನಮ್ಮಲ್ಲಿರುವ ವಿಜ್ಞಾನಿಗಳು ಮತ್ತು ಸೌಲಭ್ಯಗಳನ್ನು ರೈತರು, ಆಸಕ್ತರು ಸದುಪಯೋಗ ಪಡಿಸಿಕೊಳ್ಳಬೇಕೆಂದರು.

ಕೆಎಪಿಪಿಇಸಿ ಯ ವ್ಯವಸ್ಥಾಪಕ ನಿರ್ದೇಶಕ ಸಿ.ಎ.ಶಿವಪ್ರಕಾಶ್ ಮಾತನಾಡಿ, ರೈತರ ಆದಾಯ ಹೆಚ್ಚಿಸಿ ಅವರನ್ನೂ ಉದ್ದಿಮೆದಾರರನ್ನಾಗಿ ಮಾಡುವ ಉದ್ದೇಶದಿಂದ ಈ ಯೋಜನೆಯನ್ನು 2020-21 ರಲ್ಲಿ ಪ್ರಾರಂಭಿಸಲಾಗಿದೆ. ರೂ. 15 ಲಕ್ಷದವರೆಗೆ ಸಹಾಯಧನ ನೀಡಲಾಗುವುದು. ಈ ಯೋಜನೆಯಡಿ ಕೇಂದ್ರ ಮತ್ತು ರಾಜ್ಯ ಸೇರಿ ರೂ. 10 ಸಾವಿರ ಕೋಟಿ ಮಂಜೂರಾಗಿದ್ದು ರಾಜ್ಯದ ಪಾಲು ರೂ.493.65ಕೋಟಿ ಆಗಿದೆ

ಕೆಎಪಿಪಿಇಸಿ ಟೀಂ ಲೀಡರ್ ಅರವಿಂದ ಕರೆ ಮಾತನಾಡಿ, ಪಿಎಂಎಫ್‌ಎಂಇ ಯೋಜನೆಯಡಿ ಉದ್ದಿಮೆಗಳಿಗೆ ವೃತ್ತಿಪರ ಹಾಗೂ ತಾಂತ್ರಿಕ ಬೆಂಬಲ ದೊರೆಯುವಿಕೆಯನ್ನು ಹೆಚ್ಚಿಸುವುದು. ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಬೆಂಬಲ, ಸಾಮಾನ್ಯ ಮೂಲಭೂತ ಸೌಕರ್ಯಕ್ಕೆ ಬೆಂಬಲ, ಸಾಮರ್ಥ್ಯ ನಿರ್ಮಾಣ ಹಾಗೂ ಸಂಶೋಧನೆ, ಕಿರು ಉದ್ದಿಮೆಗಳ ವೈಯಕ್ತಿಕ ಹಾಗೂ ಗುಪುಗಳಿಗೆ ಬೆಂಬಲ ನೀಡಲಾಗುವುದು.

ಬ್ರಾಂಡಿಂಗ್ ಹಾಗೂ ಮಾರ್ಕೆಟಿಂಗ್ ಅನ್ನು ಬಲಪಡಿಸುವುದು, ಸಾಮಾನ್ಯ ಸಂಸ್ಕರಣಾ ಸೌಲಭ್ಯ, ಪ್ರಯೋಗಾಲಯಗಳು, ದಾಸ್ತಾನನ್ನು ಶೇಖರಣೆ, ಪ್ಯಾಕೇಜಿಂಗ್, ಮಾರ್ಕೆಟಿಂಗ್ ಹಾಗೂ ಇನ್‌ಕ್ಯೂಬೇಷನ್ ಸೇವೆಗಳಂತಹ ಸಾಮಾನ್ಯ ಸೇವೆಗಳ ದೊರೆಯುವಿಕೆಯನ್ನು ಹೆಚ್ಚಿಸುವುದು. ತಾಂತ್ರಿಕ ಸಂಸ್ಥೆಗಳನ್ನು ಬಲಪಡಿಸುವುದು, ಆಹಾರ ಸಂಸ್ಕರಣಾ ವಲಯದಲ್ಲಿ ಸಂಶೋಧನೆ ಹಾಗೂ ತರಬೇತಿಗೆ ಪ್ರೋತ್ಸಾಹ ನೀಡಲಾಗುವುದು ಎಂದ ಅವರು, ಈ ಯೋಜನೆಯಡಿ ಅರ್ಜಿ ಸಲ್ಲಿಕೆ ವಿಧಾನ, ಡಿಆರ್‌ಪಿ (ಜಿಲ್ಲಾ ಸಂಪನ್ಮೂಲ ವ್ಯಕ್ತಿ) ಆಯ್ಕೆ ಇತರೆ ಮಾಹಿತಿ ನೀಡಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಹನುಮಂತಪ್ಪ ಮಾತನಾಡಿ ಈ ಯೋಜನೆಗೆ ಸಂಬಂಧಿಸಿದಂತೆ ಲಭ್ಯವಿರುವ ಸಾಲ ಸೌಲಭ್ಯದ ಕುರಿತು ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಲಾಯಿತು.

ಜಿ.ಪಂ ಉಪ ಕಾರ್ಯದರ್ಶಿ ಸುಜಾತ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ನಾಗರಾಜ್, ಪಶುಪಾಲನಾ ಇಲಾಖೆಯ ಉಪ ನಿರ್ದೇಶಕ ಬಾಬುರಾಮ್. ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕ ಶಿವಕುಮಾರ್, ಇತರೆ ಅಧಿಕಾರಿಗಳು, ಯೋಜನೆಯ ಫಲಾನುಭವಿಗಳು ಪಾಲ್ಗೊಂಡಿದ್ದರು


## ಅಡವೀಂದ್ರಸ್ವಾಮಿ ಮಠದಲ್ಲಿ ಅನ್ನಪೂರ್ಣೇಶ್ವರಿದೇವಿ ಜಾತ್ರೆ-ಜನಪದ ಜೀವನ ದರ್ಶನ

ಗದಗ: ಪ್ರತಿಯೊಬ್ಬ ನಾರಿಯಲ್ಲಿಯೂ ಒಬ್ಬಳು ಮಹಾಕಾಳಿ, ಸರಸ್ವತಿ, ಲಕ್ಷ್ಮಿ ಆವಾಸ ಸ್ಥಾನವಿದೆ. ಅದನ್ನು ಜಾಗೃತ ಗೊಳಿಸಿಕೊಂಡರೆ ಸಾಮಾನ್ಯ ನಾರಿ ಕೂಡಾ ಎತ್ತರದ ಸ್ಥಾನಕ್ಕೆ ಏರಬಲ್ಲಳು ಎಂದು ಕನಕಗಿರಿಯ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದ ಶ್ರೀನಿರಂಜನಪ್ರಭು ಡಾ.ಚನ್ನಮಲ್ಲ ಮಹಾಸ್ವಾಮಿಗಳು ಹೇಳಿದರು.

ನಗರದ ಮುಳಗುಂದನಾಕಾ ಬಳಿಯ ಶ್ರೀಅಡವೀಂದ್ರಸ್ವಾಮಿ ಮಠದಲ್ಲಿ ದಸರಾ ಮಹೋತ್ಸವ, ಶ್ರೀಅನ್ನಪೂರ್ಣೇಶ್ವರಿ ದೇವಿ ಜಾತ್ರೆ ಹಾಗೂ ಜನಪದ ಜೀವನ ದರ್ಶನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಶ್ರೀದೇವಿಯು ಮಹಾಲಕ್ಷ್ಮೀಯಾಗಿ ಬಡತನ ದೂರ ಮಾಡುತ್ತಾಳೆ, ಸರಸ್ವತಿಯಾಗಿ ನಮ್ಮ ಅಜ್ಞಾನವನ್ನು ದೂರ ಮಾಡುತ್ತಾಳೆ. ದುರ್ಗಿಯಾಗಿ ದುಷ್ಟರನ್ನು ಧಮನ ಮಾಡುತ್ತಾಳೆ. ಈ ಭಾವ, ಈ ಅನುಸಂಧಾನ ಶ್ರೀದೇವಿ ಜತೆ ಇದ್ದರೆ, ನಿಮ್ಮ ಮನೆಯ ಮಕ್ಕಳು ಸಾಮಾನ್ಯ ಮಕ್ಕಳಾಗದೇ ವಿಶಿಷ್ಟ ವ್ಯಕ್ತಿಗಳಾಗಿ ಹೊರಹೊಮ್ಮುತ್ತಾರೆ ಎಂದು ಸ್ವಾಮೀಜಿ ಹೇಳಿದರು.

ಸಮ್ಮುಖ ವಹಿಸಿದ್ದ ಶ್ರೀಮಠದ ಧರ್ಮದರ್ಶಿಗಳಾದ ಮಹೇಶ್ವರ ಸ್ವಾಮೀಜಿ




ಶ್ರೀದೇವಿಯ ಆರಾಧನೆ ಹಾಗೂ ಮಹಿಳೆಯರಿಂದಲೇ ಜರುಗುವ ಶ್ರೀಅನ್ನಪೂರ್ಣೇಶ್ವರಿದೇವಿಯ ಜಾತ್ರೆ ನಡೆದುಬಂದ ಹಾದಿಯನ್ನು ವಿವರಿಸಿದರಲ್ಲದೇ, ಇದಕ್ಕಾಗಿ ಶ್ರಮಿಸಿದ ಗಣ್ಯಮಾನ್ಯರನ್ನು ಸ್ಮರಿಸಿದರು.

ಹಿರಿಯ ಜಾನಪದ ವಿದ್ವಾಂಸರು, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ.ಶಂಭು ಬಳಿಗಾರ ಅವರು ಜನಪದ ಜೀವನ ದರ್ಶನ ಕಾರ್ಯಕ್ರಮದಲ್ಲಿ ಇಂದಿನ ಸಮಾಜಕ್ಕೆ ಬೇಕಾದ ಮಾರ್ಗದರ್ಶನಗಳನ್ನು ನೀಡಿದರಲ್ಲದೇ, ಜಾನಪದ ನಡೆದು ಬಂದ ಹಾದಿಯನ್ನು ವಿವರಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಹಿರಿಯ ಜಾನಪದ ವಿದ್ವಾಂಸರಾದ ಡಾ.ಶಂಭು ಬಳಿಗಾರ, ಶ್ರೀಮತಿ ರೇಣುಕಾ ಶರಣ ಪಾಟೀಲ, ದತ್ತಾ ಪ್ರಾಪರ್ಟಿಸ್ ನಿರ್ದೇಶಕರಾದ ಕಿರಣ ಪ್ರಕಾಶ ಭೂಮಾ, ಎಸ್.ಎಸ್. ಶಿವನಗೌಡ್ರ, ಸದಾಶಿವ ಚನ್ನಪ್ಪನವರ, ಹಿರಿಯ ಲೆಕ್ಕ ಪರಿಶೋಧಕರಾದ ವೀರೇಶ ಕೂಗು ಮುಂತಾದವರು ಶ್ರೀಗಳಿಂದ ಗುರುರಕ್ಷೆ ಪಡೆದರು.

ಶ್ರೀಅನ್ನಪೂರ್ಣೇಶ್ವರಿದೇವಿ ಜಾತ್ರಾ ಮಹೋತ್ಸವ ಸಮಿತಿಯ ಗೌರವಾಧ್ಯಕ್ಷರಾದ ಎಸ್.ಪಿ. ಸಂಶಿಮಠ, ಅಧ್ಯಕ್ಷರಾದ ಸದಾಶಿವಯ್ಯ ಮದರಿಮಠ, ಪ್ರಧಾನ ಕಾರ್ಯದರ್ಶಿ ಶರಣಬಸಪ್ಪ ಗುಡಿಮನಿ, ಮಹಿಳಾ ಸಮಿತಿ ಅಧ್ಯಕ್ಷರಾದ ಸುವರ್ಣಾ ಮದರಿಮಠ ಮುಂತಾದ ಗಣ್ಯರು ವೇದಿಕೆಯಲ್ಲಿದ್ದರು.

ಪೂಜಾ ಸಮಿತಿ ಅಧ್ಯಕ್ಷರಾದ ಶರಣಯ್ಯಸ್ವಾಮಿ ಶಿವಪ್ಪಯ್ಯನಮಠ, ವೀರೇಶ್ವರ ಸ್ವಾಮಿಗಳು ಹೊಸಳ್ಳಿಮಠ, ಜಾತ್ರಾ ಮಹೋತ್ಸವ ಸಮಿತಿ ಕಾರ್ಯದರ್ಶಿ

ಗೀತಾ ಎಂ. ಹೂಗಾರ, ಸಹಕಾರ್ಯದರ್ಶಿ ಸುಷ್ಮಾ ಖಂಡಪ್ಪಗೌಡ್ರ, ಕೋಶಾಧ್ಯಕ್ಷರಾದ ಅಶ್ವಿನಿ ನೀಲಗುಂದ, ವಿ.ಎಚ್. ದೇಸಾಯಿಗೌಡ್ರ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

ಸಮಾರಂಭದಲ್ಲಿ ವಿವಿಧ ಭಕ್ತಿಸೇವೆ ವಹಿಸಿದ್ದ ಗಣ್ಯರು, ಜಾತ್ರೆಯಲ್ಲಿ ಸೇವಾಕಾರ್ಯ ಕೈಗೊಂಡವರಿಗೆ ಗುರುರಕ್ಷೆ ನೀಡಲಾಯಿತು.

ಜಾತ್ರೆಯ ಮಹಿಳಾ ಸಮಿತಿ ಅಧ್ಯಕ್ಷರಾದ ಶ್ರೀಮತಿ ಸುವರ್ಣಾ ಮದರಿಮಠ ಸ್ವಾಗತಿಸಿದರು. ಶ್ರೀಮತಿ ವಿಜಯಲಕ್ಷ್ಮೀ ಹೊಸಳ್ಳಿಮಠ, ಜಯಶ್ರೀ ವಸ್ತ್ರದ ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಕಸ್ತೂರಿಬಾಯಿ ಭಾಂಡಗೆ ವಂದಿಸಿದರು.

## ಸಾಮಾನ್ಯ ಸಭೆ

**ರಾಮನಗರ:** ಇಲ್ಲಿನ ನಗರಸಭೆಯ ಪ್ರಶಸ್ತಿ ಭವನದಲ್ಲಿ ಅ. 9ರ ಗುರುವಾರ ಬೆಳಿಗ್ಗೆ 11 ಗಂಟೆಗೆ ನಗರಸಭೆ ಅಧ್ಯಕ್ಷರಾದ ಕೆ. ಶೇಷಾದ್ರಿ (ಶಶಿ) ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ಆಯೋಜಿಸಲಾಗಿದೆ ಎಂದು ರಾಮನಗರ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಹನ ವಿಲೇವಾರಿ

**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ತುಂಗಾನಗರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಹಾಕಿ ತರಬೇತುದಾರರ ಆಯ್ಕೆ: ಅರ್ಜಿ ಆಹ್ವಾನ

**ಬಳ್ಳಾರಿ:** ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಜಿಲ್ಲೆಯ ಹಾಕಿ ಖೇಲೋ ಇಂಡಿಯಾ ಕೇಂದ್ರಕ್ಕೆ ಹಾಕಿ ತರಬೇತುದಾರರ ಆಯ್ಕೆ ಮಾಡಿಕೊಳ್ಳಲು ಉದ್ದೇಶಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.ಕೇಂದ್ರ ಸರ್ಕಾರವು ಖೇಲೋ ಇಂಡಿಯಾ ಯೋಜನೆಯಡಿ ರಾಜ್ಯದಲ್ಲಿ 31 ಜಿಲ್ಲೆಗಳಲ್ಲಿ ಸಣ್ಣ ಖೇಲೋ ಇಂಡಿಯಾ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ರಾಷ್ಟ್ರ ಮಟ್ಟದ ಹಾಕಿ ಕ್ರೀಡಾಪಟುಗಳು ಎನ್.ಐ.ಎಸ್. ಡಿಪ್ಲೊಮಾ ಇನ್ ಹಾಕಿ ಅಥವಾ ಎಂಪೇಡ್ ಹಾಕಿ ಆಟದಲ್ಲಿ ವಿಶೇಷತೆ ಮತ್ತು ರಾಷ್ಟ್ರೀಯ ಪದಕ ವಿಜೇತ, ರಾಜ್ಯ ಪದಕ ವಿಜೇತ, ರಾಷ್ಟ್ರೀಯ ಮಟ್ಟದಲ್ಲಿ ಪ್ರಾತಿನಿಧ್ಯ ವಹಿಸಿದ ರಾಜ್ಯದವರು ಅರ್ಹರಾಗುತ್ತಾರೆ. ಆಸಕ್ತ ಹಾಕಿ ತರಬೇತುದಾರರು ಅರ್ಜಿಗಳನ್ನು ಅಕ್ಟೋಬರ್ 15 ರೊಳಗಾಗಿ ಜಿಲ್ಲಾ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಗೆ ಸಲ್ಲಿಸಬೇಕು.

## ಅರೆಕಾಲಿಕ ಸ್ವಯಂ ಸೇವಕರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಹಾಗೂ ಶಿವಮೊಗ್ಗ ಜಿಲ್ಲೆಯ ಎಲ್ಲಾ ತಾಲೂಕುಗಳ ಕಾನೂನು ಸೇವಾ ಸಮಿತಿಗಳಿಗೆ ಅರೆಕಾಲಿಕ ಸ್ವಯಂ ಸೇವಕರನ್ನು ನೇಮಿಸಿಕೊಳ್ಳುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಿದೆ.ಸಮಾಜದಲ್ಲಿನ ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಹಾಗೂ ಕಾನೂನು ಸೇವೆಗಳನ್ನು ಪಡೆಯಲು ಅರ್ಹರಿರುವ ವ್ಯಕ್ತಿಗಳಿಗೆ ಸೇವಾ ಮನೋಭಾವದಿಂದ ಕೆಲಸ ಮಾಡುವವರಿಗೆ ಮತ್ತು 10ನೇ ತರಗತಿ ಉತ್ತೀರ್ಣರಾಗಿರುವ ಕನ್ನಡ ಓದಲು ಮತ್ತು ಬರೆಯಲು ಬರುವವರಿಗೆ ಆದ್ಯತೆ ನೀಡಲಾಗುವುದು. ಈ ನೇಮಕಾತಿಯು 1 ವರ್ಷದ ಅವಧಿಯವರಿಗೆ ಮಾತ್ರ ಇರುತ್ತದೆ. ಪ್ರಾಧಿಕಾರ/ಸಮಿತಿ ನೀಡುವ ಗೌರವಧನ ಹೊರತುಪಡಿಸಿ ಯಾವುದೇ ಮೊತ್ತವನ್ನು ಅಪೇಕ್ಷಿಸಬಾರದು. ಪ್ರಾಧಿಕಾರ/ಸಮಿತಿ ನೀಡುವ ತರಬೇತಿಯನ್ನು ಮತ್ತು ಸಭೆಗಳಿಗೆ ತಪ್ಪದೆ ಹಾಜರಾಗಬೇಕು ಹಾಗೂ ಅವರಿಗೆ ವಹಿಸಲಾಗುವ ಕಾರ್ಯಗಳನ್ನು ಕ್ಷಮತೆಯಿಂದ ಪ್ರಾಮಾಣಿಕವಾಗಿ ಮಾಡಬೇಕು.

# ಹೃದಯದ ಆರೋಗ್ಯ ವೃದ್ಧಿಸುವ ಮತ್ತು ಕೊಲೆಸ್ಟ್ರಾಲ್ ಕಮ್ಮಿ ಮಾಡುವ 5 ಬಗೆಯ ಹಿಟ್ಟುಗಳು



ಇತ್ತೀಚಿನ ದಿನಗಳಲ್ಲಿ ಮನುಷ್ಯ ಸಾವನ್ನಪ್ಪಲು ಪ್ರಮುಖ ಕಾರಣಗಳು ಎಂದರೆ ಅದು ಕೊಲೆಸ್ಟ್ರಾಲ್ ಮತ್ತು ರಕ್ತದ ಒತ್ತಡ. ಕೊಲೆಸ್ಟ್ರಾಲ್ ಹೆಚ್ಚಾಯಿತು ಎಂದರೆ ರಕ್ತದ ಒತ್ತಡ ಕೂಡ ಏರುಪೇರಾಗುತ್ತದೆ. ಇದು ಹೃದಯದ ತೊಂದರೆಗೆ ಪ್ರಮುಖ ಕಾರಣವಾಗುತ್ತದೆ.

ಬ್ರಿಟಿಷ್ ಹಾರ್ಟ್ ಅಸೋಸಿಯೇಷನ್ ಹೇಳುವ ಹಾಗೆ ಯಾರ ರಕ್ತದಲ್ಲಿ ಹೆಚ್ಚು ಕೊಲೆಸ್ಟ್ರಾಲ್ ಇರುತ್ತದೆ ಅವರಿಗೆ ಹೃದಯಘಾತ ಸಮಸ್ಯೆ ತಪ್ಪಿದ್ದಲ್ಲ. ಹೀಗಾಗಿ ಕೊಲೆಸ್ಟ್ರಾಲ್ ನಿರ್ವಹಣೆಗೆ ಮತ್ತು ಹೃದಯದ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಳ್ಳಲು ಈ ಐದು ಬಗೆಯ ಹಿಟ್ಟುಗಳು ಸಾಕಷ್ಟು ನೆರವಿಗೆ ಬರುತ್ತವೆ. ಹೀಗಾಗಿ ನಿಮ್ಮ ಆಹಾರ ಪದ್ಧತಿಯಲ್ಲಿ ಸಾಧ್ಯವಾದಷ್ಟು ಇವುಗಳನ್ನು ಸೇರಿಸಿ ಸೇವಿಸಿ.

ಬಾಜ್ರಾ ಹಿಟ್ಟು

ಪೌಷ್ಟಿಕಾಂಶಗಳ ಆಗರವಾಗಿರುವ ಬಾಜ್ರಾ ಹಿಟ್ಟು ದೇಹಕ್ಕೆ ಅವಶ್ಯಕವಾಗಿ ಬೇಕಾದ ನಾರು, ಪ್ರೊಟೀನ್, ಮೆಗ್ನೀಷಿಯಮ್ ಜೊತೆಗೆ ಫಾಸ್ಫರಸ್, ಕಬ್ಬಿಣ ಮತ್ತು ಇನ್ನಿತರ ಪೌಷ್ಟಿಕಾಂಶಗಳನ್ನು ಹೆಚ್ಚಾಗಿ ಒಳಗೊಂಡಿರುತ್ತದೆ. ಇವೆಲ್ಲವೂ ಸಹ ಹೃದಯದ ಆರೋಗ್ಯಕ್ಕೆ ಬಹಳ ಒಳ್ಳೆಯದು ಎಂದು ಹೇಳಲಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ಹೇಳುವ ಹಾಗೆ ನಮ್ಮ ಕೊಲೆಸ್ಟ್ರಾಲ್ ಪ್ರಮಾಣವನ್ನು ಕಡಿಮೆ ಮಾಡಲು ಹಿಟ್ಟಿನಲ್ಲಿರುವ ಪೌಷ್ಟಿಕಾಂಶಗಳು ಮತ್ತು ಫೈಟೋ ಕೆಮಿಕಲ್ ಗಳು ಬಹಳ ಸಹಾಯಕ್ಕೆ ಬರುತ್ತವೆ.

### ಅಗಸೆ ಬೀಜಗಳ ಹಿಟ್ಟು



ಅಗಸೆ ಬೀಜಗಳಲ್ಲಿ ಆಂಟಿ ಆಕ್ಸಿಡೆಂಟ್ ಸಹಿತ ಫಾಸ್ಫರಸ್, ಮೆಗ್ನೀಷಿಯಂ ಮತ್ತು ಅಪಾರವಾದ ನಾರಿನ ಅಂಶ ಅಡಗಿದೆ. ಹೀಗಾಗಿ ಅಗಸೆ ಬೀಜಗಳಿಂದ ರೊಟ್ಟಿ ತಯಾರಿಸಿಕೊಂಡು ಸೇವನೆ ಮಾಡುವುದರಿಂದ ನೈಸರ್ಗಿಕವಾಗಿ ಕೆಟ್ಟ ಕೊಲೆ ಸ್ಟ್ರಾಲ್ ಅನ್ನು ಕಟ್ಟಿ ಹಾಕಬಹುದು ಮತ್ತು ಹೃದಯವನ್ನು ಕಾಪಾಡಿಕೊಳ್ಳ ಬಹುದು.

### ಗೋಧಿ ಹಿಟ್ಟು



ಗೋಧಿ ಹಿಟ್ಟಿನಲ್ಲಿ ಕೂಡ ನಾರಿನ ಪ್ರಮಾಣ ಕಂಡುಬರುತ್ತದೆ. ಜೊತೆಗೆ ಫಾಸ್ಫರಸ್, ಮ್ಯಾಂಗನೀಸ್, ತಾಮ್ರದ ಅಂಶಗಳು ಕೂಡ ಇವೆ. ವೈಜ್ಞಾನಿಕ ಅಧ್ಯಯನ ಹೇಳಿರುವ ಹಾಗೆ ಆಗಾಗ ಗೋಧಿ ಹಿಟ್ಟಿನಿಂದ ಆಹಾರ ಪದಾರ್ಥಗಳನ್ನು ತಯಾರಿಸಿ ಸೇವನೆ ಮಾಡುತ್ತಿದ್ದರೆ ಕೊಲೆಸ್ಟ್ರಾಲ್ ಕಂಟ್ರೋಲ್ ಆಗುತ್ತದೆ ಮತ್ತು ಹೃದಯದ ಆರೋಗ್ಯ ವೃದ್ಧಿಸುತ್ತದೆ.


### ಸೋಯಾ ಹಿಟ್ಟು



ಆರೋಗ್ಯಕರವಾದ ಹೃದಯಕ್ಕೆ ಸೋಯಾ ಹಿಟ್ಟು ಬಹಳ ಒಳ್ಳೆಯದು. ಇದು ಕೆಟ್ಟ ಕೊಲೆಸ್ಟ್ರಾಲ್ ಅನ್ನು ನಿಯಂತ್ರಿಸುತ್ತದೆ ಮತ್ತು ತನ್ನಲಿನ ಕಡಿಮೆ ಕೊಬ್ಬಿನ ಅಂಶದ ಕಾರಣದಿಂದ ಹೃದಯದ ಆರೋಗ್ಯವನ್ನು ಕಾಪಾಡುತ್ತದೆ.

ಹೃದಯ ಸ್ನೇಹಿ ಆಗಿರುವ ಅನೇಕ ಪೌಷ್ಟಿಕ ಸತ್ವಗಳು ಸೋಯಾ ಹಿಟ್ಟಿನಲ್ಲಿ ಹೆಚ್ಚಾಗಿ ಕಂಡುಬರುತ್ತವೆ. ಉದಾಹರಣೆಗೆ ಮೆಗ್ನೀಷಿಯಂ, ಪೊಟಾಸಿಯಂ, ಕಬ್ಬಿಣ, ನಾರು ಇತ್ಯಾದಿ. ಸೋಯಾ ಹಿಟ್ಟಿನಿಂದ ಚಪಾತಿ ತಯಾರಿಸಿ ಸೇವಿಸಬಹುದು ಮತ್ತು ಇದು ಆರೋಗ್ಯಕರವಾದ ರೀತಿಯಲ್ಲಿ ಕೊಲೆಸ್ಟ್ರಾಲ್ ಅನ್ನು ನಿರ್ವಹಣೆ ಮಾಡುತ್ತದೆ.

### ಕುಟ್ಟು ಹಿಟ್ಟು



ಇದು ಕೂಡ ಕೊಲೆಸ್ಟ್ರಾಲ್ ನಿಯಂತ್ರಣ ಮಾಡುವ ಅನೇಕ ಅಂಶಗಳು ಎನ್ನಲಾದ ನಾರು, ಪ್ರೋಟೀನ್, ಕಾರ್ಬೋಹೈಡ್ರೈಟ್, ಕಬ್ಬಿಣ, ಮೆಗ್ನೀಷಿಯಂ, ತಾಮ್ರ ಮತ್ತು ಸಸ್ಯಾಧಾರಿತ ಅಂಶಗಳನ್ನು ಒಳಗೊಂಡಿದೆ. ಅಧ್ಯಯನಗಳು ಹೇಳುವಂತೆ ಈ ಹಿಟ್ಟು ರಕ್ತದ ಒತ್ತಡವನ್ನು ನಿಯಂತ್ರಣ ಮಾಡಿ ಹೃದಯವನ್ನು ಆರೋಗ್ಯಕರ ವಾಗಿ ಕಾಪಾಡುತ್ತದೆ.

### ಕೊನೆಯ ಮಾತು

ಕೊಲೆಸ್ಟ್ರಾಲ್ ಕಡಿಮೆಯಾಗಬೇಕು ಹಾಗೂ ಹೃದಯದ ಆರೋಗ್ಯ ಚೆನ್ನಾಗಿರಬೇಕು ಎಂದರೆ ಮೊದಲಿಗೆ ಆರೋಗ್ಯಕಾರಿ ಜೀವನಶೈಲಿಯನ್ನು ಅನುಸರಿಸಬೇಕು. ಉದಾಹರಣೆಗೆ ಸಂಸ್ಕರಿಸಿದ ಕೆಂಪು ಮಾಂಸಗಳು, ಸಂಸ್ಕರಿಸಿದ ಆಹಾರ ಪದಾರ್ಥಗಳು, ಎಣ್ಣೆಯಾಂಶ ಇರುವ ಆಹಾರಗಳು, ಕೃತಕ ಸಿಹಿ ತಿಂಡಿಗಳು ಹಾಗೂ ತಂಪು ಪಾನೀಯಗಳಿಂದ ದೂರವಿರಬೇಕು. ಇವೆಲ್ಲಾ ಆಹಾರಗಳು ದೇಹದ ತೂಕ ಹೆಚ್ಚು ಮಾಡಿ, ಬೊಜ್ಜಿ ನಾಂಶ ಹೆಚ್ಚು ಮಾಡುವುದು ಮಾತ್ರವಲ್ಲದೆ, ರಕ್ತದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಅಂಶ ಹೆಚ್ಚಾಗುವಂತೆ ಮಾಡುವುದು. ಪೊಟ್ಯಾಶಿಯಮ್, ಫೈಬರ್ ಅಂದರೆ ನಾರಿನಾಂಶ, ಫೋಲೇಟ್, ವಿಟಮಿನ್ ಕೆ, ಮಿಟಮಿನ್ ಸಿ ಹಾಗೂ ಕ್ಯಾಲ್ಸಿಯಂ ಅಂಶಗಳು ಹೇರಳವಾಗಿ ಕಂಡು ಬರುವ ಹಣ್ಣು –ತರಕಾರಿಗಳನ್ನು ಹೆಚ್ಚಾಗಿ ಸೇವನೆ ಮಾಡಬೇಕು. ಇದರಿಂದ ಹೃದಯದ ಆರೋಗ್ಯ ವೃದ್ಧಿಯಾಗುತ್ತದೆ.

# ಮುಂಜಾನೆ ಸೂರ್ಯನ ಬೆಳಕಿನಲ್ಲಿ 20 ನಿಮಿಷ ವಾಕ್ ಮಾಡಿದ್ರೆ ಇರುವ ಪ್ರಯೋಜನಗಳು



ನಮ್ಮಲ್ಲಿ ಹಲವರು ಬೆಳಿಗ್ಗೆ ವಾಕಿಂಗ್ ಮಾಡಲು ಇಷ್ಟಪಡುತ್ತಾರೆ. ವೈದ್ಯರ ಪ್ರಕಾರ, ಬೆಳಗಿನ ಸೂರ್ಯನ ಬೆಳಕಿನಿಂದ ದಿನವನ್ನು ಪ್ರಾರಂಭಿಸುವುದು ಆರೋಗ್ಯಕ್ಕೆ ಮಾತ್ರವಲ್ಲ, ಇಡೀ ದಿನವು ಉತ್ತಮವಾಗಿ ಕಳೆಯುತ್ತದೆ. ನಿಮ್ಮ ಆರೋಗ್ಯವನ್ನು ಸುಧಾರಿಸಲು ಇದು ಉತ್ತಮ ಮಾರ್ಗವಾಗಿದೆ. ಸೂರ್ಯನ ಬೆಳಗಿನ ಕಿರಣಗಳು ನಿಮ್ಮ ದೇಹ ಮತ್ತು ಮನಸ್ಸಿಗೆ ಅನೇಕ ಪ್ರಯೋಜನಗಳನ್ನು ನೀಡುತ್ತವೆ, ಆದ್ದರಿಂದ ನಾವು ಪ್ರತಿದಿನ ಬೆಳಿಗ್ಗೆ ಸೂರ್ಯನಲ್ಲಿ ಕೆಲವು ನಿಮಿಷಗಳನ್ನು ಕಳೆಯಬೇಕು.

ಬೆಳಗಿನ ಸೂರ್ಯನ ಬೆಳಕು ನೈಸರ್ಗಿಕ ವಿಟಮಿನ್ ಡಿ ಯ ಅತ್ಯುತ್ತಮ ಮೂಲಗಳಲ್ಲಿ ಒಂದಾಗಿದೆ. ಇದು ದೇಹವು ಕ್ಯಾಲ್ಸಿಯಂ ಅನ್ನು ಹೀರಿಕೊಳ್ಳಲು ಸಹಾಯ ಮಾಡುವ ಅಗತ್ಯ ಪೋಷಕಾಂಶವಾಗಿದೆ, ಇದು ಮೂಳೆಗಳು ಮತ್ತು ಹಲ್ಲುಗಳನ್ನು ಬಲಪಡಿಸುತ್ತದೆ. ಆರೋಗ್ಯಕರ ಪ್ರತಿರಕ್ಷಣಾ ವ್ಯವಸ್ಥೆಗೆ ಇದು ಮುಖ್ಯವಾಗಿದೆ. ಬೆಳಗಿನ ಸೂರ್ಯನ ಬೆಳಕಿಗೆ ಕೇವಲ 15 ರಿಂದ 30 ನಿಮಿಷಗಳ ಕಾಲ ಮೈ ಒಡ್ಡುವಿಕೆಯು ನಿಮ್ಮ ದೈನಂದಿನ ಅವಶ್ಯಕತೆಗಳನ್ನು ಪೂರೈಸಲು ಸಾಕಷ್ಟು ವಿಟಮಿನ್ ಡಿ ಅನ್ನು ಒದಗಿಸುತ್ತದೆ.

ಸೂರ್ಯನ ಬೆಳಕು ಸಂತೋಷವನ್ನು ಹೆಚ್ಚಿಸುವ ಸಿರೊಟೋನಿನ್ ಎಂಬ ಹಾರ್ಮೋನ್ ಬಿಡುಗಡೆಯನ್ನು ಪ್ರಚೋದಿಸುತ್ತದೆ. ಸೂರ್ಯನ ಬೆಳಕಿನಿಂದ ನಿಮ್ಮ ದಿನವನ್ನು ಪ್ರಾರಂಭಿಸುವುದು ಆತಂಕ ಮತ್ತು ಖಿನ್ನತೆಯ ಭಾವನೆಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ. ದಿನವಿಡೀ ನಿಮಗೆ ಉತ್ತಮ ಭಾವನೆಯನ್ನು ನೀಡುತ್ತದೆ.

ಬೆಳಗಿನ ಸೂರ್ಯನ ಬೆಳಕು ರಕ್ತದೊತ್ತಡವನ್ನು ಕಡಿಮೆ ಮಾಡುವ ಮೂಲಕ ಸುಧಾರಿತ ಹೃದಯದ ಆರೋಗ್ಯಕ್ಕೆ ಕೊಡುಗೆ ನೀಡುತ್ತದೆ. ಯುವಿ ಕಿರಣಗಳು ಚರ್ಮದಲ್ಲಿ ನೈಟ್ರಿಕ್ ಆಕ್ಸೈಡ್ ಅನ್ನು ಉತ್ಪಾದಿಸಲು ಸಹಾಯ ಮಾಡುತ್ತದೆ. ಇದು ರಕ್ತನಾಳಗಳನ್ನು ಹಿಗ್ಗಿಸುತ್ತದೆ, ಇದರಿಂದಾಗಿ ರಕ್ತದ ಹರಿವನ್ನು ಸುಧಾರಿಸುತ್ತದೆ.ಇದು ನಮ್ಮ ರಕ್ತದೊತ್ತಡವನ್ನು ನಿಯಂತ್ರಣದಲ್ಲಿರಿಸುತ್ತದೆ ಮತ್ತು ಹೃದ್ರೋಗದ ಅಪಾಯವನ್ನು ಕಡಿಮೆ ಮಾಡಬಹುದು.


# ಬಾಳೆಕಾಯಿ ಸೇವಿಸೋದ್ರಿಂದ ಆರೋಗ್ಯಕ್ಕೆ ತುಂಬಾ ಲಾಭಗಳಿವೆಯಂತೆ !



ಬಾಳೆಕಾಯಿಗಳನ್ನು ಸಾಮಾನ್ಯವಾಗಿ ಯಾವಾಗಲು ಅದರ ಸಿಹಿ ಗುಣಗಳು ಮತ್ತು ರುಚಿಗಾಗಿ ಎಲ್ಲರೂ ಇಷ್ಟ ಪಡುತ್ತಾರೆ. ಆದರೆ ಬಾಳೆಕಾಯಿಗಳನ್ನು ತಿನ್ನಬಹುದೇ? ಹೌದು ಹಸಿ ಬಾಳೆಕಾಯಿಗಳನ್ನು ತಿಂದಲ್ಲಿ ಇದರಲ್ಲಿ ಆರೋಗ್ಯಕ್ಕೆ ಬೇಕಾದ ಹಲವಾರು ಪ್ರಯೋಜನಗಳನ್ನು ನಾವು ಪಡೆಯಬಹುದು . ಬಾಳೆಕಾಯಿಗಳು ಅವುಗಳ ಮಾಧುರ್ಯ ಮತ್ತು ಬಹುಮುಖ ಪ್ರಯೋಜನಗಳಿಂದ ಹೆಚ್ಚಾಗಿ ಪ್ರೀತಿಸಲ್ಪಡುತ್ತವೆ, ಆದರೆ ಅವು ಕಚ್ಚಾ ಅಥವಾ ಹಸಿ ಕಾಯಿಗಳನ್ನು ನಿಮ್ಮ ಆಹಾರದಲ್ಲಿ ಸೇರಿಸುವುದರಿಂದ ಹಲವಾರು ಪೌಷ್ಟಿಕಾಂಶಗಳು ಮತ್ತು ಆರೋಗ್ಯಕರ ಬದಲಾವಣೆಗಳನ್ನು ನಿಮ್ಮ ದೇಹದಲ್ಲಿ ಮಾಡಬಹುದು .ಬಾಳೆಕಾಯಿ ಅವಶ್ಯಕ ವಿಟಮಿನ್ ಗಳು ಮತ್ತು ಖನಿಜಾಂಶಗಳ ಕಣಜವಾಗಿದೆ. ಇವು. ಬಾಳೆಕಾಯಿ ವಿಟಮಿನ್ ಸಿ , ವಿಟಮಿನ್ ಬಿ6, ಮತ್ತು ಪೊಟ್ಯಾಷಿಯಂಗಳ ಉತ್ತಮ ಮೂಲವಾಗಿದೆ. ವಿಟಮಿನ್ ಸಿ ಯು ವಿಟಮಿನ್ ಸಿ ಪ್ರತಿರಕ್ಷಣಾ ಕಾರ್ಯಕ್ಕೆ ನಿರ್ಣಾಯಕವಾಗಿದೆ ಮತ್ತು ಆಹಾರವನ್ನು ಶಕ್ತಿಯ ರೂಪದಲ್ಲಿ ಪರಿವರ್ತಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಪೊಟ್ಯಾಸಿಯಂ ಹೃದಯದ ಆರೋಗ್ಯ ಮತ್ತು ಸ್ನಾಯುಗಳ ಕಾರ್ಯ ನಿರ್ವಹಿಸಲು ಸಹಾಯ ಮಾಡುತ್ತದೆ. ರೆಸಿಸ್ಟೆಂಟ್ ಸ್ಟಾರ್ಚ್ ಅಥವಾ ನಿರೋಧಕ ಪಿಷ್ಟವನ್ನು ಬಾಳೆಕಾಯಿ ಅಧಿಕ ಮಟ್ಟದಲ್ಲಿ ಹೊಂದಿರುತ್ತದೆ. ಪಿಷ್ಟವು ಗ್ಲೂಕೋಸ್ ನ ಹೀರುವಿಕೆಯನ್ನು ನಿಧಾನಗೊಳಿಸುವ ಮೂಲಕ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಮಧುಮೇಹವನ್ನು ನಿರ್ವಹಿಸಲು ಮತ್ತು ಒಟ್ಟಾರೆ ಚಯಾಪಚಯ ಆರೋಗ್ಯವನ್ನು ಸುಧಾರಿಸುವಲ್ಲಿ ಉತ್ತಮವಾಗಿದೆ.

# ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿ ಕೂದಲಿಗೆ ಬಳಸಿದ್ರೆ ಕೂದಲು ದಟ್ಟವಾಗಿ ಬೆಳೆಯುತ್ತೆ





ಉದ್ದವಾದ, ದಟ್ಟವಾದ ಕೂದಲು ಯಾರಿಗೆ ಇಷ್ಟವಿರಲ್ಲ ಹೇಳಿ... ಕೂದಲು ಮಹಿಳೆಯರ ಸೌಂದರ್ಯವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಹಾಗಾಗಿ ಆರೋಗ್ಯಕರ ಕೂದಲನ್ನು ಹೊಂದಲು ಮಹಿಳೆಯರು ಹಲವಾರು ಬಗೆಯ ದುಬಾರಿ ಹೇರ್ ಪ್ರೊಡಕ್ಟ್ಗಳನ್ನು ಬಳಸುತ್ತಾರೆ. ಆದರೆ ಇದರಿಂದ ಉತ್ತಮ ಫಲಿತಾಂಶ ಸಿಕ್ಕಿದರೂ ಕೂಡ ಅದು ಹೆಚ್ಚು ಕಾಲ ಉಳಿಯುವುದಿಲ್ಲ. ಹಾಗಾಗಿ ನಿಮ್ಮ ಕೂದಲು ದಟ್ಟವಾಗಿ ಉದ್ದವಾಗಿ, ಆರೋಗ್ಯಕರವಾಗಿ ಬೆಳೆಯಲು ಆಯುರ್ವೇದದಲ್ಲಿ ತಿಳಿಸಿದಂತೆ ಮೆಂತ್ಯ ಮತ್ತು ದಾಸವಾಳವನ್ನು ಈ ರೀತಿಯಲ್ಲಿ ಬಳಸಿ.ಮೆಂತ್ಯ ಮತ್ತು ದಾಸವಾಳ ಆರೋಗ್ಯಕರ ಕೂದಲನ್ನು ಹೊಂದಲು ಆಯುರ್ವೇದದಲ್ಲಿ ಬಳಸುವ ಎರಡು ಪ್ರಮುಖ ಪದಾರ್ಥಗಳಾಗಿವೆ. ನೆತ್ತಿಯ ಪೋಷಣೆ, ಕೂದಲಿನ ಬೆಳವಣಿಗೆ, ಕೂದಲಿನ ಬುಡವನ್ನು ಗಟ್ಟಿಗೊಳಿಸುವುದು ಹೀಗೆ ಒಟ್ಟಾರೆ ಕೂದಲಿನ ಆರೋಗ್ಯಕ್ಕಾಗಿ ಅವುಗಳನ್ನು ಬಹಳ ಹಿಂದಿನಿಂದಲೂ ಬಳಸಲಾಗುತ್ತಿದೆ.ಮೆಂತ್ಯಭಾರತದಲ್ಲಿ ಸಾಂಬಾರು ಪದಾರ್ಥಗಳಲ್ಲಿ ಹೆಚ್ಚಾಗಿ ಬಳಸುವಂತಹ ಮೆಂತ್ಯ ಬೀಜಗಳು ಪ್ರೋಟೀನ್ಗಳು, ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿದೆ, ಇದು ಕೂದಲಿಗೆ ಹಲವಾರು ರೀತಿಯಲ್ಲಿ ಪ್ರಯೋಜನವನ್ನು ನೀಡುತ್ತದೆ. ಮೆಂತ್ಯವು ಪ್ರೋಟೀನ್ಗಳು ಮತ್ತು ನಿಕೋಟಿನಿಕ್ ಆಮ್ಲವನ್ನು ಹೊಂದಿರುತ್ತದೆ, ಇದು ಕೂದಲಿನ ಕಿರುಚೀಲಗಳನ್ನು ಬಲಪಡಿಸಲು ಸಹಾಯ ಮಾಡುತ್ತದೆ, ಕೂದಲು ಉದುರುವುದನ್ನು ಕಡಿಮೆ ಮಾಡುತ್ತದೆ ಮತ್ತು ಕೂದಲಿನ ತುದಿ ಒಡೆಯುವುದನ್ನು ತಡೆಯುತ್ತದೆ.ಇದು ನೆತ್ತಿಯ ರಕ್ತದ ಹರಿವನ್ನು ಹೆಚ್ಚಿಸುವುದರ ಮೂಲಕ ಕೂದಲು ಬೆಳೆಯಲು ಸಹಾಯ ಮಾಡುತ್ತದೆ ಮತ್ತು ಇದರಿಂದ ಕೂದಲುದುರುವುದು ಸಹ ಕಡಿಮೆಯಾಗುತ್ತದೆ.


# ಗುಲಾಬಿ ರಂಗಿನ ತುಟಿಯಲಿಪ್ ಬಾಮ್‌ಗಳು

**ಗುಲಾಬಿ ಅಥವಾ ಕೆಂಪು ತುಟಿಗಳು ಮುಖದ ಅಂದವನ್ನು ಹೆಚ್ಚಿಸುತ್ತವೆ. ಮುಖಕ್ಕೆ ಎಷ್ಟೇ ಮೇಕಪ್ ಬಳಿದರೂ ಕೂಡ ಮುಖ ಸುಂದರವಾಗಿ ಕಾಣುವುದು ತುಟಿಗಳಿಗೆ ಲಿಪ್ ಸ್ಟಿಕ್ ಹಚ್ಚಿದ ಮೇಲೆಯೇ. ಹಾಗಾಗಿ ತುಟಿಗಳನ್ನು ಆರೋಗ್ಯಕರವಾಗಿ ನೋಡಿಕೊಳ್ಳಬೇಕು. ಇದರಿಂದ ತುಟಿಗಳು ಕೆಂಪು ಅಥವಾ ಗುಲಾಬಿ ಬಣ್ಣದಲ್ಲಿರುತ್ತದೆ. ಆದರೆ ತುಟಿಗಳಿಗೆ ಲಿಪ್ಸ್ಟಿಕ್ ಅನ್ನು ಹೆಚ್ಚಾಗಿ ಬಳಸುವುದರಿಂದ ಅದರಲ್ಲಿರುವ ರಾಸಾಯನಿಕಗಳು ತುಟಿಗಳ ಚರ್ಮಕ್ಕೆ ಹಾನಿ ಮಾಡಿ ತುಟಿ ಕಪ್ಪಾಗುವಂತೆ ಮಾಡುತ್ತವೆ. ಹಾಗಾಗಿ ತುಟಿಗಳ ಬಗ್ಗೆ ಕಾಳಜಿವಹಿಸು ವುದು ಅತ್ಯಗತ್ಯ.ಈ ಒಳ್ಳೆಯ ಲಿಪ್ ಬಾಮ್ಗಳಲ್ಲಿ ತುಟಿಗಳನ್ನು ಆರೈಕೆ ಮಾಡುವಂತಹ ಈ 5 ಪದಾರ್ಥಗಳು ಇರುತ್ತದೆ. ಆ 5 ಪದಾರ್ಥಗಳು ಯಾವುದೆಂಬುದನ್ನು ನೋಡೋಣ.**









**ವಿಟಮಿನ್ ಇ**

ವಿಟಮಿನ್ ಇ' ಉತ್ಕರ್ಷಣ ನಿರೋಧಕಗಳು ಒರಟು ತುಟಿಗಳನ್ನು ಗುಣಪಡಿಸಲು ಉತ್ತಮವಾಗಿ ಕಾರ್ಯನಿರ್ವಹಿಸುತ್ತವೆ. ಇದು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ

ವಿಟಮಿನ್ ಇ ಹೊಂದಿರುವ ಲಿಪ್ ಬಾಮ್ ಗಳು ತುಟಿಗಳಿಗೆ ತೇವಾಂಶ ನೀಡುತ್ತದೆ ಮತ್ತು ತುಟಿಗಳ ಚರ್ಮ ಹಾನಿಯಾಗದಂತೆ ತಡೆಯುತ್ತದೆ. ಆದ್ದರಿಂದ ನೀವು ಒಣ ಮತ್ತು ಕಿರಿಕಿರಿಯ ತುಟಿಗಳನ್ನು ಹೊಂದಿದ್ದರೆ, ವಿಟಮಿನ್ ಇ ಸಂಯುಕ್ತವನ್ನು ಹೊಂದಿರುವ ಲಿಪ್ ಬಾಮ್ ಅನ್ನು ಖರೀದಿಸಿ ಬಳಸಿ

**ಶಿಯಾ ಬೆಣ್ಣೆ**

ಶಿಯಾ ಬೆಣ್ಣೆ ತುಟಿಗಳಿಗೆ ನೈಸರ್ಗಿಕವಾಗಿ ಮಾಯಿಶ್ಚರೈಸರ್ ಮಾಡುತ್ತದೆ. ವಿಟಮಿನ್ ಎ ಮತ್ತು ಇ ಎರಡನ್ನೂ ಒಳಗೊಂಡಿರುವ ಶಿಯಾ ಬೆಣ್ಣೆ ತುಟಿಗಳ ಮೇಲಿನ ಹಾನಿಗೊಳಗಾದ ಚರ್ಮವನ್ನು ಸರಿಪಡಿಸಲು ಸಹಾಯ ಮಾಡುತ್ತದೆ.ಇದರ ಉತ್ಕರ್ಷಣ

ನಿರೋಧಕಗಳು ಮತ್ತು ಉರಿಯೂತದ ಗುಣಲಕ್ಷಣಗಳು ತುಟಿಯ ಊತವನ್ನು ಕಡಿಮೆ ಮಾಡುತ್ತದೆ. ಮತ್ತು ತುಟಿ ದಪ್ಪವಾಗಿ ಕಾಣುವಂತೆ ಮಾಡುತ್ತದೆ. ಹಾಗಾಗಿ ತುಟಿಗಳು ಯಾವಾಗಲೂ ಶುಷ್ಕ ಮತ್ತು ಚಪ್ಪಟೆಯಾಗಿದ್ದರೆ ಶಿಯಾ ಬೆಣ್ಣೆ ಇರುವಂತಹ ಲಿಪ್ ಬಾಮ್ ಬಳಸಿ ಆಶ್ಚರ್ಯಕರ ಫಲಿತಾಂಶವನ್ನು ಪಡೆಯಿರಿ.

**ತೆಂಗಿನ ಎಣ್ಣೆ**

ತೆಂಗಿನ ಎಣ್ಣೆ ನೈಸರ್ಗಿಕ ಮಾಯಿಶ್ಚರೈಸಿಂಗ್ ಏಜೆಂಟ್ ಆಗಿದೆ. ಇದು ಚರ್ಮದ ಆರೋಗ್ಯಕ್ಕೆ ಪ್ರಯೋಜನಕಾರಿಯಾಗಿದೆ. ತುಟಿಗಳಂತಹ ತೆಳುವಾದ ಚರ್ಮವನ್ನು ಹೊಂದಿರುವ ಭಾಗಗಳಿಗೆ ತೆಂಗಿನ ಎಣ್ಣೆ ಹಚ್ಚುವುದರಿಂದ ಸಮಸ್ಯೆಗಳು ಬೇಗನೆ ವಾಸಿಯಾಗುತ್ತದೆ. ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಹೆಲ್ತ್ ನಡೆಸಿದ ಅಧ್ಯಯನದ ಪ್ರಕಾರ, ತೆಂಗಿನ ಎಣ್ಣೆಯ ಆಂಟಿಮೈಕ್ರೊಬಿಯಲ್ ಗುಣಲಕ್ಷಣಗಳು ಚರ್ಮದ ಸೋಂಕನ್ನು ತಡೆಯುತ್ತವೆ. ಇದರ ಎಮೋಲಿಯಂಟ್ ಅಂಶ ತುಟಿಗಳನ್ನು ಯಾವಾಗಲೂ ಹೈಡ್ರೇಟ್ ಮತ್ತು ತೇವಾಂಶದಿಂದ ಕೂಡಿರುವಂತೆ ಮಾಡುತ್ತದೆ.

**ಜೊಜೊಬಾ ಎಣ್ಣೆ**

ಜೊಜೊಬಾ ಎಣ್ಣೆ ವಿಟಮಿನ್ ಇ ಯ ಜೊತೆಗೆ ಇತರ ಪೋಷಕಾಂಶಗಳನ್ನು ಹೊಂದಿದೆ. ಇದರ ನೈಸರ್ಗಿಕ ಮಾಯಿಶ್ಚರೈಸಿಂಗ್ ಗುಣವು ತುಟಿಯ ಚರ್ಮವನ್ನು ಮೃದುವಾಗಿಸಿ ಹೊಳೆಯುವಂತೆ ಮಾಡುತ್ತದೆ.

ಇದು ತುಟಿಗಳನ್ನು ಸೂರ್ಯನ ಹಾನಿಕಾರಕ ಕಿರಣಗಳಿಂದ ರಕ್ಷಿಸುತ್ತದೆ ಮತ್ತು ಹೈಪರ್ಪಿಗ್ಮೆಂಟೇಶನ್ ಅನ್ನು ಕಡಿಮೆ ಮಾಡಲು ಒಳ್ಳೆಯದು ಎಂದು ಪರಿಗಣಿಸಲಾಗಿದೆ. ಜೊಜೊಬಾ ಎಣ್ಣೆ ಇರುವಂತಹ ಲಿಪ್ ಬಾಮ್ ಗಳು ನಿಮ್ಮ ತುಟಿಯ ಅನೇಕ ಸಮಸ್ಯೆಗಳನ್ನು ಪರಿಹಾರ ಮಾಡುತ್ತವೆ.

# ಕೊಲೆಸ್ಟ್ರಾಲ್, ಶುಗರ್ ಇರೋರು ಬೆಳಗ್ಗೆ ಒಂದು ಹಿಡಿ ಮೊಳಕೆಯೊಡೆದ ಈ ಕಾಳು ತಿನ್ನಬೇಕು



ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ 1 ಹಿಡಿ ಮೊಳಕೆಯೊಡೆದ ಮೆಂತ್ಯವನ್ನು ಸೇವಿಸಿದರೆ ಕೊಲೆಸ್ಟ್ರಾಲ್ ಮತ್ತು ಮಧುಮೇಹದಿಂದ ಮುಕ್ತಿ ಸಿಗುತ್ತದೆ. ಮೊಳಕೆಯೊಡೆದ ಮೆಂತ್ಯವು ಪೋಷಕಾಂಶಗಳಿಂದ ಸಮೃದ್ಧವಾಗಿದೆ. ಇದರ ಸೇವನೆಯು ಆರೋಗ್ಯಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಪ್ರಯೋಜನಕಾರಿ ಎಂದು ಸಾಬೀತುಪಡಿಸುತ್ತದೆ. ಮೆಂತ್ಯ ಬೀಜಗಳನ್ನು ನೀರಿನಲ್ಲಿ ನೆನೆಸಿದ ನಂತರ ಮೊಳಕೆ ಭರಿಸಿ.

ಮೊಳಕೆಯೊಡೆಯುವುದರಿಂದ ಮೆಂತ್ಯದಲ್ಲಿನ ಅನೇಕ ಪೋಷಕಾಂಶಗಳ ಪ್ರಮಾಣವು ಹೆಚ್ಚಾಗುತ್ತದೆ. ಇದು ಆರೋಗ್ಯಕ್ಕೆ ಇನ್ನಷ್ಟು ಪ್ರಯೋಜನಕಾರಿಯಾಗಿದೆ.ಮೊಳಕೆಯೊಡೆದ ಮೆಂತ್ಯದ ಪ್ರಯೋಜನಗಳುಮೊಳಕೆಯೊಡೆದ ಮೆಂತ್ಯದಲ್ಲಿ ಇರುವ ಫೈಬರ್ ಮತ್ತು ಇತರ ಪೋಷಕಾಂಶಗಳು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸಲು ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುವ ಮೂಲಕ ಮತ್ತು ದೇಹದಲ್ಲಿ ಸಕ್ಕರೆಯ ಹೀರಿಕೊಳ್ಳುವಿಕೆಯನ್ನು ನಿಧಾನಗೊಳಿಸುವ ಮೂಲಕ ಮಧುಮೇಹ ರೋಗಿಗಳಿಗೆ ಪ್ರಯೋಜನಕಾರಿಯಾಗಿದೆ. ಮೊಳಕೆಯೊಡೆದ ಮೆಂತ್ಯದಲ್ಲಿರುವ ಲೆಕ್ಟಿನ್ ಎಂಬ ಅಂಶವು ಕೆಟ್ಟ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಲು ಮತ್ತು ಉತ್ತಮ ಕೊಲೆಸ್ಟ್ರಾಲ್ ಅನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ.ಇದು ಹೃದಯ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ. ಕೂದಲನ್ನು ಬಲವಾಗಿ ಮತ್ತು ಹೊಳೆಯುವಂತೆ ಮಾಡಲು ಸಹಾಯ ಮಾಡುತ್ತದೆ. ಕೂದಲು ಉದುರುವುದನ್ನು ತಡೆಯಲು ಮತ್ತು ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದರಲ್ಲಿರುವ ಫೈಬರ್ ಜೀರ್ಣಾಂಗ ವ್ಯವಸ್ಥೆಯನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ.ಇದು ಮಲಬದ್ಧತೆ, ಆಮ್ಲೀಯತೆ ಮತ್ತು ಅಜೀರ್ಣದಂತಹ ಸಮಸ್ಯೆಗಳಿಂದ ಪರಿಹಾರವನ್ನು ನೀಡುತ್ತದೆ. ಇದು ಕಡಿಮೆ ಕ್ಯಾಲೋರಿ ಅಂಶವನ್ನು ಹೊಂದಿದೆ ಮತ್ತು ದೀರ್ಘಕಾಲದವರೆಗೆ ಹೊಟ್ಟೆಯನ್ನು ತುಂಬಿರುವಂತೆ ಮಾಡುತ್ತದೆ. ಇದು ತೂಕ ನಷ್ಟಕ್ಕೆ ಸಹಾಯ ಮಾಡುತ್ತದೆ.ಮೊಳಕೆಯೊಡೆದ ಮೆಂತ್ಯವು ಆಂಟಿಆಕ್ಸಿಡೆಂಟ್ಗಳನ್ನು ಹೊಂದಿದ್ದು ಅದು ಫ್ರೀ ರಾಡಿಕಲ್ಗಳಿಂದ ಚರ್ಮವನ್ನು ರಕ್ಷಿಸುತ್ತದೆ ಮತ್ತು ಆರೋಗ್ಯಕರವಾಗಿರುತ್ತದೆ. ಇದು ಮೊಡವೆ ಮತ್ತು ಕಲೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

# ಕಿಡ್ನಿಸ್ಟೋನ್ ನಿವಾರಿಸಲು ಬೆಸ್ಟ್ ಅಂತೆ ಈ ಪುಟ್ಟ ಗಿಡ



ನೆಲನೆಲ್ಲಿಯನ್ನು ನೀವು ನೋಡಿರಬಹುದು, ಕೆಲವೊಮ್ಮೆ ಇದು ರಸ್ತೆ ಬದಿಯಲ್ಲಿ, ಗದ್ದೆ ಬದಿಯಲ್ಲೂ, ತೋಟದಲ್ಲೂ ಬೆಳೆದಿರುತ್ತದೆ. ಇದೊಂದು ಪುಟ್ಟ ಸಸ್ಯವಾಗಿದ್ದು, ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿದೆ. ನೆಲನೆಲ್ಲಿಯನ್ನು ಕಷಾಯ ಮಾಡಿ ಕುಡಿಯುವುದರಿಂದ ಹಲವಾರು ರೋಗಗಳಿಂದ ಪಾರಾಗಬಹುದು. ನಾವಿಂದು ಈ ಪುಟ್ಟ ಗಿಡದಿಂದ ಯಾವೆಲ್ಲಾ ಆರೋಗ್ಯ ಸಮಸ್ಯೆಗಳಿಂದ ಪಾರಾಗಬಹುದು ಎನ್ನುವುದನ್ನು ತಿಳಿಯೋಣ.ನೆಲನೆಲ್ಲಿಯನ್ನು "ಸ್ಟೋನ್ ಬ್ರೇಕರ್" ಎಂದೂ ಕರೆಯುತ್ತಾರೆ ಏಕೆಂದರೆ ಇದು ಮೂತ್ರಪಿಂಡದ ಕಲ್ಲುಗಳಿಗೆ ಚಿಕಿತ್ಸೆ ನೀಡಬಲ್ಲದು. ಈ ಗಿಡ ಮೂಲಿಕೆಯು ಕ್ಷಾರೀಯ ಗುಣಗಳನ್ನು ಹೊಂದಿದೆ, ಇದು ಮೂತ್ರಪಿಂಡದ ಕಲ್ಲುಗಳು ಮತ್ತು ಪಿತ್ತಗಲ್ಲುಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ. ಆಯುರ್ವೇದ ಔಷಧದ ಪ್ರಕಾರ, ಮೂತ್ರಪಿಂಡದ ಕಲ್ಲು ಉತ್ಪಾದನೆಗೆ ನೆಲನೆಲ್ಲಿ ಅತ್ಯಂತ ಭರವಸೆಯ ಚಿಕಿತ್ಸೆಯಾಗಿದೆ.

ಪಿತ್ತಗಲ್ಲುಗಳು ಪಿತ್ತಕೋಶದಲ್ಲಿ ರೂಪುಗೊಳ್ಳುವ ಜೀರ್ಣಕಾರಿ ದ್ರವದ ಸಣ್ಣ, ಗಟ್ಟಿಯಾದ ನಿಕ್ಷೇಪಗಳಾಗಿವೆ. ಅವು ಸಾಮಾನ್ಯವಾಗಿ ಕೊಲೆಸ್ಟ್ರಾಲ್ ಅಥವಾ ಬೈಲಿರುಬಿನ್ನಿಂದ ಕೂಡಿರುತ್ತವೆ ಮತ್ತು ಗಾತ್ರ ಮತ್ತು ಪ್ರಮಾಣದಲ್ಲಿರುತ್ತವೆ. ಪಿತ್ತಗಲ್ಲು ಹೊಂದಿರುವ ಹೆಚ್ಚಿನ ಜನರು ರೋಗಲಕ್ಷಣಗಳನ್ನು ಅನುಭವಿಸುವುದಿಲ್ಲ ಅಥವಾ ಚಿಕಿತ್ಸೆಯ ಅಗತ್ಯವಿರುವುದಿಲ್ಲ. ಒಂದು ವೇಳೆ ನೀವು ತೊಡಕುಗಳನ್ನು ಅನುಭವಿಸಿದರೆ ಔಷಧಿ ಅಥವಾ ಶಸ್ತ್ರಚಿಕಿತ್ಸೆಯ ಅಗತ್ಯವಿರುತ್ತದೆ.

ಇದು ಹೊಟ್ಟೆಯ ಹುಣ್ಣುಗಳಿಗೆ ಕಾರಣವಾಗಿದೆ. ಜನರಲ್ಲಿ ಹೊಟ್ಟೆಯ ಹುಣ್ಣುಗಳಿಗೆ ಚಿಕಿತ್ಸೆ ನೀಡಲು ನೆಲನೆಲ್ಲಿಯನ್ನು ಹೊಂದಿರುವ ಮೌಖಿಕ ಪೂರಕವು ಉಪಯುಕ್ತವಾಗಿದೆಯೇ ಎಂದು ನಿರ್ಧರಿಸಲು ಹೆಚ್ಚಿನ ಸಂಶೋಧನೆಯ ಅಗತ್ಯವಿದೆ.ನೆಲನೆಲ್ಲಿಯ ಪೂರಕಗಳು ಕಾರ್ಯನಿರ್ವಹಿಸುವ ವಿಧಾನವು ಟೆಸ್ಟ್–ಟ್ಯೂಬ್ ಸಂಶೋಧನೆಯಲ್ಲಿ ಬಳಸಲಾಗುವ ಅತ್ಯಂತ ಕೇಂದ್ರೀಕೃತ ಸಾರಗಳಿಗಿಂತ ಭಿನ್ನವಾಗಿದೆ, ಇವುಗಳನ್ನು ನೇರವಾಗಿ ಬ್ಯಾಕ್ಟೀರಿಯಾದ ಜೀವಕೋಶಗಳಿಗೆ ನೀಡಲಾಗುತ್ತದೆ.ನೆಲನೆಲ್ಲಿಯಲ್ಲಿ ಒಳಗೊಂಡಿರುವ ಉತ್ಕರ್ಷಣ ನಿರೋಧಕಗಳು ಕೆಲವು ಪ್ರಾಣಿಗಳ ರಕ್ತದಲ್ಲಿನ ಸಕ್ಕರೆಯ ಪ್ರಮಾಣವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ. ಆದಾಗ್ಯೂ, ಹೆಚ್ಚಿನ ಮಾನವ ಅಧ್ಯಯನಗಳು ಅಗತ್ಯವಿದೆ.ಸಾಂಪ್ರದಾಯಿಕ ಚೀನೀ ಔಷಧದ ಪ್ರಕಾರ, ನೆಲನೆಲ್ಲಿ ಯಕೃತ್ತಿನ ಕಾರ್ಯವನ್ನು ಹೆಚ್ಚಿಸುವ ಮೂಲಿಕೆಯಾಗಿದೆ. ನೆಲನೆಲ್ಲಿ ಹೆಪಟೈಟಿಸ್ ಬಿ ವೈರಸ್ನ ಹರಡುವಿಕೆ ಮತ್ತು ಬೆಳವಣಿಗೆಯನ್ನು ತಡೆಯುತ್ತದೆ, ವೈರಸ್ನ ರಕ್ತದ ಮಟ್ಟವನ್ನು ಕಡಿಮೆಗೊಳಿಸುತ್ತದೆ, ಮತ್ತು ಯಕೃತ್ತಿನ ಕಾರ್ಯವನ್ನು ಪುನಃಸ್ಥಾಪಿಸಿತು.

# ಶುಂಠಿ ಜ್ಯೂಸ್ ಕುಡಿಯೋದ್ರಿಂದ ಎಷ್ಟೆಲ್ಲಾ ಲಾಭಗಳಿವೆ ನೋಡಿ



ಶುಂಠಿಯು ಸಾಕಷ್ಟು ಆಯುರ್ವೇದಿಕ್ ಗುಣಗಳನ್ನು ಹೊಂದಿರುವ ಗಿಡಮೂಲಿಕೆಗಳಾಗಿದೆ. ಶುಂಠಿ ರಸವನ್ನು ಸೇವಿಸುವುದರಿಂದ ಹಲವಾರು ಸಣ್ಣ ಪುಟ್ಟ ರೋಗಗಳನ್ನು ದೂರವಿಡಬಹುದು. ನೀವು ಇದನ್ನು ಹಸಿಯಾಗಿಯೂ ಸೇವಿಸಬಹುದು ಅಥವಾ ಒಣ ಶುಂಠಿಯನ್ನಾದರೂ ಸೇವಿಸಬಹುದು.ಶುಂಠಿ ರಸವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿದೆ, ಇದು ಆಕ್ಸಿಡೇಟಿವ್ ಒತ್ತಡ ಮತ್ತು ಸೆಲ್ಯುಲಾರ್ ಹಾನಿಗೆ ಕಾರಣವಾಗುವ ಫ್ರೀ ರಾಡಿಕಲ್ಗಳನ್ನು ಎದುರಿಸುವ ಮೂಲಕ ಪ್ರತಿರಕ್ಷಣಾ ವ್ಯವಸ್ಥೆಯನ್ನು ಬೆಂಬಲಿಸುತ್ತದೆ. ಒಟ್ಟಾರೆ ಆರೋಗ್ಯ ಮತ್ತು ಸೋಂಕುಗಳ ವಿರುದ್ಧ ಸ್ಥಿತಿಸ್ಥಾಪಕತ್ವವನ್ನು ಕಾಪಾಡಿಕೊಳ್ಳಲು ಇದು ಅತ್ಯಗತ್ಯ.ಶುಂಠಿ ರಸವು ಅದರ ಜೀರ್ಣಕಾರಿ ಪ್ರಯೋಜನಗಳಿಗಾಗಿ ಹೆಸರುವಾಸಿಯಾಗಿದೆ. ಇದು ನೈಸರ್ಗಿಕ ಕಿಣ್ವಗಳನ್ನು ಹೊಂದಿದ್ದು, ಇದು ಆಹಾರವನ್ನು ಒಡೆಯಲು ಸಹಾಯ ಮಾಡುತ್ತದೆ ಮತ್ತು ಜೀರ್ಣಾಂಗವ್ಯೂಹದ ಸುಗಮ ಕಾರ್ಯನಿರ್ವಹಣೆಯನ್ನು ಬೆಂಬಲಿಸುತ್ತದೆ. ಇದು ಹೊಟ್ಟೆ ಉಬ್ಬುವುದು ಮತ್ತು ಅಜೀರ್ಣದಂತಹ ರೋಗಲಕ್ಷಣಗಳನ್ನು ನಿವಾರಿಸಲು ಸಹಾಯ ಮಾಡುತ್ತದೆ.

ಶುಂಠಿಯನ್ನು ಸೇವಿಸುವುದರಿಂದ ವಾಕರಿಕೆ, ಬೆಳಗಿನ ಬೇನೆ ಮತ್ತು ಮಲ ಬದ್ಧತೆ ಸೇರಿದಂತೆ ಹೊಟ್ಟೆಯ ಇನ್ನಿತರ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಅಸ್ಥಿರತೆಯ ಭಾವನೆಗಳನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ, ಸಾಂಪ್ರದಾಯಿಕ ಔಷಧಿಗಳಿಗೆ ನೈಸರ್ಗಿಕ ಪರ್ಯಾಯವನ್ನು ನೀಡುತ್ತದೆ




ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ



# ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

ಹಾಗೂ

# ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ಪ್ರದಾನ ಸಮಾರಂಭ

ದಿನಾಂಕ : 07-10-2025, ಮಂಗಳವಾರ

## ಶ್ರೀ ಮಹರ್ಷಿ ವಾಲ್ಮೀಕಿ ಪ್ರತಿಮೆಗೆ ಮಾಲಾರ್ಪಣೆ

ಸಮಯ : ಬೆಳಿಗ್ಗೆ 10.00 ಗಂಟೆಗೆ
ಸ್ಥಳ : ಶ್ರೀ ಮಹರ್ಷಿ ವಾಲ್ಮೀಕಿ ತಪೋವನ, ಶಾಸಕರ ಭವನದ ಮುಂಭಾಗ

## ವೇದಿಕೆ ಕಾರ್ಯಕ್ರಮ

ಸಮಯ : ಬೆಳಿಗ್ಗೆ 10.30 ಗಂಟೆಗೆ
ಸ್ಥಳ : ಬ್ಯಾಂಕ್ವೆಟ್ ಹಾಲ್, ವಿಧಾನಸೌಧ, ಬೆಂಗಳೂರು

# ಸರ್ಕಾರದ ನಡೆ.. ಬುಡಕಟ್ಟು ಸಮುದಾಯಗಳ ಅಭಿವೃದ್ಧಿಯ ಕಡೆ...



ಶ್ರೀ ಸಿದ್ದರಾಮಯ್ಯ
ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

28 ತಿಂಗಳು

## ಪರಿಶಿಷ್ಟ ಪಂಗಡಗಳ ಕಲ್ಯಾಣಕ್ಕಾಗಿ ಟಿಎಸ್‌ಪಿ ಯೋಜನೆಯಡಿ 33,372.33 ಕೋಟಿ ಹಂಚಿಕೆ

### ಶೈಕ್ಷಣಿಕ ಅಭಿವೃದ್ಧಿ ಕಾರ್ಯಕ್ರಮಗಳು

- 8.66 ಲಕ್ಷ ವಿದ್ಯಾರ್ಥಿಗಳಿಗೆ ಒಟ್ಟು ರೂ. 410 ಕೋಟಿ ವಿದ್ಯಾರ್ಥಿ ವೇತನ
- 99,123 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಒಟ್ಟು ರೂ. 161.99 ಕೋಟಿ ಪ್ರೋತ್ಸಾಹ ಧನ
- 403 ಸಂಸ್ಥೆಗಳ ಮೂಲಕ 45,360 ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ
- ಪ್ರಬುದ್ಧ ಯೋಜನೆ (ವಿದೇಶಿ ವಿ.ವಿಗಳಲ್ಲಿ ಅಧ್ಯಯನ) - 109 ವಿದ್ಯಾರ್ಥಿಗಳಿಗೆ ರೂ. 39.00 ಕೋಟಿ ಸಹಾಯಧನ
- 34 ಹೊಸ ವಿದ್ಯಾರ್ಥಿ ನಿಲಯಗಳ ಸ್ಥಾಪನೆ
- 12ನೇ ತರಗತಿಯವರೆಗೆ 5 ಆಶ್ರಮ ಶಾಲೆಗಳ ಉನ್ನತೀಕರಣ
- ಖಾಸಗಿ ವಿದ್ಯಾಸಂಸ್ಥೆಗಳಲ್ಲಿ ಮ್ಯಾನೇಜ್‌ಮೆಂಟ್/ ಎನ್.ಆರ್.ಐ. ಕೋಟಾದಡಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಮರುಪಾವತಿ

### ಇಲಾಖೆಯ ಇತರೆ ಪ್ರಮುಖ ಕಾರ್ಯಕ್ರಮಗಳು

- ಪ್ರತ್ಯೇಕ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವಾಲಯ ಸ್ಥಾಪನೆ
- 12 ಬುಡಕಟ್ಟು ಸಮುದಾಯಗಳ 47,981 ಕುಟುಂಬಗಳಿಗೆ ಪೌಷ್ಠಿಕ ಆಹಾರ: ರೂ. 261 ಕೋಟಿ ವಿನಿಯೋಗ
- ವಸತಿ ರಹಿತ 12,286 ಬುಡಕಟ್ಟು ಕುಟುಂಬಗಳಿಗೆ ಮನೆ ಮಂಜೂರು
- ಕಾಲೋನಿ/ ಹಾಡಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ರೂ. 231 ಕೋಟಿ ಹಂಚಿಕೆ
- ವಾಲ್ಮೀಕಿ ಭವನ/ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ರೂ. 95 ಕೋಟಿ ಹಂಚಿಕೆ
- 5 ಜಿಲ್ಲೆಗಳಲ್ಲಿ ಟ್ರೈಬಲ್ ನ್ಯಾವಿಗೇಟರ್ ಕಾರ್ಯಕ್ರಮ ಜಾರಿ
- ಪರಿಶಿಷ್ಟ ಪಂಗಡದ 350 ಉದ್ಯಮಿಗಳಿಗೆ ರೂ. 34.50 ಕೋಟಿ ಬಡ್ಡಿ ಸಹಾಯಧನ
- ಎಸ್‌ಸಿಎಸ್‌ಪಿ/ ಟಿಎಸ್‌ಪಿ ಅಧಿನಿಯಮ 2013ರ ಸೆಕ್ಷನ್ 7(ಡಿ) ಅನ್ನು ಕೈಬಿಡಲಾಗಿದೆ
- ಗಂಗಾ ಕಲ್ಯಾಣ ಯೋಜನೆಯಡಿ 5,699 ಫಲಾನುಭವಿಗಳಿಗೆ ಕೊಳವೆಬಾವಿ ಸೌಲಭ್ಯ
- ಸ್ವಯಂ ಉದ್ಯೋಗಕ್ಕಾಗಿ ರೂ. 169.30 ಕೋಟಿ ಆರ್ಥಿಕ ನೆರವು
- ಮಹಿಳಾ ಸ್ವಸಹಾಯ ಸಂಘಗಳ 4,620 ಸದಸ್ಯರಿಗೆ ಕಿರುಸಾಲ ಸೌಲಭ್ಯ







ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಸ್ಥಿತಿ ಬೆಳೆಸಿಕೊಳ್ಳುವುದು.– ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/

ಸರ್ವರಿಗೂ ಸುಸ್ವಾಗತ

ಕರ್ನಾಟಕ ವಾರ್ತೆ

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು


Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**